ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೮

**ಪಟ್ಟಿ – ೧೯**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

ಮುಂದುವರೆದ ಉಪವೇಶನ

**ಶುಕ್ರವಾರ, ದಿನಾಂಕ : ೨೭ನೇ ಮಾರ್ಚ್, ೨೦೧೫**

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

F-1 B/B

## ಪ್ರವಾಸೋದ್ಯಮ ಕೇಂದ್ರಗಳು

**ಶ್ರೀ ಸಿ.ಹೆಚ್. ವಿಜಯಶಂಕರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೯೯ (೧೩೩೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು, ಚಾಮರಾಜನಗರ ಹಾಗೂ ಕೊಡುಗು ಜಿಲ್ಲೆಗಳಲ್ಲಿ ಅತೀ ಪ್ರಮುಖ ಪ್ರವಾಸಿ ತಾಣಗಳೆಂದು ಗುರುತಿಸಲಾಗಿರುವ ಪ್ರವಾಸಿ ಕೇಂದ್ರಗಳು ಯಾವುವು ; (ಮಾಹಿತಿ ಒದಗಿಸುವುದು)

(ಆ) ಈ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಅನುಕೂಲತೆ ದೃಷ್ಟಿಯಿಂದ ಒದಗಿಸಬೇಕಾದ ಮೂಲಭೂತ ಸೌಲಭ್ಯಗಳು ಹಾಗೂ ಅಗತ್ಯತೆಗಳ ಕೊರತೆಗಳ ಪಟ್ಟಿ ಮಾಡಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಇ) ಪ್ರವಾಸೋದ್ಯಮ ಇಲಾಖೆಯಿಂದ ಸದರಿ ಪ್ರವಾಸಿ ತಾಣಗಳಲ್ಲಿರುವ ಈ ಕೊರತೆಗಳನ್ನು ಸರಿಪಡಿಸಲು ಇಲಾಖೆ ಈವರೆಗೆ ಕೈಗೊಂಡಿರುವ ಕ್ರಮಗಳೇನು ; ಹಾಗೂ ಮುಂದಿನ ದಿನಗಳಲ್ಲಿ ಕೈಗೊಳ್ಳಲಿರುವ ಕ್ರಮಗಳ ವಿವರಗಳನ್ನು ಒದಗಿಸುವುದು ?

## ಬೀದರ್ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳಿಗೆ ಸಮವಸ್ತ್ರ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦೦ (೨೭೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಸರ್ವ ಶಿಕ್ಷಣ ಅಭಿಯಾನದ ಯೋಜನೆಯಡಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ೧ ರಿಂದ ೧೦ನೇ ತರಗತಿಯ

ಯಾವ ಯಾವ ವರ್ಗದ ವಿದ್ಯಾರ್ಥಿಗಳಿಗೆ ಸಮವಸ್ತ್ರಗಳನ್ನು ನೀಡಲಾಗಿದೆ ; ಪ್ರತಿ ಶಾಲೆಗಳಲ್ಲಿ ಎಷ್ಟು ಮಕ್ಕಳಿಗೆ ಮತ್ತು ಯಾವ ಯಾವ ವರ್ಗದ ಮಕ್ಕಳಿಗೆ ಒಟ್ಟು ಎಷ್ಟು ಸಮವಸ್ತ್ರಗಳನ್ನು ನೀಡಲಾಗಿದೆ ; (ಶಾಲೆಗಳವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ವಿದ್ಯಾರ್ಥಿಗಳ ಸಮವಸ್ತ್ರಕ್ಕೆ ಪ್ರತಿ ವರ್ಷ ತಗುಲಿದ ವೆಚ್ಚ ಎಷ್ಟು ; ಯಾವ ಯಾವ ಕಂಪನಿಗಳಿಗೆ ಸಮವಸ್ತ್ರಗಳನ್ನು ಸಿದ್ಧಪಡಿಸಲು ಗುತ್ತಿಗೆ ನೀಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕಾಲೇಜು ಉಪನ್ಯಾಸಕರ ಕೊರತೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦೧ (೨೭೩೪) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ ಕಾಲೇಜುಗಳ ಉಪನ್ಯಾಸಕರ ಮತ್ತು ಪ್ರಾಧ್ಯಾಪಕರ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಿದೆಯೇ ; ಯಾವ ಯಾವ ವಿಷಯದ ಎಷ್ಟು ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ;

(ಆ) ಇದಕ್ಕೆ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ ಹಾಗೂ ಅರ್ಜಿ ಶುಲ್ಕ ಎಷ್ಟು ; (ಭಾರಿ ಮೊತ್ತದ ಶುಲ್ಕ ವಿಧಿಸಲು ಕಾರಣಗಳೇನು)

(ಇ) ಇದು ಬಡ ನಿರುದ್ಯೋಗಿ ಅಭ್ಯರ್ಥಿಗಳಿಗೆ ದುಭಾರಿಯಾಗಲಿಲ್ಲವೇ ; ಇದನ್ನು ತಪ್ಪಿಸಿ ಸರಳೀಕೃತ ಅರ್ಜಿ ಪಡೆಯಲು ಸರ್ಕಾರಕ್ಕಿರುವ ತೊಂದರೆಗಳೇನು ; (ವಿವರ ಒದಗಿಸುವುದು)

(ಈ) ಕೇವಲ ಆನ್‌ಲೈನ್‌ನಲ್ಲಿ ಮಾತ್ರವೇ ಅರ್ಜಿ ಆಹ್ವಾನಿಸಲಾಗಿತ್ತೆ ; ನೇರ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸುವ ವ್ಯವಸ್ಥೆ ಇರಲಿಲ್ಲವೇ ; ಇದಕ್ಕೆ ಕಾರಣಗಳೇನು ; ಈಗಾಗಲೇ ಸದರಿ ಹುದ್ದೆಗಳ ಭರ್ತಿಗೆ ಬಂದಿರುವ ಅರ್ಜಿಗಳೆಷ್ಟು ; (ವಿಷಯುವಾರು ಮಾಹಿತಿ ನೀಡುವುದು)

(ಉ) ನೆಟ್–ಸ್ಲೆಟ್ ಪರೀಕ್ಷೆಗಳ ಫಲಿತಾಂಶ ಬಾರದೆ ಅರ್ಜಿ ಸಲ್ಲಿಸಲು ತೊಂದರೆಯಾಗಿರುವ ಅಭ್ಯರ್ಥಿಗಳಿಗೆ ಯಾವ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ ? (ವಿವರಗಳನ್ನು ಒದಗಿಸುವುದು)

## ಅಂಗನವಾಡಿಗಳಿಗೆ ಆಹಾರ ಸರಬರಾಜು ಟೆಂಡರ್

**ಶ್ರೀ ವೀರಕುಮಾರ ಅಪ್ಪಾಸೋ ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೦೨ (೨೭೩೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿನ ಅಂಗನವಾಡಿಗಳಿಗೆ ೨೦೧೪–೧೫ನೇ ಸಾಲಿಗೆ ಆಹಾರ ಸರಬರಾಜು ಮಾಡಲು ಯಾವ ದಿನಾಂಕದಂದು ಟೆಂಡರ್ ಕರೆಯಲಾಗಿದೆ ; ಇಲ್ಲಿಯವರೆಗೂ, ಈ ಟೆಂಡರ್ ಪ್ರಕ್ರಿಯೆ ಮುಗಿದಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಆ) ಈ ರೀತಿ ಟೆಂಡರ್ ಪ್ರಕ್ರಿಯೆಯನ್ನು ವಿಳಂಬಗೊಳಿಸಿ ಅಕ್ರಮವೆಸಗುವ ಹಿಂದಿನ ಗುತ್ತಿಗೆದಾರರಿಗೆ ಅನುಕೂಲ ಮಾಡಿಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ರೀತಿಯ ಅಕ್ರಮಕ್ಕೆ ಅನುವು ಮಾಡಿಕೊಡದೇ ಟೆಂಡರ್ ಪ್ರಕ್ರಿಯೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕುಡಿಯುವ ನೀರಿನ ಯೋಜನೆ

**ಶ್ರೀ ವೀರಕುಮಾರ ಅಪ್ಪಾಸೋ ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೦೩ (೨೭೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿ ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಬೇಡಿಕೆ ಹೆಚ್ಚು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶುದ್ಧ ನೀರಿನ ಘಟಕಕ್ಕೆ ತಗಲುವ ವೆಚ್ಚ ಎಷ್ಟು ?

## ಉಪನ್ಯಾಸಕರು ಮತ್ತು ಅರೆಕಾಲಿಕ ಉಪನ್ಯಾಸಕರ ಸೇವೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦೪ (೨೭೪೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪದವಿ ಕಾಲೇಜುಗಳಲ್ಲಿರುವ ಅತಿಥಿ ಉಪನ್ಯಾಸಕರ ಹಾಗೂ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು ; (ವಿವರಗಳನ್ನು ಜಿಲ್ಲಾವಾರು, ವಿಷಯವಾರು ಮಾಹಿತಿ ಒದಗಿಸುವುದು)

(ಆ) ಸದರಿಯವರು ಯಾವಾಗಿನಿಂದ ಸೇವೆಯಲ್ಲಿದ್ದಾರೆ ; ಇವರಿಗೆ ನೀಡುತ್ತಿರುವ ಗೌರವ ಧನ ಅಥವಾ ಸಂಭಾವನೆ ಎಷ್ಟು ;

(ಇ) ಇವರುಗಳನ್ನು ಸೇವೆಯಲ್ಲಿ ಖಾಯಂ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಖಾಯಂ ಮಾಡಲಾಗುವುದು ; ಖಾಯಂಮಾತಿಗೆ ಅನುಸರಿಸುವ ಮಾನದಂಡಗಳೇನು ;

(ಈ) ಸೇವೆಯಿಂದ ನಿವೃತ್ತರಾದ ಉಪನ್ಯಾಸಕ ಅಥವಾ ಬೋಧಕರನ್ನು ಈಗಾಗಲೇ ಇಂತಹ ಸೇವೆಗೆ ಪಡೆಯಲಾಗಿದೆಯೇ ;

(ಉ) ಇವರ ನೇಮಕಕ್ಕೆ ಇರುವ ಕಾನೂನು ತೊಂದರೆಗಳೇನು ; ಖಾಯಂ ಕೆಲಸಕ್ಕೆ ನೇರ ನೇಮಕಾತಿ ಮೂಲಕ ಬಂದ ನಂತರ ಇಂತಹವರ ಸ್ಥಿತಿಗತಿಗಳೇನು ಅಥವಾ ಈ ಸೇವೆ ಸಲ್ಲಿಸಿದವರಿಗೆ ಆಯ್ಕೆಯಲ್ಲಿ ಆದ್ಯತೆ ನೀಡಲಾಗುವುದೇ ? (ವಿವರ ನೀಡುವುದು)

## ವೈದ್ಯಕೀಯ ಶಿಕ್ಷಣ ಪ್ರವೇಶಾವಕಾಶಕ್ಕಿರುವ ಮಾನದಂಡಗಳು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦೫ (೨೭೫೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವೈದ್ಯ ಶಿಕ್ಷಣ ಪ್ರವೇಶಕ್ಕೆ ಅನುಸರಿಸುವ ಮಾನದಂಡ-ಮಾರ್ಗದರ್ಶಿಗಳು ಯಾವುವು ; ಇದರಲ್ಲಿ ರಾಜ್ಯದ ಸಿಇಟಿ ಹಾಗೂ ನ್ಯಾಷನಲ್ ಕೋಟಾ ಎಂದು ಪರಿಗಣಿಸುವ ಪದ್ಧತಿ ಜಾರಿಯಲ್ಲಿದೆಯೇ ;

(ಆ) ಸಿಇಟಿ ಸೀಟು ಪ್ರವೇಶಕ್ಕೂ ರಾಷ್ಟ್ರೀಯ ಕೋಟಾ ಪ್ರವೇಶಕ್ಕೂ ಇರುವ ವ್ಯತ್ಯಾಸಗಳೇನು ; ಈ ಎರಡು ಪ್ರವೇಶ ಪ್ರಕ್ರಿಯೆಗಳನ್ನು ಏಕಕಾಲದಲ್ಲಿ ಒಬ್ಬ ವಿದ್ಯಾರ್ಥಿಯು ಪಡೆಯಲು ಅವಕಾಶವಿದೆಯೇ ; ಇದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಇ) ಸಿಇಟಿ ಮೂಲಕ ಪ್ರವೇಶ ಪಡೆದಂತಹ ವೈದ್ಯ ವಿದ್ಯಾರ್ಥಿಗಳು ನಂತರ ನ್ಯಾಷನಲ್ ಕೋಟಾದಡಿ ಪ್ರವೇಶ ಪಡೆದು ಸಿಇಟಿ ಸೀಟು ಹಿಂದಿರುಗಿಸುತ್ತಿರುವ ಔಚಿತ್ಯವಾದರೂ ಏನು ;

(ಈ) ಇದರಿಂದಾಗಿ ಗ್ರಾಮೀಣ ಕಡ್ಡಾಯ ಸೇವೆಯಿಂದ ತಪ್ಪಿಸಿಕೊಳ್ಳಲು ವಿದ್ಯಾರ್ಥಿಗಳು ಹೂಡಿರುವ ಹೊಸ ತಂತ್ರ ಎಂಬುದು ಸರ್ಕಾರ ಗಮನಕ್ಕೆ ಬಂದಿದೆಯೇ ;

(ಉ) ಕೇಂದ್ರದ ಪ್ರವೇಶಕ್ಕೂ ಈ ನಿಯಮವನ್ನು ಕಡ್ಡಾಯ ಜಾರಿ ಮಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; ಕೇಂದ್ರಕ್ಕೆ ಮನವಿ ಮಾಡಲು ಸರ್ಕಾರ ಸಿದ್ಧವಿದೆಯೇ ; ಇಲ್ಲದಿದ್ದಲ್ಲಿ ಕಾರಣಗಳನ್ನು ತಿಳಿಸುವುದು ?

## ಬೆಳಗಾವಿಗೆ ಪುನಃ ವಿಮಾನಯಾನ ಪ್ರಾರಂಭ

**ಡಾ|| ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦೬ (೨೭೩೭) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕರ್ನಾಟಕದ ಹೆಬ್ಬಾಗಿಲು ಎಂದು ಪ್ರಸಿದ್ಧಿ ಪಡೆದ ಬೆಳಗಾವಿ ವಿಮಾನ ನಿಲ್ದಾಣದ ವಿಸ್ತರಣೆ ಆಗಿರದ ಕಾರಣ ವಿಮಾನಯಾನ

ಸೌಲಭ್ಯಗಳು ಇತ್ತೀಚೆಗೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವಿಶೇಷ ಆದ್ಯತೆ ಮೇರೆಗೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಪುನಃ ವಿಮಾನಯಾನ ಪ್ರಾರಂಭಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದೇ ?

## ಗ್ರಾಮೀಣ ಶಾಲಾ ಮಕ್ಕಳಿಗೆ ಟೆಲಿ-ಶಿಕ್ಷಣ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦೭ (೨೭೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾಹಿತಿ ತಂತ್ರಜ್ಞಾನ ಯುಗದಲ್ಲಿ ಗ್ರಾಮೀಣ ಭಾಗದ ಶಾಲಾ ಮಕ್ಕಳಿಗೆ ಟೆಲಿ-ಶಿಕ್ಷಣ ನೀಡಲಾಗುವುದೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ರಾಜ್ಯಾದ್ಯಂತ ಎಲ್ಲಾ ಗ್ರಾಮೀಣ ಶಾಲಾ ಮಕ್ಕಳಿಗೆ ವಿಸ್ತರಿಸಲಾಗುವುದೇ ;

(ಇ) ಪ್ರತಿಯೊಂದು ಶಾಲೆಯಲ್ಲಿ ಗಣಕಯಂತ್ರ ತರಬೇತಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದೆ ?

## ಉತ್ತರ ಕರ್ನಾಟಕದ ಕೊಳಗೇರಿಗಳ ಅಭಿವೃದ್ಧಿ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦೮ (೨೭೩೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕರ್ನಾಟಕದಲ್ಲಿನ ಕೊಳಗೇರಿ ನಿವಾಸಿಗಳು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದು, ಶೋಚನೀಯ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿಯವರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ ;

(ಇ) ೨೦೧೪ ಏಪ್ರಿಲ್ ಅಂತ್ಯಕ್ಕೆ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ?

## ಪ್ರವಾಸೋದ್ಯಮ ಇಲಾಖೆಯ ಯೋಜನೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೦೯ (೨೮೭೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವಾಸೋದ್ಯಮ ಇಲಾಖೆಯಿಂದ ಕಳೆದ ೨ ವರ್ಷಗಳಲ್ಲಿ ಅನುಷ್ಠಾನಗೊಂಡ ಜಿಲ್ಲಾವಾರು ಯೋಜನೆಗಳ/ಕಾರ್ಯಕ್ರಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರವಾಸೋದ್ಯಮ ಇಲಾಖೆಯ ಯೋಜನೆಗಳಿಗೆ ಕಳೆದ ೨ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಕರಾವಳಿ ಜಿಲ್ಲೆಯ ಸಮುದ್ರ ತೀರವೂ ಸೇರಿದಂತೆ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರ ಯಾವ ಕ್ರಮಕೈಗೊಂಡಿದೆ; (ಈ ಬಗ್ಗೆ ಸಂಪೂರ್ಣ ವಿವರ ನೀಡುವುದು)

(ಈ) ಕರಾವಳಿ ಜಿಲ್ಲೆಗಳಲ್ಲಿ ಕರಾವಳಿ ನಿಯಂತ್ರಣ ವಲಯದ ಸಮಸ್ಯೆಯಿಂದ ಪ್ರವಾಸೋದ್ಯಮ ಅಭಿವೃದ್ಧಿಗೆ

ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ ;

(ಉ) ಕರಾವಳಿ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಗ್ರಂಥಾಲಯಗಳಲ್ಲಿ ಗ್ರಂಥಪಾಲಕರ ಹುದ್ದೆ ನೇಮಕಾತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧೦ (೨೮೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ಜಿಲ್ಲಾ/ನಗರ/ತಾಲ್ಲೂಕು ಕೇಂದ್ರ ಗ್ರಂಥಾಲಯಗಳಲ್ಲಿ ಸಹ ಗ್ರಂಥಪಾಲಕರ ಹಾಗೂ ಗ್ರಂಥಾಲಯ ಸಹಾಯಕರ ಹುದ್ದೆ ಖಾಲಿ ಇರುವುದರಿಂದ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ವಿವಿಧ ಜಿಲ್ಲಾ/ನಗರ/ತಾಲ್ಲೂಕು ಕೇಂದ್ರ ಗ್ರಂಥಾಲಯಗಳಲ್ಲಿ ಸಹ ಗ್ರಂಥಪಾಲಕರ ಹಾಗೂ ಗ್ರಂಥಾಲಯ ಸಹಾಯಕರ ಹಾಗೂ ಇತರ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಮಾಡಲಾಗಿದೆಯೇ ; (ಹೌದಾದಲ್ಲಿ ವಿವರ ನೀಡುವುದು)

(ಈ) ಇಲ್ಲವಾದಲ್ಲಿ, ಈ ಬಗ್ಗೆ ಇರುವ ತೊಡಕುಗಳೇನು; ಯಾವಾಗ ನೇಮಕಾತಿ ಮಾಡುವುದು ?

# ಪಂಚಾಯತ್ ರಾಜ್ ನೌಕರರ ಖಾಯಂ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧೧ (೨೮೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಾವ ಯಾವ ಜಿಲ್ಲೆಗಳಲ್ಲಿ ತಾತ್ಕಾಲಿಕ ಗ್ರಾಮ ಪಂಚಾಯತ್‌ಗಳಲ್ಲಿ ನೌಕರರನ್ನು ಜಿಲ್ಲಾ ಪಂಚಾಯತ್ ಅನುಮೋದನೆ ನೀಡಿ ಖಾಯಂಗೊಳಿಸುವ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ; ಯಾವ ಯಾವ ಜಿಲ್ಲೆಗಳಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಿಲ್ಲ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಆ) ಈಗಾಗಲೇ ಕ್ಲರ್ಕ್ ಹುದ್ದೆ ಇರುವ ಪಂಚಾಯತ್‌ಗಳಲ್ಲಿನ ಕಂಪ್ಯೂಟರ್ ಆಪರೇಟರ್‌ಗಳಿಗೆ ಅನುಮೋದನೆ ನೀಡದೆ ಸಾವಿರಾರು ನೌಕರರು ಅತಂತ್ರರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಇ) ೨೦೧೪ಕ್ಕೂ ಮುಂಚೆ ಗ್ರಾಮ ಪಂಚಾಯತ್‌ಗಳಲ್ಲಿ ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸುತ್ತಿದ್ದ ಕಂಪ್ಯೂಟರ್ ಆಪರೇಟರ್‌ಗಳೂ ಸೇರಿ ಎಲ್ಲಾ ಪಂಚಾಯತ್ ನೌಕರರ ನೇಮಕಾತಿಗೆ, ವಿದ್ಯಾರ್ಹತೆ, ವಯಸ್ಸು, ರೋಸ್ಟರ್ ಸಡಿಲಿಕೆ ಮಾಡಿ ನೇಮಕಾತಿ ಹೊಂದಿದ ದಿನಾಂಕದಿಂದ ಅನ್ವಯವಾಗುವಂತೆ ಒಂದು ಸಲದ ಅನುಮೋದನೆ ನೀಡಿ ಗ್ರಾಮೀಣಾಭಿವೃದ್ಧಿಗಾಗಿ ದುಡಿಯುವ ಪಂಚಾಯತ್ ನೌಕರರ ಹಿತ ಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳಿಂದ ಕಟ್ಟಡ ಪರವಾನಿಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧೨ (೨೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚಿಗೆ ೩ ತಿಂಗಳಿನಿಂದ ರಾಜ್ಯದ ೫,೬೨೯ ಗ್ರಾಮ ಪಂಚಾಯತ್‌ಗಳು ಕಟ್ಟಡ ಪರವಾನಿಗೆಯನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೀಗೆ ಕಟ್ಟಡ ಪರವಾನಿಗೆಯನ್ನು ನೀಡದೆ ಬಾಕಿ ಉಳಿಸಿಕೊಂಡ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತಿ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಕಟ್ಟಡ ಪರವಾನಿಗೆ ನೀಡದೆ ಇದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಆರ್.ಟಿ.ಇ. ಪ್ರವೇಶಕ್ಕೆ ವಯೋಮಿತಿ ಇಳಿಕೆ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧೩ (೨೭೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿಕ್ಷಣ ಹಕ್ಕು ಕಾಯಿದೆ ರೀತ್ಯಾ ಶಾಲೆಗೆ ದಾಖಲಿಸುವ ಮಕ್ಕಳ ಕನಿಷ್ಠ ವಯೋಮಿತಿ ಎಷ್ಟು ; ಪ್ರೌಢ ಶಿಕ್ಷಣ ಮಂಡಳಿಯ ಎಸ್.ಎಸ್.ಎಲ್.ಸಿ., ಪರೀಕ್ಷೆ ಬರೆಯಲು ಕನಿಷ್ಠ ವಯೋಮಿತಿ ಎಷ್ಟು ;

(ಆ) ಕರ್ನಾಟಕ ಸರ್ಕಾರ ೨೦೧೫-೧೬ ನೇ ಸಾಲಿಗೆ ಆರ್.ಟಿ.ಇ., ಮಕ್ಕಳಿಗೆ ನಿಗದಿಪಡಿಸಿರುವ ಕನಿಷ್ಠ ವಯೋಮಿತಿ ಎಷ್ಟು ;

(ಇ) ಆರ್.ಟಿ.ಇ. ಕಾಯಿದೆಗೆ ಸೂಕ್ತ ತಿದ್ದುಪಡಿ ತರದೇ ಕಾಯ್ದೆ ಜಾರಿಗೆ ಬಂದಾಗಿನಿಂದ ಕನಿಷ್ಠ ವಯೋಮಿತಿಯನ್ನು ವ್ಯತ್ಯಾಸ ಮಾಡುತ್ತಿದ್ದು ಇದಕ್ಕೆ ಕಾನೂನು ಮಾನ್ಯತೆ ಇದೆಯೇ ;

(ಈ) ಕೇಂದ್ರದ ಮಾನವ ಸಂಪನ್ಮೂಲ ಇಲಾಖೆ ಇಂತಹ ವಿದ್ಯಾರ್ಥಿಗಳ ಶುಲ್ಕ ಭರಿಸಲು ಆಕ್ಷೇಪಿಸಿದಲ್ಲಿ ಅಥವಾ ಕೋರ್ಟ್ ಮೆಟ್ಟಿಲೇರಿ ವ್ಯತಿರಿಕ್ತ ಪರಿಣಾಮಗಳಾದಲ್ಲಿ ಬಡ ಪೋಷಕರ ಪರ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ರಾಜ್ಯ ಮಹಿಳಾ ಆಯೋಗ ೧೯೯೫ರ ಕಾಯ್ದೆಗೆ ನಿಯಮಗಳನ್ನು ರೂಪಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೧೪ (೨೦೩೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಮಹಿಳಾ ಆಯೋಗ ಕಾಯ್ದೆ ಜಾರಿ ಬಂದು ಎಷ್ಟು ವರ್ಷಗಳಾದವು ; ಸದರಿ ಆಯೋಗದಿಂದ ಈವರೆಗೆ ಇತ್ಯರ್ಥವಾದ ದೂರುಗಳೆಷ್ಟು; ಬಾಕಿ ಉಳಿದಿರುವ ದೂರುಗಳೆಷ್ಟು ;

(ಆ) ಮಹಿಳಾ ಆಯೋಗದ ಕಾಯ್ದೆಯಡಿ ಬರುವ ದೂರುಗಳನ್ನು ಬಗೆಹರಿಸಲು ನಿಯಮಗಳನ್ನು ರೂಪಿಸಲಾಗಿದೆಯೇ; ಇಲ್ಲದಿದ್ದಲ್ಲಿ ಯಾವಾಗ ರೂಪಿಸಲಾಗುವುದು; ನಿಯಮಗಳ ರಚನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೇಲೂರು ತಾಲ್ಲೂಕಿನ ಹಲ್ಮಿಡಿ ಗ್ರಾಮಕ್ಕೆ ಮೂಲ ಸೌಕರ್ಯ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧೫ (೨೭೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೇಲೂರು ತಾಲ್ಲೂಕಿನ ಹಲ್ಮಿಡಿ ಗ್ರಾಮದಲ್ಲಿ ಮೂಲ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಹಲ್ಮಿಡಿ ಗ್ರಾಮದಲ್ಲಿ ಅಂತರ್ಜಲ ಕುಸಿತದಿಂದ ಬೋರ್‌ವೆಲ್‌ಗಳು ಬತ್ತಿದ್ದು ಶುದ್ಧ ಕುಡಿಯುವ ನೀರನ್ನು ಹತ್ತಿರದ ಯಗಚಿ ಅಣೆಕಟ್ಟೆಯಿಂದ ಒದಗಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಹಲ್ಮಿಡಿ ಗ್ರಾಮದಲ್ಲಿ ಚರಂಡಿ ಮತ್ತು ಸಿಮೆಂಟ್ ರಸ್ತೆ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ನಾಗಪುರಿ ಅರಣ್ಯ ಪ್ರದೇಶವನ್ನು ಪ್ರವಾಸಿ ತಾಣವಾಗಿ ಮಾಡುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧೬ (೨೭೫೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಹಿರೇಕಲ್ ಗುಡ್ಡದ ನಾಗಪುರಿ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು; ಮತ್ತು ಇಲ್ಲಿರುವ ಐತಿಹಾಸಿಕ ಸ್ಮಾರಕಗಳಾವುವು ;

(ಆ) ನಾಗಪುರಿ ಅರಣ್ಯ ಪ್ರದೇಶದಲ್ಲಿ ಅಪೂರ್ವ ಔಷಧಿ ಸಸ್ಯರಾಶಿ, ಅನೇಕ ಪ್ರಸಿದ್ಧ ಐತಿಹಾಸಿಕ ಸ್ಮಾರಕಗಳು, ದೇವಾಲಯಗಳು, ಅದ್ಭುತ ಪ್ರಕೃತಿ ಸೌಂದರ್ಯವಿದ್ದು ಇದನ್ನು ಪ್ರವಾಸಿ ತಾಣವನ್ನಾಗಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಇ) ನಾಗಪುರಿ ಅರಣ್ಯದಲ್ಲಿರುವ ಶಿಥಿಲಿಗೊಂಡಿರುವ ಸ್ಮಾರಕಗಳಾದ ಟಿಪ್ಪುಕೋಟೆ, ಬ್ರಿಟಿಷ್ ಬಂಗಲೆ, ದೇವಾಲಯಗಳನ್ನು ರಕ್ಷಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ನಾಗಪುರಿ ಅರಣ್ಯದಿಂದ ಮರಳು ಸಾಗಿಸುವ ದಂದೆ ನಡೆಯುತ್ತಿದ್ದು ಇದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ;

(ಉ) ನಾಗಪುರಿ ಅರಣ್ಯದಲ್ಲಿರುವ ವನ್ಯ ಪ್ರಾಣಿಗಳನ್ನು ರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶೈಕ್ಷಣಿಕ ಸಂಸ್ಥೆಗಳಲ್ಲಿ ಮಹಿಳೆಯರ ಸುರಕ್ಷತೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ) :-**

೨೪೧೭ (೨೮೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಿಳೆಯರ ಸುರಕ್ಷತೆಗಾಗಿ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಕೆಗೆ ಹಣಕಾಸಿನ ಲಭ್ಯತೆ ಸಮಸ್ಯೆಯಾಗಿರುವುದು ನಿಜವೇ ;

(ಆ) ಆ ಶಾಲೆಗಳಲ್ಲಿ/ಕಾಲೇಜುಗಳಲ್ಲಿ ಇರುವ "ಸಂಚಿತನಿಧಿ" (R.R.FUND) ಯಿಂದ ಖರೀದಿಸಲು ಸರ್ಕಾರ ಅನುಮತಿಸುವುದೇ ?

## ಪ್ರವಾಸಿ ತಾಣಗಳಲ್ಲಿ ಶಾಲಾ ಮಕ್ಕಳಿಗೆ ಮೂಲಭೂತ ಸೌಲಭ್ಯಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ) :-**

೨೪೧೮ (೨೮೫೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರವಾಸಿ ತಾಣಗಳಲ್ಲಿ ಶಾಲಾ ಮಕ್ಕಳು ಶೈಕ್ಷಣಿಕ ಪ್ರವಾಸ ಸಂದರ್ಭದಲ್ಲಿ ಸಾಮೂಹಿಕ ವಸತಿ ಹಾಗೂ ಸ್ನಾನ ಶೌಚಾಲಯಗಳ ಸೌಲಭ್ಯಗಳು ಇರದೇ ಪರದಾಡುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕೆ ಸರ್ಕಾರದ ಯೋಜನೆ ಏನು ?

## ಶೇಕಡ ೦೩ ರ ಅನುದಾನದಲ್ಲಿ ಪದವಿ ಪೂರ್ವ ಉಪನ್ಯಾಸಕರಿಗೆ ಅನುದಾನ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ) ಮತ್ತು ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೧೯ (೨೭೪೧+೨೭೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶೇಕಡ ೦೩ ರ ಅನುದಾನದಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರಿಗೆ ಅನುದಾನಕ್ಕೊಳಪಡಿಸುವ ಪ್ರಕ್ರಿಯೆ ಆರಂಭಿಸಿದ ವರ್ಷ ಯಾವುದು; ಯಾವಾಗ ತಡೆಹಿಡಿಯಲಾಯಿತು; ತಡೆಹಿಡಿಯಲು ಕಾರಣ ಏನು ; (ವಿವರ ನೀಡುವುದು)

(ಆ) ಶೇಕಡ ೦೩ ರ ಅನುದಾನದಲ್ಲಿ ಅನುದಾನಕ್ಕೊಳಪಡಿಸುವ ಪ್ರಕ್ರಿಯೆ ತಡೆಹಿಡಿದ ನಂತರವೂ ಅನುದಾನಕ್ಕೆ ಒಳಪಡಿಸಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ; ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಅಂಗನವಾಡಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡುವುದು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ) :–**

೨೪೨೦ (೨೭೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಗನವಾಡಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡುವ ಯೋಜನೆ ಯಾವಾಗಿನಿಂದ ಜಾರಿಯಲ್ಲಿ ಇದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗೆ ಒದಗಿಸಿದ ಅನುದಾನದ ಮೊತ್ತವೆಷ್ಟು ;

(ಇ) ಯಾವ ಯಾವ ವಿಧವಾದ ಪೌಷ್ಟಿಕ ಆಹಾರ ಎಷ್ಟು ಪ್ರಮಾಣದಲ್ಲಿ ನೀಡಲಾಗುತ್ತಿದೆ ;

(ಈ) ಈ ಯೋಜನೆಯನ್ನು ಯಾವುದಾದರು ಏಜೆನ್ಸಿಗಳಿಗೆ ನೀಡಲಾಗಿದೆಯೆ ;

(ಉ) ಇದರಲ್ಲಿ ಯಾವುದಾದರು ದುರುಪಯೋಗ ಪ್ರಕರಣ ಬೆಳಕಿಗೆ ಬಂದಿದೆಯೆ ;

(ಊ) ಹಾಗಿದ್ದರೆ, ದುರುಪಯೋಗ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಎಸ್.ಎಸ್.ಎಲ್.ಸಿ., ಪ್ರವೇಶ ಪಡೆದ ವಿದ್ಯಾರ್ಥಿನಿಯರ ಸಂಖ್ಯೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ) :-**

೨೪೨೧ (೨೭೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸಕ್ತ ವರ್ಷ ಎಸ್.ಎಸ್.ಎಲ್.ಸಿ ಗೆ ಪ್ರವೇಶ ಪಡೆದ ಒಟ್ಟು ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಆ) ಪರೀಕ್ಷಾ ಅರ್ಜಿ ಭರ್ತಿ ಮಾಡಿದ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಇ) ಪ್ರವೇಶ ಪತ್ರ ಪಡೆದವರ ಸಂಖ್ಯೆ ಎಷ್ಟು ;

(ಈ) ಪ್ರೌಢ ಶಾಲಾ ಹಂತದಲ್ಲಿ ಶಾಲೆಯನ್ನು ಬಿಡುತ್ತಿರುವ ವಿದ್ಯಾರ್ಥಿಯರ ಸಂಖ್ಯೆ ಎಷ್ಟು ; (ಕಳೆದ ಎರಡು ವರ್ಷದ ಮಾಹಿತಿ ನೀಡುವುದು)

(ಉ) ಎಂಟನೇ ತರಗತಿಗೆ ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿನಿಯರ ಸಂಖ್ಯೆಗೂ, ಎಸ್.ಎಸ್.ಎಲ್.ಸಿ ಮುಗಿಯುವ ವೇಳೆಗೆ ಇರುವ ವಿದ್ಯಾರ್ಥಿನಿಯರ ಸಂಖ್ಯೆಗೂ ಇರುವ ವ್ಯತ್ಯಾಸ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಖಾಸಗಿ ಅನುದಾನಿತ ಶಾಲೆಗಳಲ್ಲಿನ ಖಾಲಿ ಹುದ್ದೆಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೨೨ (೨೮೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಖಾಸಗಿ ಅನುದಾನಿತ ಶಾಲೆಗಳಲ್ಲಿ ನಿವೃತ್ತಿ, ಮರಣ ಮತ್ತು ರಾಜೀನಾಮೆಗಳಿಂದ ತೆರವಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ರೀತಿಯಲ್ಲಿ ತೆರವಾಗಿರುವ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; (ವಿವರ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ವಿಶೇಷ ವರ್ಗದವರಿಗೆ ವಸತಿ ಸೌಕರ್ಯ ನೀಡುವ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೨೩ (೨೮೧೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಶೇಷ ವರ್ಗದವರಿಗೆ ವಸತಿ ಸೌಕರ್ಯ ನೀಡುವ ಸಲುವಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಸಮಿತಿಯು ಯೋಜನೆ ಅನುಷ್ಠಾನದ ಬಗ್ಗೆ ಸಭೆಗಳನ್ನು ನಡೆಸಿವೆಯೇ ; (ಹಾಗಿದ್ದಲ್ಲಿ ಜಿಲ್ಲಾವಾರು ಸಭಾ ನಡವಳಿ ನೀಡುವುದು)

(ಆ) ವಿಶೇಷ ವರ್ಗದವರಿಗೆ ವಸತಿ ಸೌಕರ್ಯ ನೀಡುವ ಸಲುವಾಗಿ ಆಯ್ಕೆ ಪಟ್ಟಿ ಮಾಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇದುವರೆವಿಗೂ ಈ ವಿಚಾರದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಶಾಲಾ ಶಿಕ್ಷಕರ ಸಮಸ್ಯೆಗಳ ಕುರಿತು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೨೪ (೨೭೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿಕ್ಷಕರ ಈ ಕೆಳಗಿನ ಸಮಸ್ಯೆಗಳ ನಿವಾರಣೆ ಕುರಿತು ಸರ್ಕಾರದ ನೀತಿ ಹಾಗೂ ಕ್ರಮಗಳೇನು ; ವರ್ಗಾವಣೆಗೆ ತರಲಿರುವ ಕಾನೂನಿನ ತಿದ್ದುಪಡಿ ಕುರಿತು ;

(ಆ) ಉಪನ್ಯಾಸಕರ / ಶಿಕ್ಷಕರ ವೇತನ ತಾರತಮ್ಯ ನಿವಾರಣೆ ಮಾಡಲು "ಕುಮಾರ ನಾಯಕ್" ಸಮಿತಿಯ ವರದಿಯನ್ನು ಜಾರಿ ತರುವ ಕುರಿತು ; (ವರದಿಯ ಪ್ರತಿ ನೀಡುವುದು)

(ಇ) ಸ್ನಾತಕೋತ್ತರ ಪದವಿ ಪಡೆದ ಪ್ರೌಢಶಾಲೆ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡುವ ಸಂಬಂಧ ಈ ಹಿಂದಿನ ೫೦:೫೦ ಹಾಗೂ ಹಿಂದಿನ ಅರ್ಹತಾ ನಿಯಮಾವಳಿಗಳನ್ನು ಅಳವಡಿಸಿಕೊಂಡು ಪದೋನ್ನತಿ ನೀಡುವ ಬಗ್ಗೆ ;

(ಈ) ಪದವಿ ಪೂರ್ವ ಉಪನ್ಯಾಸಕರಿಗೆ ಪದವಿ ಕಾಲೇಜುಗಳಿಗೆ ಪದೋನ್ನತಿ ಕೊಡುವ ಬಗ್ಗೆ ;

(ಉ) ಪ್ರೌಢ ಶಾಲೆಗಳಲ್ಲಿ ವಿಷಯವಾರು ಶಿಕ್ಷಕ : ವಿದ್ಯಾರ್ಥಿ ಅನುಪಾತವನ್ನು ೧:೭೦ ರಿಂದ ೧:೪೦ಗೆ ಇಳಿಸುವ ಬಗ್ಗೆ ;

(ಊ) ವಿಭಜನೆಗೊಂಡಿರುವ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರೌಢ ಶಾಲಾ ಮುಖ್ಯ ಗುರುಗಳ ಹುದ್ದೆ ಸೃಷ್ಠಿ ಮಾಡುವ ಬಗ್ಗೆ ;

(ಋ) ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಕರ ಹುದ್ದೆ ಸೃಷ್ಠಿ ಮಾಡುವ ಕುರಿತು ? (ಈ ಎಲ್ಲಾ ವಿಷಯಗಳ ಸಂಪೂರ್ಣ ವಿವರ ನೀಡುವುದು)

## ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ದಾಖಲಾತಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨೫ (೨೭೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ೧೦ ಮಕ್ಕಳಿಗಿಂತ ಕಡಿಮೆ ದಾಖಲಾತಿ ಆಗಿರುವ ಶಾಲೆಗಳೆಷ್ಟು; ದಾಖಲಾತಿ ಹೆಚ್ಚು ಮಾಡುವ ಸಂಬಂಧ ಮುಂದಿನ ಶೈಕ್ಷಣಿಕ ವರ್ಷಕ್ಕೆ ಸರ್ಕಾರ ಹಮ್ಮಿ ಕೊಂಡಿರುವ ಕಾರ್ಯ ಯೋಜನೆಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯತ್ತಿಗೊಂದು ಮಾದರಿ ಶಾಲೆ ಮಾಡುವ ಯೋಜನೆಯನ್ನು ಸರ್ಕಾರ ಕೈಗೊಂಡಿದೆಯೇ; ಹಾಗಿದ್ದಲ್ಲಿ, ಆ

ಮಾದರಿ ಶಾಲೆಯ ರಚನೆಯ ಸಂಬಂಧ ಸರ್ಕಾರದ ಪ್ರಕ್ರಿಯೆಗಳು ಯಾವ ಹಂತದಲ್ಲಿದೆ ; (ಮಾಹಿತಿಯನ್ನು ನೀಡಿ) ಈಗಾಗಲೇ ಮಾದರಿ ಶಾಲೆ ಆಯ್ಕೆಯಾಗಿದ್ದರೆ ಆ ಶಾಲೆಗಳ ಪಟ್ಟಿಯನ್ನು ಸವಿವರದೊಂದಿಗೆ ನೀಡುವುದು ?

## ಕೌಶಲ್ಯಾಭಿವೃದ್ಧಿ ತರಬೇತಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೨೬ (೨೭೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮೀಣ ಯುವಜನರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಸ್ವ-ಉದ್ಯೋಗಿಗಳನ್ನಾಗಿ ಮಾಡುವ "ರಾಜೀವ್ ಗಾಂಧಿ ಚೈತನ್ಯ ಯೋಜನೆ"ಯಡಿ ಇದುವರೆಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಎಷ್ಟು ಜನ ಯುವಜನರು ಈ ಯೋಜನೆಯಡಿ ಫಲಾನುಭವಿಗಳಾಗಿ ಸ್ವ-ಉದ್ಯೋಗಿಗಳಾಗಿದ್ದಾರೆ; ಯಾವ್ಯಾವ ವೃತ್ತಿಗಳಲ್ಲಿ ತರಬೇತಿ ಪಡೆದು ಪರಿಣಿತರಾಗಿದ್ದಾರೆ ; (ಸಂಪೂರ್ಣವಾದ ವಿವರ ನೀಡುವುದು)

(ಇ) ಪ್ರಸ್ತುತ ಯೋಜನೆ ಕುಂಟುತ್ತಾ ಸಾಗಲು ಕಾರಣಗಳೇನು ;

(ಈ) ಹಾಗಿದ್ದಲ್ಲಿ, ಸದರಿ ಯೋಜನೆಯನ್ನು ಕ್ರಿಯಾಶೀಲವಾಗಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

# ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೨೭ (೨೭೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ಗ್ರಾಮ ಪಂಚಾಯ್ತಿಗಳಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಕಳೆದ ೨ ವರ್ಷಗಳಿಂದ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಗ್ರಾಮ ಪಂಚಾಯ್ತಿವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯ ಗ್ರಾಮ ಪಂಚಾಯ್ತಿಗಳಿಗೆ ಏಪ್ರಿಲ್ ೨೦೦೫ ರಿಂದ ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ ಪ್ರಕರಣ ೨೦೬ ರಂತೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ಗ್ರಾಮ ಪಂಚಾಯ್ತಿವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯ ಗ್ರಾಮ ಪಂಚಾಯ್ತಿಗಳಿಗೆ ಕುಡಿಯುವ ನೀರಿನ ನಿರ್ವಹಣೆಗೆ ಸಂಬಂಧಿಸಿದಂತೆ ೨೦೧೦-೨೦೧೧ನೇ ಸಾಲಿನಿಂದ ಸದರಿ ದಿನದವರೆಗೆ ಗ್ರಾಮ ಪಂಚಾಯ್ತಿವಾರು ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ಮಾಹಿತಿ ನೀಡುವುದು)

# ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೨೮ (೨೭೪೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣಕ್ಕೆ ಸರ್ಕಾರ ಕೈಗೊಂಡಿರುವ ವಿವಿಧ ಯೋಜನೆಗಳಾವುವು; ಸದರಿ ಇಲಾಖೆಗೆ ನಿಗಧಿಗೊಳಿಸಿರುವ ಅನುದಾನ ಎಷ್ಟು ;

(ಆ) ಸದರಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪುನರ್ವಸತಿ ಕಾರ್ಯಕರ್ತರ ಸ್ಥಿತಿಗತಿ ತುಂಬಾ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಅವರಿಗೆ ನೀಡುತ್ತಿರುವ ಗೌರವಧನ ತೀರ ಕಡಿಮೆಯಿದ್ದು, ಅದರ ಹೆಚ್ಚಳ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ ; (ವಿವರವಾದ ಮಾಹಿತಿ ನೀಡಿ)

(ಇ) ಹಿರಿಯ ನಾಗರೀಕರಿಗೆ ನೀಡುತ್ತಿರುವ ಗುರುತಿನ ಚೀಟಿ ವ್ಯವಸ್ಥೆಯಲ್ಲಿ ಲೋಪದೋಷಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಕೈಗೊಂಡ ಕ್ರಮಗಳೇನು ?

## ಆರ್.ಎಂ.ಎಸ್.ಎ ಯೋಜನೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೨೪೨೯ (೨೭೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರ್.ಎಂ.ಎಸ್.ಎ ಯೋಜನೆಯಡಿಯಲ್ಲಿ ಕಳೆದ ಎರಡು ವರ್ಷಗಳಿಂದ ಮೈಸೂರು, ಹಾಸನ, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳಿಗೆ ಬಂದಿರುವ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಬಂದಿರುವ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗಿದೆ ; (ಜಿಲ್ಲಾವಾರು, ಕಾರ್ಯಕ್ರಮವಾರು ವಿವರ ನೀಡುವುದು)

(ಇ) ಅನುದಾನ ಉಪಯೋಗವಾಗದೇ ವಾಪಸ್ಸು ಹೋಗಿರುವುದು ನಿಜವೇ; ಎಷ್ಟು ಅನುದಾನ ವಾಪಸ್ಸಾಗಿದೆ ; ಇದಕ್ಕೆ ಕಾರಣಗಳೇನು; (ಜಿಲ್ಲಾವಾರು ವಿವರ ನೀಡುವುದು)

(ಈ) ಮುಂದಿನ ಸಾಲಿಗೆ ಎಷ್ಟು ಮೊತ್ತಕ್ಕೆ ಬೇಡಿಕೆ ಸಲ್ಲಿಸಲಾಗಿದೆ ? (ವಿವರ ನೀಡುವುದು)

## ಸಿ.ಬಿ.ಎಸ್.ಇ. ಗೆ ಸಮನಾದ ಪಠ್ಯಕ್ರಮ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೨೪೩೦ (೨೭೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿ.ಬಿ.ಎಸ್.ಇ. ಗೆ ಸಮನಾದ ಪಠ್ಯಕ್ರಮವನ್ನು ಯಾವ ಯಾವ ತರಗತಿಗೆ ಜಾರಿಯಾಗಿದೆ; ಇದಕ್ಕಾಗಿ ಸಂಬಂದಿಸಿದಂತೆ ಕಳೆದ

ಮೂರು ವರ್ಷಗಳಲ್ಲಿ ಯಾವ ಯಾವ ಹಂತದಲ್ಲಿ ಯಾವ ಯಾವ ವಿಷಯದ ಶಿಕ್ಷಕರಿಗೆ ತರಬೇತಿ ನಡೆಸಿದೆ ; (ಪಾಲ್ಗೊಂಡ ಶಿಕ್ಷಕರ ಸಂಖ್ಯೆ, ದಿನಾಂಕ, ಸ್ಥಳ, ಮುಂತಾದ ವಿವರವನ್ನು ಜಿಲ್ಲಾವಾರು ನೀಡುವುದು)

(ಆ) ಇದೇ ತರಬೇತಿಯನ್ನು ಅನುದಾನ ರಹಿತ ಪ್ರಾಥಮಿಕ, ಪ್ರೌಢ, ಪದವಿಪೂರ್ವ ಕಾಲೇಜುಗಳ ಶಿಕ್ಷಕರಿಗೆ ನೀಡಲಾಗಿದೆಯೇ ; ನೀಡಲಾಗಿದ್ದಲ್ಲಿ, ಜಿಲ್ಲಾವಾರು ವಿವರ ನೀಡುವುದು ; ನೀಡದಿದ್ದಲ್ಲಿ, ಕಾರಣ ಮತ್ತು ಸ್ಪಷ್ಟನೆ ನೀಡುವುದು ?

## ವಿಶ್ವವಿದ್ಯಾಲಯಗಳಲ್ಲಿ ರಿಜಿಸ್ಟ್ರಾರ್ ಹುದ್ದೆಗೆ ನೇಮಕಾತಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೨೪೩೧ (೨೭೪೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಹಲವಾರು ವಿಶ್ವವಿದ್ಯಾಲಯಗಳಲ್ಲಿ ರಿಜಿಸ್ಟ್ರಾರ್ ಹುದ್ದೆಗಳಿಗೆ ಪ್ರಾಧ್ಯಪಕರನ್ನೇ ನೇಮಿಸಿರುವುದರಿಂದ ಆಡಳಿತದಲ್ಲಿ ನ್ಯೂನ್ಯತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಿಜಿಸ್ಟ್ರಾರ್ ಹುದ್ದೆಗಳಿಗೆ ಐ.ಎ.ಎಸ್. ಅಥವಾ ಹಿರಿಯ ಕೆ.ಎ.ಎಸ್. ಅಧಿಕಾರಿಗಳನ್ನು ನಿಯೋಜಿಸುವ ಬಗ್ಗೆ ಸರ್ಕಾರ ಯೋಜಿಸಿದೆಯೇ ?

## ವಿರಾಜಪೇಟೆ ತಾಲ್ಲೂಕಿನ ಕೂಟಿಯಾಲ ಸೇತುವೆ ಬಗ್ಗೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೩೨ (೨೭೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ವಿರಾಜಪೇಟೆ ತಾಲ್ಲೂಕಿನ ಬಿ.ಶೆಟ್ಟಿಗೇರಿ ಗ್ರಾಮದ ಕೂಟಿಯಾಲಾ ಸೇತುವೆ ನಿರ್ಮಾಣಕ್ಕೆ ತಗುಲಿದ ಒಟ್ಟು ವೆಚ್ಚವೆಷ್ಟು; ಸದರಿ ಕಾಮಗಾರಿಯು ಪೂರ್ಣಗೊಂಡಿದ್ದು ಯಾವಾಗ ;

(ಆ) ಸದರಿ ಸೇತುವೆಗೆ ಸಂಪರ್ಕ ರಸ್ತೆ ನಿರ್ಮಾಣ ಇಂದಿಗೂ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಸದರಿ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## " ಅಮ್ಮನ್ ಘೋಷಣೆ "

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-**

೨೪೩೩ (೨೭೫೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಂತರರಾಷ್ಟ್ರೀಯ ಮಟ್ಟದಲ್ಲಿ ಮಾನವ ಹಕ್ಕುಗಳ ಆಯೋಗವು ಆಯೋಜಿಸಿದಂತಹ "ಅಮ್ಮನ್ ಘೋಷಣೆ" ಹಾಗೂ ಕಾರ್ಯಕ್ರಮದಲ್ಲಿ ತೆಗೆದುಕೊಂಡ ನಿರ್ಧಾರಗಳು ಯಾವುವು ;

(ಆ) ಈ ಘೋಷಣೆ ಮತ್ತು ನಿರ್ಧಾರಗಳನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗುತ್ತಿದೆಯೇ ? (ವಿವರಗಳನ್ನು ನೀಡುವುದು)

## ಅರೆಕಾಲಿಕ ಉಪನ್ಯಾಸಕರು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೪೩೪ (೨೭೬೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ೧೯೯೩-೧೯೯೪ ಮತ್ತು ೧೯೯೪-೧೯೯೫ನೇ ಸಾಲಿನಲ್ಲಿ ಪ್ರವರ್ಗ-೧ಕ್ಕೆ ಸೇರಿದ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದವರ ಸಂಖ್ಯೆ ಎಷ್ಟು ; (ವಿಷಯ ಹಾಗೂ ಕಾಲೇಜುವಾರು ವಿವರ ನೀಡುವುದು)

(ಆ) ೧೯೯೩-೧೯೯೪ ಮತ್ತು ೧೯೯೪-೧೯೯೫ನೇ ಸಾಲಿನಲ್ಲಿ ಮಾತ್ರ ಒಂದು ವರ್ಷ ಅವಧಿಗೆ ಅರೆಕಾಲಿಕ ಉಪನ್ಯಾಸಕರಿಗೆ ಸೇವೆ ಸಲ್ಲಿಸಿದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ನಿಯಮ ತಿದ್ದುಪಡಿ ಮಾಡಿ ಒಂದು ವರ್ಷ ಸೇವಾ ರಿಯಾಯಿತಿ ನೀಡಿ ನೇಮಕ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ವಿವರ ನೀಡುವುದು ;

(ಇ) ಪ್ರವರ್ಗ-೧ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ನೀಡಿರುವ ಒಂದು ವರ್ಷದ ಸೇವಾ ರಿಯಾಯಿತಿಯನ್ನು ನೀಡಿ, ಇವರಿಗೂ ಅನ್ವಯವಾಗುವಂತೆ ನೇಮಕಾತಿ ಮಾಡಲು ಇರುವ ತೊಂದರೆಗಳೇನು ; (ವಿವರ ನೀಡುವುದು)

(ಈ) ೧೯೯೩-೧೯೯೪ ಮತ್ತು ೧೯೯೪-೧೯೯೫ರಲ್ಲಿ ಸೇವೆ ಸಲ್ಲಿಸಿದ ಪ್ರವರ್ಗ-೧ಕ್ಕೆ ಸೇರಿದ ಅಭ್ಯರ್ಥಿಗಳ ವಯೋಮಿತಿ ಮೀರಿರುವುದರಿಂದ ಇವರಿಗೂ ಸಾಮಾಜಿಕ ನ್ಯಾಯ ಒದಗಿಸಿ, ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ ವಿವರ ನೀಡುವುದು ;

(ಉ) ಬೆರಳಣಿಕೆಯಷ್ಟು ಪ್ರವರ್ಗ-೧ರ ಅಭ್ಯರ್ಥಿಗಳು ಹಾಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಹಾಗೂ ವಯೋಮಿತಿ ಮೀರಿರುವುದರಿಂದ ಈ ಅಭ್ಯರ್ಥಿಗಳನ್ನು ನೇಮಕಾತಿ ಮಾಡಲು ಸರ್ಕಾರ ಆದೇಶಿಸುವುದೇ ? (ವಿವರ ನೀಡುವುದು)

## ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು ದುರಸ್ತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೪೩೫ (೨೮೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ಕೊಡುವುದು)

(ಆ) ಈ ಶಾಲೆಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಶಾಲೆಗಳು ಎಷ್ಟು ;

(ಇ) ಈ ಶಾಲೆಗಳಲ್ಲಿ ದುರಸ್ತಿ ಮಾಡಬೇಕಾದ ಶಾಲೆಗಳ ಸಂಖ್ಯೆ ಎಷ್ಟು ;

(ಈ) ಈ ಶಾಲೆಗಳ ದುರಸ್ತಿಗೆ ೨೦೧೪-೧೫ನೇ ಸಾಲಿನಲ್ಲಿ ಖರ್ಚು ಮಾಡಿದ ಅನುದಾನ ಎಷ್ಟು ?

# ಅನಧಿಕೃತ ಶಾಲೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೪೩೬ (೨೭೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಶಾಲೆಗಳನ್ನು ಅನಧಿಕೃತ ಶಾಲೆಗಳೆಂದು ಘೋಷಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಹಾಗೂ ಶಾಲಾವಾರು ಮಾಹಿತಿ ನೀಡುವುದು)

(ಆ) ಅನಧಿಕೃತ ಶಾಲೆಗಳೆಂದು ಶಿಕ್ಷಣ ಇಲಾಖೆ ಘೋಷಿಸಿದ ನಂತರ ಈ ಶಾಲೆಗಳನ್ನು ಆರ್.ಟಿ.ಇ. ಅಡಿ ನೆರೆಹೊರೆಯ ಶಾಲೆಗಳೆಂದು ಪರಿಗಣಿಸಲಾಗಿದೆಯೇ ;

(ಇ) ಪರಿಗಣಿಸಿದ್ದಲ್ಲಿ, ಇದು ಇಲಾಖೆಯು ದ್ವಂದ್ವ ನೀತಿಯನ್ನು ಅನುಸರಿಸಿದಂತಾಗುವುದಿಲ್ಲವೇ ;

(ಈ) ಅನಧಿಕೃತ ಶಾಲೆಗಳೆಂದು ಘೋಷಿಸಲ್ಪಟ್ಟ ಶಾಲೆಗಳು ಈ ನಿಲುವಿನಿಂದ ಅಧಿಕೃತ ಶಾಲೆಗಳಾಗುವುದು ನಿಜವೇ ;

(ಉ) ಅನಧಿಕೃತ ಹಾಗೂ ಅಧಿಕೃತ ಶಾಲೆಗಳ ಬಗ್ಗೆ ದ್ವಂದ್ವ ನಿಲುವನ್ನು ಇಲಾಖೆ ಹೊಂದಿರುವುದರಿಂದ ಪಾಲಕರು ಹಾಗೂ ವಿದ್ಯಾರ್ಥಿಗಳು ಈ ಶಾಲೆಗಳಲ್ಲಿ ಆರ್.ಟಿ.ಇ. ಅಡಿ ಸೀಟು ಪಡೆದರೆ ಮುಂದೆ ತೊಂದರೆಯಾಗುವುದಿಲ್ಲವೇ ;

(ಊ) ಅನಧಿಕೃತ ಶಾಲೆಗಳು ಇಲಾಖೆಯಿಂದ ಅಧಿಕೃತ ಶಾಲೆಗಳೆಂದು ಮಾನ್ಯತೆ ಪಡೆಯದಿದ್ದಲ್ಲಿ ಇದಕ್ಕೆ ಯಾರು ಹೊಣೆ ;

(ಋ) ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅನುದಾನರಹಿತ ಕಾಲೇಜುಗಳಿಗೆ ಅನುದಾನ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೪೩೭ (೨೭೬೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪ್ರಥಮ ದರ್ಜೆ ಅನುದಾನರಹಿತ ಕಾಲೇಜುಗಳೆಷ್ಟು ; [ಅವು ಪ್ರಾರಂಭವಾದ ದಿನಾಂಕ, ಸ್ಥಳ, ಜಿಲ್ಲೆ (ಸವಿಸ್ತಾರ ಮಾಹಿತಿಯೊಂದಿಗೆ)]

(ಆ) ಎಸ್.ಇ./ಎಸ್.ಟಿ. ಆಡಳಿತ ಮಂಡಳಿಯವರು ನಡೆಸುತ್ತಿರುವ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನವನ್ನು ಎಲ್ಲಿಂದ ಎಲ್ಲಿಯವರೆಗೆ ವಿಸ್ತರಿಸಲಾಗಿದೆ ; (ಅವುಗಳ ಹೆಸರು, ಜಿಲ್ಲೆ ಮತ್ತು ಯಾವ ದಿನಾಂಕದಿಂದ ವಿಸ್ತರಿಸಲಾಗಿದೆ ;

(ಇ) ರಾಜ್ಯದಲ್ಲಿಯ ಅನುದಾನ ರಹಿತ ಪ್ರಥಮ ದರ್ಜೆ ಸಾಮಾನ್ಯ ವರ್ಗದ ಆಡಳಿತ ಮಂಡಳಿಗಳಿಂದ ಪ್ರಾರಂಭವಾದ ಸಂಸ್ಥೆಗಳಿಗೆ ಅನುದಾನವನ್ನು ವಿಸ್ತರಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ?

## ಸಿ.ಸಿ.ಟಿ.ವಿ ಅಳವಡಿಕೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೪೩೮ (೨೭೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಆಯಕಟ್ಟಿನ ಸ್ಥಳಗಳಲ್ಲಿ ಹಾಗೂ ಕ್ಲಾಸ್ ರೂಂಗಳಲ್ಲಿ ಕಡ್ಡಾಯವಾಗಿ ಸಿ.ಸಿ.ಟಿ.ವಿ.ಗಳನ್ನು ಅಳವಡಿಸಲು ಸರ್ಕಾರ ಯಾವ ದಿನಾಂಕದಂದು ಆದೇಶ ಹೊರಡಿಸಿದೆ ;

(ಆ) ಈ ಆದೇಶ ಹೊರಡಿಸಿದ ನಂತರ ರಾಜ್ಯದಲ್ಲಿ ಎಷ್ಟು ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಆಯುಕಟ್ಟಿನ ಸಂಸ್ಥೆಗಳಲ್ಲಿ ಹಾಗೂ ಕ್ಲಾಸ್ ರೂಂಗಳಲ್ಲಿ ಸಿ.ಸಿ.ಟಿ.ವಿ.ಗಳನ್ನು ಅಳವಡಿಸಲಾಗಿದೆ ; (ರಾಜ್ಯದ ಎಲ್ಲಾ ಶಾಲೆಗಳಲ್ಲಿ ಅಳವಡಿಸಿದ ಸಿ.ಸಿ.ಟಿ.ವಿ.ಗಳ ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಸಿ.ಸಿ.ಟಿ.ವಿ ಅಳವಡಿಕೆಯನ್ನು ಕಡ್ಡಾಯಗೊಳಿಸಿದ್ದರಿಂದ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬೀಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಖಾಸಗಿ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಸಿ.ಸಿ.ಟಿ.ವಿ.ಗಳನ್ನು ಅಳವಡಿಸಲು ಸರ್ಕಾರ ಆರ್ಥಿಕ ನೆರವು ನೀಡಲಿದೆಯೇ ;

(ಉ) ಸರ್ಕಾರಿ ಶಾಲೆಗಳಲ್ಲಿ ಕಡ್ಡಾಯವಾಗಿ ಸಿ.ಸಿ.ಟಿ.ವಿ. ಅಳವಡಿಸಲು ೨೦೧೫-೨೦೧೬ನೇ ಸಾಲಿನ ಆಯವ್ಯಯದಲ್ಲಿ ಅನುದಾನ ಒದಗಿಸಲು ಉದ್ದೇಶಿಸಿದೆಯೇ ;

(ಊ) ಹಾಗಿದ್ದಲ್ಲಿ, ಒದಗಿಸಲು ಉದ್ದೇಶಿಸಿರುವ ಅನುದಾನದ ಮೊತ್ತ ಎಷ್ಟು ?

## ಜೀತದಾಳುಗಳ ಬಿಡುಗಡೆ ಮತ್ತು ಪುನರ್ವಸತಿ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೩೯ (೧೬೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಜೀತದಾಳುಗಳ ಸಮೀಕ್ಷೆಯನ್ನು ಯಾವಾಗ ನಡೆಸಲಾಗಿದೆ ; ಜೀತದಾಳುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಜೀತದಾಳು ನಿರ್ಮೂಲನೆಗೆ ಇರುವ ನಿರ್ದೇಶನಗಳು ಯಾವುವು; (ವಿವರ ನೀಡುವುದು) ಜೀತದಾಳುಗಳ ಸಮೀಕ್ಷೆ ಈ ನಿರ್ದೇಶನಗಳ ಪ್ರಕಾರ ಮಾಡಲಾಗುತ್ತಿದೆಯೇ ;

(ಇ) ಜೀತದಾಳುಗಳ ಬಿಡುಗಡೆ ಮತ್ತು ಪುನರ್ವಸತಿಗೊಳಿಸಲು ಏನಾದರೂ ಕ್ರಿಯಾ ಯೋಜನೆ ಸಿದ್ಧಪಡಿಸಿದೆಯೇ ; ಹಾಗಿದ್ದಲ್ಲಿ, ಈ ಕ್ರಿಯಾ ಯೋಜನೆ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆಯೇ;

(ಈ) ರಾಜ್ಯದಲ್ಲಿ ಎಷ್ಟು ಜೀತದಾಳುಗಳು ಬಿಡುಗಡೆ ಮತ್ತು ಪುನರ್ವಸತಿಗಾಗಿ ಅರ್ಜಿ ಸಲ್ಲಿಸಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಅರ್ಜಿ ಸಲ್ಲಿಸಿದ ಎಷ್ಟು ಜೀತದಾಳುಗಳನ್ನು ಬಿಡುಗಡೆಗೊಳಿಸಿ, ಪುನರ್ವಸತಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಊ) ಅರ್ಜಿ ಸಲ್ಲಿಸಿದ ಎಷ್ಟು ಜೀತದಾಳುಗಳಿಗೆ ಇನ್ನು ಬಿಡುಗಡೆಗೊಳಿಸಿ, ಪುನರ್ವಸತಿ ಕಲ್ಪಿಸಬೇಕಾಗಿದೆ; ಈ ಕ್ರಮವನ್ನು ಯಾವ ಕಾಲಮಿತಿಯಲ್ಲಿ ಕೈಗೊಳ್ಳಲಾಗುತ್ತದೆ ? (ವಿವರ ನೀಡುವುದು)

## ಹಣಕಾಸು ಆಯೋಗದಿಂದ ರಾಜ್ಯಕ್ಕೆ ಬಿಡುಗಡೆಯಾದ ಅನುದಾನ

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೪೦ (೨೭೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೩ನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಎಷ್ಟು ಹಣ ಬಿಡುಗಡೆಗೊಂಡಿದೆ; ಬಿಡುಗಡೆಯಾಗಬೇಕಾದ ಹಣ ಎಷ್ಟು ;

(ಆ) ಬಿಡುಗಡೆಗೊಂಡ ಹಣದಲ್ಲಿ ಇದುವರೆಗೆ ವೆಚ್ಚ ಮಾಡಿರುವ ಮೊತ್ತವೆಷ್ಟು ; ವೆಚ್ಚ ಮಾಡದಿರುವ ಮೊತ್ತವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಳ್ಳಾರಿ ಜಿಲ್ಲೆಯಲ್ಲಿ ಇನ್ನೂ ಫ್ಲೋರೈಡ್‌ಯುಕ್ತ ಗ್ರಾಮಗಳು ಎಷ್ಟು ಇವೆ ; ಫ್ಲೋರೈಡ್ ಮತ್ತು ಇತರೆ ಕಾರಣಗಳಿಂದ ಕುಡಿಯುವ ನೀರಿನ ಸೌಲಭ್ಯವಿಲ್ಲದ ಗ್ರಾಮಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಫ್ಲೋರೈಡ್ ಮುಕ್ತ ಗ್ರಾಮವನ್ನಾಗಿ ಮಾಡಲು ಮತ್ತು ಇನ್ನಿತರ ಕಾರಣಗಳಿಂದ ಕುಡಿಯುವ ನೀರಿನ ಸೌಲಭ್ಯ ವಂಚಿತ ಗ್ರಾಮಗಳಿಗೆ ಕುಡಿಯುವ ನೀರು ಒದಗಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೪೧ (೨೭೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿ "ಭಾಗ್ಯಲಕ್ಷ್ಮಿ ಬಾಂಡ್"ಗಾಗಿ ಬಂದಿರುವ ಅರ್ಜಿಗಳೆಷ್ಟು ; ಎಷ್ಟು ಬಾಂಡ್‌ಗಳನ್ನು ವಿತರಿಸಲಾಗಿದೆ; ಬಾಕಿ ಉಳಿದ ಬಾಂಡ್‌ಗಳನ್ನು ಯಾವಾಗ ವಿತರಿಸಲಾಗುವುದು;

(ಆ) ಭಾಗ್ಯಲಕ್ಷ್ಮಿ ಬಾಂಡ್‌ಗಾಗಿ ಮದುವೆ ದೃಢೀಕರಣ ಪತ್ರ ಕಡ್ಡಾಯಗೊಳಿಸಲಾಗಿದ್ದು, ಇದರ ಅವಶ್ಯಕತೆ ಇದೆಯೇ; ಇದರಿಂದಾಗಿ ಫಲಾನುಭವಿಗಳಿಗೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಫಲಾನುಭವಿಗಳಿಗೆ ತೊಂದರೆಯಾಗದಂತೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸೌಲಭ್ಯ ವಂಚಿತ ಕೂಡ್ಲಿಗಿಯ ತಾಂತ್ರಿಕ ಕಾಲೇಜು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೪೨ (೨೭೬೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆ ಕೂಡ್ಲಿಗಿ ಪಟ್ಟಣದಲ್ಲಿರುವ ತಾಂತ್ರಿಕ ಕಾಲೇಜು ಕಲ್ಯಾಣ ಮಂಟಪದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ತಾಂತ್ರಿಕ ಕಾಲೇಜಿನ ವಿದ್ಯಾರ್ಥಿಗಳು ಅಗತ್ಯ ಸೌಲಭ್ಯವಿಲ್ಲದೆ, ತೊಂದರೆಗೀಡಾಗಿರುವುದು ನಿಜವೇ ;

(ಇ) ಕಾಲೇಜಿನಲ್ಲಿರುವ ಬೋಧಕ ಮತ್ತು ಬೋಧಕೇತರರ ಒಟ್ಟು ಸಂಖ್ಯೆ ಎಷ್ಟು; ಪ್ರಸಕ್ತ ಅಲ್ಲಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಈ) ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ಸರ್ಕಾರದಿಂದ ನಿರ್ಲಕ್ಷ್ಯಕ್ಕೆ ಒಳಗಾಗಿರುವ ಈ ಕಾಲೇಜುಗಳಿಗೆ ಅಗತ್ಯ ಸೌಲಭ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಜ್ಯದಲ್ಲಿನ ಜೀತದಾಳುಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪೩ (೨೮೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜೀತಪದ್ಧತಿ ರದ್ದು ಕಾನೂನು ಯಾವಾಗ ಅಸ್ತಿತ್ವಕ್ಕೆ ಬಂದಿರುತ್ತದೆ ;

(ಆ) ರಾಜ್ಯದಲ್ಲಿರುವ ಒಟ್ಟು ಜೀತದಾಳುಗಳ ಸಂಖ್ಯೆ ಎಷ್ಟು ;

(ಇ) ಜೀತದಿಂದ ವಿಮುಕ್ತಿಗೊಂಡವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಜೀತ ಪದ್ಧತಿಯಿಂದ ವಿಮುಕ್ತಿಗೊಂಡವರಿಗೆ ಯಾವ ಯಾವ ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆ ;

(ಉ) ರಾಜ್ಯದ ಜಿಲ್ಲಾವಾರು ಜೀತ ವಿಮುಕ್ತಿಗೊಂಡಿರುವರ ಪಟ್ಟಿ ಮತ್ತು ಅವರಿಗೆ ಯಾವ ರೀತಿಯ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದಾರೆ ಎಂಬ ಬಗ್ಗೆ ವಿವರ ನೀಡುವುದು ?

## ವಿಶೇಷ ಘಟಕ ಯೋಜನೆಯ ಅಡಿ ಟ್ಯಾಕ್ಸಿ ವಿತರಣೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪೪ (೨೭೫೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರವಾಸೋದ್ಯಮ ಇಲಾಖೆಯಿಂದ ವಿಶೇಷ ಘಟಕ ಯೋಜನೆ (ಎಸ್.ಸಿ.ಪಿ–ಟಿ.ಎಸ್.ಪಿ) ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸಬ್ಸಿಡಿ ಆಧಾರದ ಮೇಲೆ ಟ್ಯಾಕ್ಸಿ ಕೊಡುವ ಕಾರ್ಯಕ್ರಮ ಜಾರಿಯಲ್ಲಿದೆಯೇ ;

(ಆ) ಈ ಕಾರ್ಯಕ್ರಮ ಯಾವ ಸಾಲಿನಿಂದ ಜಾರಿಯಲ್ಲಿದೆ ;

(ಇ) ಈ ಕಾರ್ಯಕ್ರಮದಡಿಯಲ್ಲಿ ಆರಂಭದಿಂದ ವರ್ಷಾವಾರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಿರುವ ಪ್ರವಾಸಿ ಟ್ಯಾಕ್ಸಿಗಳೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ರಸ್ತೆ ಕಾಮಗಾರಿಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೪೫ (೨೭೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಯೋಜನೆಯಡಿಯಲ್ಲಿ ಯಾವ ಯಾವ ರಸ್ತೆಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ; (ತಾಲ್ಲೂಕುವಾರು ಮತ್ತು ವರ್ಷವಾರು ವಿವರ ನೀಡುವುದು) ;

(ಆ) ಇದುವರೆವಿಗೂ ಎಷ್ಟು ಕಿಲೋಮೀಟರ್ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ ; ಅಭಿವೃದ್ಧಿಗಾಗಿ ಎಷ್ಟು ಹಣ ಬಿಡುಗಡೆಯಾಗಿದೆ ಮತ್ತು ಎಷ್ಟು ಖರ್ಚು ಮಾಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶದಿಂದಾಗಿ ಅಂಗವಿಕಲತೆ ಉಂಟಾಗುತ್ತಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೪೬ (೨೮೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶದಿಂದಾಗಿ ಕುಡಿಯುವ ನೀರು ಯೋಗ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕುಡಿಯುವ ಯೋಗ್ಯವಾದ ನೀರನ್ನು ಪೂರೈಸಲು ಶಾಶ್ವತವಾದ ಯೋಜನೆಗಳನ್ನು ರೂಪಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಇ) ನೀರಿನಲ್ಲಿನ ಫ್ಲೋರೈಡ್ ಅಂಶದಿಂದಾಗಿ ಅಂಗವಿಕಲತೆ ಉಂಟಾಗಿರುವವರನ್ನು ಗುರುತಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಇದರಿಂದ ಅಂಗವಿಕಲತೆಯುಳ್ಳವರಿಗೆ ಪಿಂಚಣಿ ನೀಡಲಾಗುವುದೇ ?

## ಪ.ಜಾತಿ/ಪ.ಪಂಗಡ ವರ್ಗದವರಿಗೆ ಮನೆಗಳ ಹಂಚಿಕೆ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೪೭ (೨೮೦೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಇಂದಿರಾ ಆವಾಸ್, ಬಸವಶ್ರೀ, ಆಶ್ರಯ ಯೋಜನೆ ಹಾಗೂ ವಿವಿಧ ವಸತಿ ಯೋಜನೆಯಡಿಯಲ್ಲಿ ಪ.ಜಾತಿ/ಪ.ಪಂಗಡ ವರ್ಗದವರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆಯೇ ;

(ಆ) ಮಾಡಿದ್ದಲ್ಲಿ, ಯಾವ ಯಾವ ವರ್ಗಗಳಿಗೆ ಎಷ್ಟೆಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ; ಫಲಾನುಭವಿಗಳಿಗೆ ಹಸ್ತಾಂತರಿಸಿರುವ ಮನೆಗಳ ಸಂಖ್ಯೆ ಎಷ್ಟು; ಹಂಚಿಕೆಯಾಗದೆ ಇರುವ ಮನೆಗಳ ಸಂಖ್ಯೆ ಎಷ್ಟು ; (ಫಲಾನುಭವಿ ಹೆಸರಿನೊಂದಿಗೆ ವಿವರ ನೀಡುವುದು)

(ಇ) ಮನೆಗಳು ಹಂಚಿಕೆಯಾಗದೇ ಇರುವುದಕ್ಕೆ ಕಾರಣವೇನು ? (ವಿವರ ನೀಡುವುದು)

## ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಜಂಟಿ ನಿರ್ದೇಶಕರ ಹುದ್ದೆ ನೀಡಿ ಹಿಂಪಡೆದಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೪೮ (೨೭೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಾಂತ್ರಿಕ ಶಿಕ್ಷಣ ಇಲಾಖೆಯ ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್ ಬೆಂಗಳೂರಿನಲ್ಲಿಯ ಕೆಮಿಕಲ್ ಇಂಜಿನಿಯರಿಂಗ್ ಮತ್ತು ಇಪವರ್ ಟೆಕ್ನಾಲಜಿ ವಿಭಾಗಗಳ ಮುಖ್ಯಸ್ಥರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಪೂರ್ವಾನ್ವಯವಾಗುವಂತೆ ಯಾವ ಯಾವ ಉಪನ್ಯಾಸಕರುಗಳಿಗೆ ಮುಂಬಡ್ತಿ ನೀಡಲಾಗಿದೆ ; (ಹೆಸರು, ಮುಂಬಡ್ತಿ ನೀಡಿದ ದಿನಾಂಕ, ಹುದ್ದೆಯ ಪೂರ್ಣ ವಿವರ ನೀಡುವುದು)

(ಆ) ಇಲ್ಲಿಯವರೆಗೆ ಸದರಿ ನೌಕರರಿಗೆ ಯಾವ ಯಾವ ಹುದ್ದೆಗಳಿಗೆ ಮುಂಬಡ್ತಿ ನೀಡಲಾಗಿದೆ; (ಹುದ್ದೆವಾರು ಪೂರ್ಣ ವಿವರ ನೀಡುವುದು)

(ಇ) ಇಲ್ಲಿಯವರೆಗೆ ಸದರಿ ನೌಕರರಿಗೆ ಯಾವ ಯಾವ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ; (ಹುದ್ದೆವಾರು, ದಿನಾಂಕವಾರು, ವರ್ಷವಾರು ಪೂರ್ಣ ವಿವರ ನೀಡುವುದು)

(ಈ) ಈ ನೌಕರರಿಗೆ ೨೦೧೧ರಲ್ಲಿ ಜಂಟಿ ನಿರ್ದೇಶಕರ ಹುದ್ದೆ ನೀಡಿ ನಂತರ ಹಿಂಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಹುದ್ದೆ ಹಿಂಪಡೆಯಲು ಕಾರಣಗಳೇನು ; (ವಿವರ ನೀಡುವುದು)

(ಊ) ಸದರಿ ನೌಕರರ ಮುಂಬಡ್ತಿ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಋ) ಸದರಿ ಅಧಿಕಾರಿಗಳಿಗೆ ಜಂಟಿ ನಿರ್ದೇಶಕರಾಗಿ ಮುಂಬಡ್ತಿ ಆದೇಶವನ್ನು ನೀಡಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ವಿತರಿಸಲ್ಪಟ್ಟ ಹಕ್ಕು ಪತ್ರಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೪೯ (೨೭೬೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ವಿತರಿಸಲ್ಪಟ್ಟ ಹಕ್ಕು ಪತ್ರಗಳೆಷ್ಟು ; (ಗ್ರಾಮ ಪಂಚಾಯತ್‌ವಾರು, ವರ್ಷವಾರು, ಫಲಾನುಭವಿಯ ಹೆಸರು, ವಿಳಾಸವಾರು ವಿವರ ನೀಡುವುದು)

(ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ನಿವೇಶನಗಳನ್ನು ಖರೀದಿಸಿ ವಿತರಿಸಲಾದ ಹಕ್ಕು ಪತ್ರಗಳೆಷ್ಟು ; (ಗ್ರಾಮ ಪಂಚಾಯತ್‌ವಾರು, ವರ್ಷವಾರು, ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್‌ಗಳ ಬೇಡಿಕೆಗನುಗುಣವಾಗಿ ರಾಜೀವ್ ಗಾಂಧಿ ವಸತಿ ನಿಗಮದಿಂದ ನಿವೇಶನಗಳನ್ನು ವಿತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಗ್ರಾಮೀಣ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೫೦ (೨೭೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗದಗಿನ ಕೆ.ಹೆಚ್. ಪಾಟೀಲ್ ಪ್ರತಿಷ್ಠಾನವು ಗ್ರಾಮೀಣ ಪ್ರದೇಶದ ಜನರಿಗೆ ೧೦ ಪೈಸೆಗೆ ಒಂದು ಲೀಟರ್ ಶುದ್ಧ ಕುಡಿಯುವ ನೀರನ್ನು ಪೂರೈಸುತ್ತಿರುವಂತೆ ರಾಜ್ಯ ಸರ್ಕಾರವು ಯಾವ ಯಾವ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಮಂಜೂರಾತಿ ನೀಡಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲು ಅನುಸರಿಸುತ್ತಿರುವ ಮಾನದಂಡವೇನು ಹಾಗೂ ಇದಕ್ಕೆ ತಗಲುವ ವೆಚ್ಚವೆಷ್ಟು ; ಈ ವೆಚ್ಚವನ್ನು ಯಾವ ರೀತಿ ಭರಿಸಲಾಗುವುದು; (ವಿವರಗಳನ್ನು ನೀಡುವುದು)

(ಇ) ಇದೇ ಮಾದರಿಯಲ್ಲಿ ರಾಜ್ಯ ಎಲ್ಲಾ ಹಳ್ಳಿಗಳಿಗೂ ಶುದ್ಧ ಕುಡಿಯುವ ನೀರಿನ ಯೋಜನೆಯನ್ನು ವಿಸ್ತರಿಸಲಾಗುವುದೇ ?

# ರಾಜ್ಯದಲ್ಲಿರುವ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕಾಲೇಜುಗಳು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೧(೨೭೭೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; (ವಿಳಾಸದೊಂದಿಗೆ ವಿವರ ನೀಡುವುದು)

(ಆ) ಈ ಕಾಲೇಜುಗಳನ್ನು ಯಾವ ಯಾವ ಟ್ರಸ್ಟ್‌ಗಳು, ಯಾವ ಯಾವ ಆಡಳಿತ ಮಂಡಳಿಯವರು ನಡೆಸುತ್ತಿರುವರು ; (ವಿವರ ಒದಗಿಸುವುದು)

(ಇ) ಈ ಪೈಕಿ ಅಲ್ಪಸಂಖ್ಯಾತರ ಕಾಲೇಜುಗಳ ಸಂಖ್ಯೆ ಎಷ್ಟು ಹಾಗೂ ಭಾಷಾ ಅಲ್ಪ ಸಂಖ್ಯಾತರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಈ ಕಾಲೇಜುಗಳನ್ನು ಸರ್ಕಾರಿ ನಿಯಮದಂತೆ ನಡೆಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಯಾವ ಯಾವ ಕಾಲೇಜುಗಳ ವಿರುದ್ಧ ಯಾವ ಯಾವ ಕಾರಣಕ್ಕೆ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಕುರಿತು .

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೫೨ (೨೭೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿಗಳ ಸಂಖ್ಯೆ ಎಷ್ಟು ; ಆ ಪೈಕಿ ಸ್ವಂತ ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳನ್ನು ಉತ್ತಮ ಪರಿಸರದಲ್ಲಿ ಬೆಳೆಸಬೇಕೆಂಬ ನಿಯಮವಿದ್ದರೂ, ಆ ಕುರಿತಾದ ಕ್ರಮಗಳನ್ನು ಅನುಷ್ಠಾನ ಮಾಡದೇ ಇರಲು ಕಾರಣವೇನು; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿಗೆ ಸರ್ಕಾರ ಮಂಜೂರಾತಿ ನೀಡಿದೆ ;

(ಇ) ಅಪೌಷ್ಠಿಕತೆಯ ನಿವಾರಣೆಗಾಗಿ ಸುಸಜ್ಜಿತ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## R.D.O. ಹುದ್ದೆಗಳ ಸೃಜನೆ ಕುರಿತು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೩(೨೭೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹೋಬಳಿ ಮಟ್ಟದಲ್ಲಿ ರೂರಲ್ ಡೆವಲಪ್‌ಮೆಂಟ್ ಆಫೀಸರ್ (ಖ.ಆ.ಔ. ) ಹುದ್ದೆಗಳನ್ನು ಸೃಜನೆ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಸದರಿ ಖ.ಆ.ಔ. ರವರ ಕಾರ್ಯವ್ಯಾಪ್ತಿಯೇನು ;

(ಇ) ಸದರಿ ಹುದ್ದೆಯ ನೇಮಕಾತಿಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯೇನು; ಹಾಗೂ ಸದರಿ ಹುದ್ದೆಗಳನ್ನು ಯಾವ ದಿನಾಂಕದಿಂದ ಸೃಜಿಸಲಾಗುವುದು ?

## ರಾಜ್ಯದಲ್ಲಿ ಮಹಿಳೆಯರ ಸುರಕ್ಷತೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೪ (೨೭೮೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ ಭದ್ರತೆಗಾಗಿ ಅನುಷ್ಠಾನಗೊಳಿಸುವ ಹಾಗೂ ಗೊಳಿಸುತ್ತಿರುವ ಯೋಜನೆಗಳು ಯಾವುವು ; ಅವುಗಳನ್ನು ಜಾರಿಗೊಳಿಸುವಲ್ಲಿ ಲೋಪದೋಷಗಳು ಉಂಟಾಗದಂತೆ ನಿಗಾ ವಹಿಸಲಾಗುತ್ತಿದೆಯೇ;

(ಆ) ಮಹಿಳೆಯರ ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ಅತ್ಯಾಚಾರ ಮತ್ತು ಲೈಂಗಿಕ ಕಿರುಕುಳಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು; ಕಳೆದ ಎರಡು ವರ್ಷಗಳಲ್ಲಿ ಈ ಕುರಿತಾದ ಎಷ್ಟು ಪ್ರಕರಣಗಳು ಇಲಾಖಾ ವ್ಯಾಪ್ತಿಯಲ್ಲಿ ದಾಖಲಾಗಿದೆ ಮತ್ತು ಇತ್ಯರ್ಥಪಡಿಸಿವೆ;

(ಇ) ಉದ್ಯೋಗಸ್ಥ ಮಹಿಳೆಯರು ಮತ್ತು ವಿದ್ಯಾರ್ಥಿನಿಯರು ಅತ್ಯಾಚಾರಕ್ಕೆ ಸುಲಭವಾಗಿ ಗುರಿಯಾಗುವುದನ್ನು ತಪ್ಪಿಸಲು ರಾಜ್ಯ ಸರ್ಕಾರವು ಮಾರ್ಗದರ್ಶಿ ಸೂತ್ರಗಳೇನಾದರೂ ರೂಪಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತು ವಿವರ ನೀಡುವುದು ?

## ಚಿತ್ರದುರ್ಗ ದಾವಣಗೆರೆಗಳಲ್ಲಿ ಇಂಗ್ಲೀಷ್ ಶಿಕ್ಷಕರ ಕೊರತೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೫೫ (೨೭೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿರುವ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಮಂಜೂರಾಗಿರುವ ಇಂಗ್ಲೀಷ್ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ? (ಮಾಹಿತಿ ಒದಗಿಸುವುದು)

## ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದ ಗುಣಮಟ್ಟದ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೫೬ (೨೭೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿತ್ರದುರ್ಗ ಜಿಲ್ಲೆಯ ಹಲವೆಡೆ ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದಲ್ಲಿ ಗುಣಮಟ್ಟ ಕಾಯ್ದುಕೊಳ್ಳದೇ ಇರುವುದರಿಂದ ವಿದ್ಯಾರ್ಥಿಗಳು ಅನಾರೋಗ್ಯಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದ ಕಾರ್ಯಕ್ರಮದಲ್ಲಿ ಗುಣಮಟ್ಟ ಕಾಯ್ದುಕೊಳ್ಳಲು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಸಾರ್ವಜನಿಕ ಶೌಚಾಲಯಗಳ ನಿರ್ಮಾಣ .

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೫೭ (೨೭೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಸರ್ಕಾರದ ವಿವಿಧ ಯೋಜನೆಗಳಡಿ ಕಳೆದ ೩ ವರ್ಷಗಳಲ್ಲಿ ನಿರ್ಮಾಣವಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು;

(ಆ) ಇದಕ್ಕಾಗಿ ಸರ್ಕಾರ ವಿನಿಯೋಗಿಸಿರುವ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೫೮ (೨೭೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕುಡಿಯುವ ನೀರು ಫ್ಲೋರೈಡೆ, ಆರ್ಸೆನಿಕ್ ಇತರೆ ರಾಸಾಯನಿಕ ಅಂಶಗಳಿಂದ ಕಲುಷಿತಗೊಂಡಿದ್ದು, ಶುದ್ಧ ಕುಡಿಯುವ ನೀರಿಗಾಗಿ ಜನರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಗಿದ್ದಲ್ಲಿ, ಶುದ್ಧ ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿ ಕಳೆದ ಒಂದೂವರೆ ವರ್ಷಗಳಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ; ಇದಕ್ಕೆ ಸರ್ಕಾರ ವೆಚ್ಚ ಮಾಡಿರುವ ಅನುದಾನ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಅಂಗನವಾಡಿಗಳಲ್ಲಿ ಕುಡಿಯುವ ನೀರು ಮತ್ತು ಮೂಲಭೂತ ಸೌಕರ್ಯ ಕುರಿತು.

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೫೯(೨೭೯೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿರುವ ಅಂಗನವಾಡಿಗಳಲ್ಲಿ ಕುಡಿಯುವ ನೀರು ಹಾಗೂ ಇತರೆ

ಮೂಲಭೂತ ಸೌಕರ್ಯ ಇಲ್ಲದೇ ಮಕ್ಕಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಎರಡು ಜಿಲ್ಲೆಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಂದಿದ್ದಲ್ಲಿ, ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಅಂಗನವಾಡಿ ತೆರೆಯಲು ಸರ್ಕಾರ ಕೈಗೊಂಡಿರುವ ಕ್ರಮವೇನು? (ಮಾಹಿತಿ ಒದಗಿಸುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ವಿಂಗಡಣೆ ಬಗ್ಗೆ .

**ಶ್ರೀ ಟಿ. ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೬೦ (೨೭೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೧ ರಿಂದ ೫ನೇ ತರಗತಿಯನ್ನು ಪ್ರಾಥಮಿಕ, ೬ ರಿಂದ ೮ನೇ ತರಗತಿಯನ್ನು ಮಾಧ್ಯಮಿಕ ಮತ್ತು ೯ ರಿಂದ ೧೨ ನೇ ತರಗತಿಯನ್ನು ಪ್ರೌಢಶಾಲೆ ಎಂದು ವಿಂಗಡಿಸುವುದಾಗಿ ಸರ್ಕಾರ ಘೋಷಿಸಿರುವುದು ನಿಜವೆ ;

(ಆ) ಹಾಗಿದ್ದಲ್ಲಿ, ಈ ಎಲ್ಲಾ ಹಂತಗಳ ತರಗತಿಗಳು ಪ್ರಸ್ತುತ ಜಾರಿಯಲ್ಲಿವೆಯೆ; ಈ ಹಂತಗಳಿಗೆ ಅನುಗುಣವಾಗಿ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ನಡೆಸಲಾಗಿದೆಯೆ;

-F-4 B/

(ಇ) ಹಾಗಿದ್ದಲ್ಲಿ, ಯಾವ ಹಂತದ ತರಗತಿಗಳಿಗೆ ಅರ್ಹತಾ ಪರೀಕ್ಷೆ ನಡೆಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಮೇಲ್ಕಂಡ ಎಲ್ಲಾ ಹಂತಗಳಿಗೂ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಳ್ಳುವಾಗ ಸರ್ಕಾರ ಅನುಸರಿಸುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಪ್ರಸ್ತುತ, ರಾಜ್ಯದಲ್ಲಿ ಈ ಮೂರು ಹಂತದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆಯೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಈ ೩ ಹಂತದ ಶಿಕ್ಷಕರುಗಳನ್ನು ವಿಂಗಡಣೆಗಳಿಗೆ ಅನುಗುಣವಾಗಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ವೃಂದ ನೇಮಕಾತಿ ನಿಯಮಗಳನ್ನು ರಚಿಸುವ ಬಗ್ಗೆ .

**ಶ್ರೀ ಟಿ. ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೬೧ (೨೭೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ನೌಕರರನ್ನು ಹೊರತುಪಡಿಸಿ ಸ್ಥಳೀಯ ಸಂಸ್ಥೆ ನೌಕರರಿಗೆ ನೇಮಕಾತಿ/ಮುಂಬಡ್ತಿ ನೀಡಲು ಸರ್ಕಾರ ಅದೇಶ/ಸುತ್ತೋಲೆಗಳನ್ನೇನಾದರೂ ಹೊರಡಿಸುತ್ತಿದೆಯೆ ;

(ಆ) ಹಾಗಿದ್ದಲ್ಲಿ, ಸ್ಥಳೀಯ ಸಂಸ್ಥೆ ನೌಕರರುಗಳ ವೃಂದವಾರು ಹಾಗೂ ಆದೇಶ/ಸುತ್ತೋಲೆಗಳ ಪ್ರತಿಗಳ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ ೧೯೯೩ ಜಾರಿಗೆ ಬಂದ ನಂತರ, ಈ ನೌಕರರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಈ) ಹಾಗಿದ್ದಲ್ಲಿ, ನಗರ ಸ್ಥಳೀಯ ಸಂಸ್ಥೆ ನೌಕರರನ್ನು ನೇಮಕಾತಿ/ ಬಡ್ತಿ ಮೂಲಕ ನೇಮಿಸಲು ನಗರಾಭಿವೃದ್ಧಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿರುವಂತೆ ೩ ಹಂತದ ಪಂಚಾಯತ್ ರಾಜ್ ಸಂಸ್ಥೆ ನೌಕರರಿಗೆ ನೇಮಕಾತಿ / ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವುದು ಸೂಕ್ತವಲ್ಲವೆ;

(ಉ) ಹಾಗಿದ್ದಲ್ಲಿ, ನಗರ ಸ್ಥಳೀಯ ಸಂಸ್ಥೆಯ ನೌಕರರಂತೆ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ನೌಕರರಿಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಸೇರಿದ ಜಮೀನು ಒತ್ತುವರಿ ಬಗ್ಗೆ.

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೨೪೬೨ (೨೮೧೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ೮೫ ಎಕರೆ ಜಾಗದಲ್ಲಿ ಅನಧಿಕೃತವಾಗಿ ಕಟ್ಟಡಗಳ ನಿರ್ಮಾಣ ಕಾರ್ಯ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಬಂದಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಆ) ಲಗ್ಗೆರೆ ಉಪ ವಿಭಾಗದಲ್ಲಿ ಸರ್ವೆ ನಂಬರ್ ೯/೧, ೯/೨, ೮/೧, ೧೧ ಮತ್ತು ೧೨ ಈ ಸರ್ವೆ ನಂಬರ್ ಜಾಗದಲ್ಲಿ ಎಷ್ಟು ಒತ್ತುವರಿಯಾಗಿದೆ ;

(ಇ) ಸದರಿ ಜಾಗದಲ್ಲಿ ಒಂದು ಧಾರ್ಮಿಕ ಕಟ್ಟಡ ಬೃಹದಾಕಾರವಾಗಿ ನಿರ್ಮಾಣವಾಗಿರುವುದು ನಿಜವೆ ; ಇದು ಅನಧಿಕೃತವೆ ;

(ಈ) ಇದೆ ಜಾಗ ಮಂಡಳಿಗೆ ಸೇರಿದ್ದರೂ ಇಲ್ಲಿ ೫೦ ಕ್ಕೂ ಹೆಚ್ಚು ಕಾರ್ಖಾನೆಗಳು ಅನಧಿಕೃತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಸದರಿ ಕಾರ್ಖಾನೆಗಳನ್ನು ತೆರವುಗೊಳಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಉದ್ಯೋಗ ಖಾತ್ರಿ ಯೋಜನೆಯಡಿ ತಪ್ಪು ಮಾಡಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ.

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೨೪೬೩ (೨೭೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಇಲ್ಲಿಯವರೆಗೆ ಎಷ್ಟು ಅಧಿಕಾರಿಗಳ ವಿರುದ್ಧ ದೂರುಗಳನ್ನು ದಾಖಲಿಸಲಾಗಿದೆ;

(ಆ) ಈ ದೂರುಗಳ ಬಗ್ಗೆ ಸರ್ಕಾರ ತನಿಖೆ ಕೈಗೊಂಡಿದೆಯೇ;

(ಇ) ಹಾಗಿದ್ದಲ್ಲಿ, ವಿಚಾರಣೆಯಲ್ಲಿ ತಪ್ಪಿತಸ್ಥರೆಂದು ಕಂಡು ಬಂದ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ?

## ೧೯೯೪-೯೫ ನೇ ಸಾಲಿನವರೆಗೆ ಪ್ರಾರಂಭಿಸಿದ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು.

ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-

೨೪೬೪ (೨೭೮೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೧೯೯೪-೯೫ನೇ ಸಾಲಿನವರೆಗೆ ಪ್ರಾರಂಭಿಸಿದ ಪರಿಶಿಷ್ಟ ಜಾತಿ/ ಜನಾಂಗಗಳ ಆಡಳಿತ ಮಂಡಳಿಗಳು ನಡೆಸುತ್ತಿರುವ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ನಿರ್ಧರಿಸಲಾಗಿದೆಯೆ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುವುದು;

(ಇ) ೧೯೯೪-೯೫ನೇ ಸಾಲಿನವರಿಗೆ ಪ್ರಾರಂಭಿಸಿದ ಸಾಮಾನ್ಯ ಆಡಳಿತ ಮಂಡಳಿಯ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ನಿರ್ಧರಿಸಿದೆಯೆ;

(ಈ) ವಿಶೇಷ ಪ್ರಕರಣವೆಂದು ಸಾಮಾನ್ಯ ಆಡಳಿತ ಮಂಡಳಿಯ ಯಾವ ಯಾವ ಕಾಲೇಜುಗಳನ್ನು ಅನುದಾನಕ್ಕೊಳಪಡಿಸಲಾಗಿದೆ;

(ಉ) ಉಳಿದ ಸಾಮಾನ್ಯ ಆಡಳಿತ ಮಂಡಳಿಯ ಕಾಲೇಜುಗಳನ್ನು ಯಾವ ದಿನಾಂಕದಿಂದ ಅನುದಾನಕ್ಕೆ ಒಳಪಡಿಸಲಾಗುವುದು ?

## ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೊಳಪಡಿಸಲು ನೂತನ ನೀತಿ ರೂಪಿಸುವ ಬಗ್ಗೆ.

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೨೪೬೫ (೨೭೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೊಳಪಡಿಸಲು ಪ್ರಸ್ತುತ ಯಾವ ನಿಯಮ ಅಥವಾ ನೀತಿಯನ್ನು ಅನುಸರಿಸಲಾಗುತ್ತಿದೆ;

(ಆ) ಮಹಾರಾಷ್ಟ್ರ ರಾಜ್ಯದಲ್ಲಿ ಜಾರಿಯಲ್ಲಿರುವ ಅನುದಾನ ನೀತಿ ಸಂಹಿತೆಯಂತೆ ಸ್ಪಷ್ಟವಾದ ನೀತಿಯೊಂದನ್ನು ರೂಪಿಸಲು ಸರ್ಕಾರ ಉದ್ದೇಶಿಸಿದೆಯೇ;

(ಇ) ೧೯೯೪-೯೫ರ ನಂತರ ಪ್ರಾರಂಭಿಸಿದ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೊಳಪಡಿಸಲು ಸ್ಪಷ್ಟವಾದ ನೀತಿಯೊಂದನ್ನು ರೂಪಿಸುವುದರ ಮೂಲಕ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಸಿಗುವ ಸವಲತ್ತುಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೬೬(೨೭೯೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಸರ್ಕಾರದಿಂದ ಸಿಗುವ ವಿವಿಧ ಸವಲತ್ತುಗಳು ಯಾವುವು; ಇದನ್ನು ಪಡೆಯಲು ಇರುವ ಅರ್ಹತೆ ಮತ್ತು ಮಾನದಂಡಗಳೇನು;

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಹಿರಿಯ ನಾಗರಿಕರಿಗೆ ನೀಡಲಾಗುವ ವಿವಿಧ ಯೋಜನೆಯಗಳ ಪ್ರಯೋಜನೆ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಯೋಜನೆವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ನೀಡಲಾಗುವ ವಿವಿಧ ಸೌಲಭ್ಯ ಹಾಗೂ ಸವಲತ್ತುಗಳನ್ನು ಪ್ರಚಾರ ಪಡಿಸಲು ಇರುವ ಮಾಧ್ಯಮಗಳು ಯಾವುವು ?

## ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿರುವ ಪ್ರವಾಸಿ ತಾಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೬೭(೨೭೯೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿರುವ ಪ್ರವಾಸಿತಾಣಗಳು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿರುವ ಪ್ರವಾಸಿ ತಾಣಗಳಿಗೆ ಅವುಗಳ ಅಭಿವೃದ್ಧಿಗೆ ಸರ್ಕಾರ ನೀಡಿದ ಅನುದಾನವೆಷ್ಟು ಮತ್ತು ಸೌಲಭ್ಯಗಳು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು, ವರ್ಷವಾರು, ಪ್ರವಾಸತಾಣವಾರು ವಿವರ ನೀಡುವುದು)

(ಇ) ರಾಜ್ಯದ ಕರಾವಳಿ ಜಿಲ್ಲೆಯಲ್ಲಿರುವ ಖಾಸಗಿ ಪ್ರವಾಸಿ ಸಂಸ್ಥೆಗಳಿಗೆ ಕಳೆದ ೫ ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ನೀಡಲ್ಪಟ್ಟ

ಅನುದಾನವೆಷ್ಟು ಮತ್ತು ನೀಡಲಾದ ಇತರೆ ಸೌಲಭ್ಯಗಳು ಯಾವುವು? (ಜಿಲ್ಲಾವಾರು, ತಾಲ್ಲೂಕುವಾರು, ವರ್ಷವಾರು, ಖಾಸಗಿ ಪ್ರವಾಸಿ ಸಂಸ್ಥೆವಾರು ವಿವರ ನೀಡುವುದು)

## ಗ್ರಾಮಪಂಚಾಯತ್‌ಗಳಿಗೆ ಹೊರಡಿಸಲಾದ ಸುತ್ತೋಲೆಗಳ ಬಗ್ಗೆ.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೮ (೨೭೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯುತ್ ರಾಜ್ ಇಲಾಖೆಯಿಂದ ಗ್ರಾಮ ಪಂಚಾಯತ್‌ಗಳಿಗೆ ಹೊರಡಿಸಲಾದ ವಿವಿಧ ಸುತ್ತೋಲೆಗಳು ಯಾವುವು; ಕಂದಾಯ, ನಗರಾಭಿವೃದ್ಧಿ, ಅರಣ್ಯ ಹೀಗೆ ಬೇರೆ ಬೇರೆ ಇಲಾಖೆಗಳಿಂದ ಗ್ರಾಮ ಪಂಚಾಯತುಗಳಿಗೆ ಹೊರಡಿಸಲಾದ ಸುತ್ತೋಲೆಗಳು ಯಾವುವು; (ವರ್ಷವಾರು, ಇಲಾಖೆವಾರು ಸುತ್ತೋಲೆಗಳ ಪ್ರತಿಯೊಂದಿಗೆ ವಿವರ ನೀಡುವುದು)

(ಆ) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ ೧೯೯೩ರಲ್ಲಿರುವ ವಿಧೇಯಕಗಳು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನವಾಗದಿರುವುದನ್ನು ಸರ್ಕಾರ ಗಮನಿಸಿದೆಯೆ; ಗಮನಿಸಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಗ್ರಾಮ ಪಂಚಾಯತುಗಳಿಗೆ ಬರುವ ೮ ರಿಂದ ೧೦ ಲಕ್ಷ ಶಾಸನ ಬದ್ಧ ಅನುದಾನ ಹಾಗೂ ಇತರೆಯನ್ನು ಖರ್ಚು ಮಾಡಲು ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ಲೆಕ್ಕಸಹಾಯಕ

ಇತರೆ ಮುಂತಾದ ಹುದ್ದೆಗಳಿದ್ದು ಇವರ ವಾರ್ಷಿಕ ವೇತನ ಗ್ರಾಮ ಪಂಚಾಯತುಗಳ ಅನುದಾನ ಹಾಗೂ ಆದಾಯಕ್ಕಿಂತ ಹೆಚ್ಚಾಗಿರುವುದನ್ನು ಸರ್ಕಾರ ಗಮನಿಸಿದೆಯೆ; ಇದರಿಂದ ಗ್ರಾಮ ಪಂಚಾಯತುಗಳು ಅಭಿವೃದ್ಧಿಯಲ್ಲಿ ಕುಂಠಿತವಾಗಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಗ್ರಾಮ ಪಂಚಾಯತ್ ವ್ಯವಸ್ಥೆಯಲ್ಲಿ ಸದಸ್ಯರ ಮೀಸಲಾತಿಯನ್ನು ಅನಿಶ್ಚಿತತೆಯಲ್ಲಿರುವುದಕ್ಕಿಂತ ಲೋಕಸಭಾ ಹಾಗೂ ವಿಧಾನ ಸಭಾ ಸದಸ್ಯರ ಮೀಸಲಾತಿಯ ಬದಲಾವಣೆಯ ಸಂದರ್ಭದಲ್ಲಿ ಮಾಡಿದರೆ ಸೂಕ್ತವಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ರಾಜ್ಯ ಸರ್ಕಾರ ಗ್ರಾಮ ಪಂಚಾಯತ್‌ಗಳನ್ನು ಪ್ರಯೋಗ ಶಾಲೆಗಳಾಗಿ ಪರಿವರ್ತಿಸುತ್ತಿರುವ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೯ (೨೭೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಗ್ರಾಮ ಸರ್ಕಾರಗಳಾಗಿದ್ದ ಗ್ರಾಮ ಪಂಚಾಯತ್‌ಗಳನ್ನು ಪ್ರಯೋಗ ಶಾಲೆಗಳಾಗಿ ಪರಿವರ್ತಿಸಲು ಪ್ರಯತ್ನಿಸುತ್ತಿದೆ ಎಂದು ಜನಸಾಮಾನ್ಯರ ಮನಸ್ಸಿನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ನಿಲುವೇನು;

(ಆ) ಮಂಗಳೂರು ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಒಂದು ಗ್ರಾಮ ಪಂಚಾಯತ್‌ಗೆ ಕಟ್ಟಡ ನಿರ್ಮಾಣದ ಬೈಲಾ ಆಗುವ ತನಕ ಕಟ್ಟಡ ನಿರ್ಮಾಣ ಪರವಾನಿಗೆ ನೀಡಬಾರದು ಎನ್ನುವ ಮಾನ್ಯ ಉಚ್ಚನ್ಯಾಯಾಲಯದ ಆದೇಶವನ್ನು ಇಡೀ ರಾಜ್ಯದ ಎಲ್ಲಾ ಗ್ರಾಮ ಪಂಚಾಯತುಗಳಿಗೆ ವಿಸ್ತರಿಸಿರುವುದು ಪ್ರಯೋಗದ ಒಂದು ಭಾಗವಲ್ಲವೇ; ಇದರ ಉದ್ದೇಶವೇನು;

(ಇ) ರಾಜ್ಯದ ಗ್ರಾಮ ಪಂಚಾಯತುಗಳ ವ್ಯಾಪ್ತಿಯಲ್ಲಿ ಸ್ವಂತ ೫ ಸೆಂಟ್ಸ್ ಭೂಮಿ ಹೊಂದಿರುವವರು ಮನೆ ನಿರ್ಮಿಸಬೇಕಾದರೆ ಮನೆಗೆ ಹೋಗುವ ದಾರಿಯ (ರಸ್ತೆಯ) ಧಾನ ಪತ್ರವನ್ನು ಉಪನೊಂದಾವಣಾಧಿಕಾರಿ ಕಛೇರಿಯಲ್ಲಿ ನೋಂದಾವಣೆಗೊಳಿಸಿ ಗ್ರಾಮ ಪಂಚಾಯತಿಗೆ ನೀಡಬೇಕೆನ್ನುವುದು ಪ್ರಯೋಗದ ಇನ್ನೊಂದು ಭಾಗವಲ್ಲವೇ; ಇದರ ಉದ್ದೇಶವೇನು;

(ಈ) ಗ್ರಾಮ ಪಂಚಾಯತುಗಳಲ್ಲಿ ವಸತಿ ಯೋಜನೆಯಡಿ ಫಲಾನುಭವಿಯ ಆಯ್ಕೆ ಮಾಡಿ ಅವರನ್ನು ಉಪನೋಂದವಣಾಧಿಕಾರಿ ಕಛೇರಿಯಲ್ಲಿ ನೋಂದಾವಣಿಗೊಳಿಸಿ ನಂತರ ಅವರಿಗೆ ಮನೆ ಮಂಜೂರು ಮಾಡದಿರುವುದು ಪ್ರಯೋಗದ ಮತ್ತೊಂದು ಭಾಗವಲ್ಲವೇ ಮತ್ತು ಇದರ ಉದ್ದೇಶವೇನು ?

# ರಾಜ್ಯದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ ಮಂಜೂರಾದ ಸಂಯುಕ್ತ ಪ್ರೌಢ ಶಾಲೆಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೭೦ (೨೭೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ (ಆರ್.ಎಂ.ಎಸ್) ಮಂಜೂರಾತಿಯಾಗಿ ಪ್ರಾರಂಭಗೊಂಡ ಸಂಯುಕ್ತ ಪ್ರೌಢಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಶಿಕ್ಷಣ ಸಂಸ್ಥೆಗಳಿಗೆ ಮೂಲಭೂತ ಅವಶ್ಯಕತೆಗಳನ್ನು ಒದಗಿಸಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಶಿಕ್ಷಣ ಸಂಸ್ಥೆಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಜಿಲ್ಲಾವಾರು, ತಾಲ್ಲೂಕುವಾರು, ಶಿಕ್ಷಣಸಂಸ್ಥೆವಾರು ವಿವರ ನೀಡುವುದು)

(ಈ) ಸದರಿ ಶಿಕ್ಷಣ ಸಂಸ್ಥೆಗಳಿಗೆ ಕಟ್ಟಡ ಮಂಜೂರಾಗಿ ಪ್ರಾರಂಭಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಅವು

ಯಾವುವು; ಕಾಮಗಾರಿ ಪ್ರಾರಂಭಗೊಂಡು ಅರ್ಧಕ್ಕೆ ನಿಂತಿರುವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; ಅವು ಯಾವುವು ; ಕಾಮಗಾರಿ ಇನ್ನೂ ಪ್ರಾರಂಭವಾಗದ ಮತ್ತು ಕಾಮಗಾರಿ ಪೂರ್ಣಗೊಂಡ ಶಿಕ್ಷಣ ಸಂಸ್ಥೆಗಳು ಏಷ್ಟು; ಅವು ಯಾವುವು ; ಸದರಿ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಮತ್ತು ಇಲಾಖೆಯು ನಡುವೆ ಕರಾರು ಒಪ್ಪಂದ ಮಾಡಿಕೊಳ್ಳಲಾಗಿದೆಯೇ ? (ಕರಾರು ಒಪ್ಪಂದದ ಪ್ರತಿಯೊಂದಿಗೆ ಜಿಲ್ಲಾವಾರು, ತಾಲ್ಲೂಕುವಾರು, ಶಿಕ್ಷಣ ಸಂಸ್ಥವಾರು ಗುತ್ತಿಗೆದಾರರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

## ರಾಜ್ಯದಲ್ಲಿ ೨.೫ಲಕ್ಷ ಮನೆಗಳನ್ನು ನಿರ್ಮಿಸಿರುವ ಬಗ್ಗೆ.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೭೧ (೨೭೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಮ್ಮ ರಾಜ್ಯದಲ್ಲಿ ವಸತಿ ರಹಿತ ಕಡುಬಡವರಿಗೆ ಸೂರು ಒದಗಿಸಲು ೨.೫ಲಕ್ಷ ಮನೆಗಳನ್ನು ನಿರ್ಮಿಸಿರುವುದು ನಿಜವೇ ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗಿದೆ; ಯಾವ ಯಾವ ಮಾನದಂಡಗಳ ಮೇಲೆ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು; ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪ್ರಗತಿಯಲ್ಲಿರುವ ಮನೆಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು;

(ಈ) ಈ ಮನೆಗಳ ಬಾಕಿ ಇರುವ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು ?

## ನಬಾರ್ಡ್ ನೆರವಿನಿಂದ ಆರ್.ಐ.ಡಿ.ಎಫ್ ೧೯ರಡಿಯಲ್ಲಿ ಕೈಗೊಂಡ ಕಾಮಗಾರಿಗಳ ಕುರಿತು.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೭೨ (೨೭೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಬಾರ್ಡ್ ನೆರವಿನೊಂದಿಗೆ ಆರ್.ಐ.ಡಿ.ಎಫ್ ೧೯ರ ಯೋಜನೆಯಡಿಯಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಸದರಿ ಯೋಜನೆಯ ಸಂಪೂರ್ಣ ವಿವರ ಒದಗಿಸುವುದು;

(ಆ) ಸದರಿ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಗ್ರಾಮ ಪಂಚಾಯಿತಿಗಳಲ್ಲಿ ಐಪಿವಿ-೬ ಅಂತರ್ಜಾಲವನ್ನು ಒದಗಿಸುವ ಕುರಿತು.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೭೩ (೨೭೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರ ಗ್ರಾಮ ಪಂಚಾಯಿತಿ ಮಟ್ಟದವರೆಗೆ ಹೆಚ್ಚಿನ ಬ್ಯಾಂಡ್ ವಿಡ್ತ್ ಮತ್ತು ಸಂಪರ್ಕವನ್ನು ಕಲ್ಪಿಸಲು ಐಪಿವಿ-೬

ಅಂತರ್ಜಾಲವನ್ನು ಒದಗಿಸುವುದಾಗಿ ಹೇಳಿರುವುದು ಸರಿ ಅಷ್ಟೆ; ಹಾಗಿದ್ದಲ್ಲಿ, ಈ ಯೋಜನೆಯಡಿ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಐಪಿವಿ–೬ ಅಂತರ್ಜಾಲವನ್ನು ಒದಗಿಸಲಾಗಿದೆ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳಿಗೆ ಐಪಿವಿ–೬ ಅಂತರ್ಜಾಲವನ್ನು ಒದಗಿಸಲಾಗಿದೆ;

(ಇ) ಈ ಯೋಜನೆಗೆ ತಗುಲಿರುವ ವೆಚ್ಚವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಈ ಯೋಜನೆಯಿಂದ ಆಗುವ ಲಾಭವೇನು ?

**ಸರ್ಕಾರಿ ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಕುರಿತು.**

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೭೪ (೨೭೮೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ;

(ಆ) ಇವುಗಳಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಎನ್.ಬಿ.ಎ (National Board of Accreditation) ಸಮಿತಿಯಿಂದ ಮಾನ್ಯತೆ ಪಡೆದಿವೆ; (ಅವುಗಳ ವಿವರ ನೀಡುವುದು)

(ಇ) ಎನ್.ಬಿ.ಎ (National Board of Accreditation) ಮಾನ್ಯತೆ ಪಡೆಯುವಲ್ಲಿ ವಿಫಲವಾಗಿರುವ ಸರ್ಕಾರಿ ಮತ್ತು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು;

(ಈ) ಎನ್.ಬಿ.ಎ (National Board of Accreditation) ಮಾನ್ಯತೆ ಪಡೆಯಲು ಇರುವ ನ್ಯೂನ್ಯತೆಗಳನ್ನು ಸರಿಪಡಿಸಲು ಯಾವ ಕಾಲಮಿತಿಯಲ್ಲಿ ಕ್ರಮ ಜರುಗಿಸಲಾಗುವುದು ?

## ಸರ್ಕಾರಿ ಮತ್ತು ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಪದವಿ ಕಾಲೇಜುಗಳ ಕುರಿತು.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೭೫ (೨೭೮೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಮ್ಮ ರಾಜ್ಯದಲ್ಲಿ ಎಷ್ಟು ಪದವಿ ಕಾಲೇಜುಗಳು, ಸರ್ಕಾರಿ ಮತ್ತು ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ;

(ಆ) ಇವುಗಳಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳು ನ್ಯಾಕ್ (NACC)ಸಮಿತಿಯಿಂದ ಮಾನ್ಯತೆ ಪಡೆದಿವೆ; ಅವುಗಳ ವಿವರ ನೀಡುವುದು;

(ಇ) ನ್ಯಾಕ್ (NACC) ಮಾನ್ಯತೆ ಪಡೆಯುವಲ್ಲಿ ವಿಫಲವಾಗಿರುವ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳ ಸಂಖ್ಯೆ ಎಷ್ಟು ;

(ಈ) ಇಂತಹ ಕಾಲೇಜುಗಳು ನ್ಯಾಕ್ (NACC) ಮಾನ್ಯತೆ ಪಡೆಯಲು ಇರುವ ನ್ಯೂನ್ಯತೆಗಳನ್ನು ಸರಿಪಡಿಸಲು ಯಾವ ಕಾಲಮಿತಿಯಲ್ಲಿ ಕ್ರಮ ಜರುಗಿಸಲಾಗುವುದು ?

## ಕೌತಾಳದಲ್ಲಿ ಪದವಿ ಕಾಲೇಜು ಸ್ಥಾಪಿಸುವ ಬಗ್ಗೆ.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೭೬ (೨೮೦೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲಿ ಬರುವ ಕೌತಾಳದಲ್ಲಿ ಪದವಿ ಕಾಲೇಜು ಪ್ರಾರಂಭಿಸುವ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ೨೦೧೫-೧೬ನೇ ಸಾಲಿನಲ್ಲಿ ಕೌತಾಳದಲ್ಲಿ ಪದವಿ ಕಾಲೇಜು ಸ್ಥಾಪನೆಗೆ ಸರ್ಕಾರ ಕ್ರಮ ಕೈಗೊಳ್ಳುವುದೆ ; (ವಿವರ ಒದಗಿಸುವುದು)

(ಆ) ರಾಯಚೂರು ಜಿಲ್ಲೆಯ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳೆಷ್ಟು; ಆ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿಮಾನ ನಿಲ್ದಾಣ ಸ್ಥಾಪನೆ ಕುರಿತು.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೭೭ (೨೭೯೨) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ರಾಯಚೂರು ಜಿಲ್ಲೆಯಲ್ಲಿ ವಿಮಾನ ನಿಲ್ದಾಣವನ್ನು ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ವಿಮಾನ ನಿಲ್ದಾಣ ಸ್ಥಾಪನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಎನ್.ಆರ್.ಇ.ಜಿ. ಹಾಗೂ ಬಿ.ಆರ್.ಜಿ.ಎಫ್ ಯೋಜನೆಯಡಿ ಮಂಜೂರಾದ ಕಾಮಗಾರಿ.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೭೮ (೨೮೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯಿಂದ ರಾಯಚೂರು ಜಿಲ್ಲೆಯಲ್ಲಿ ಎನ್.ಆರ್.ಇ.ಜಿ. ಯೋಜನೆಯಡಿ ಮಂಜೂರಾದ ಕಾಮಗಾರಿಗಳ ಸಂಖ್ಯೆ ಎಷ್ಟು; (ಪಟ್ಟಿ ಒದಗಿಸುವುದು) ಯೋಜನೆಗೆ ಬಿಡುಗಡೆಯಾದ ಒಟ್ಟು ಅನುದಾನ ಎಷ್ಟು; (ವಿವರ ಒದಗಿಸುವುದು)

(ಆ) ರಾಯಚೂರು ಜಿಲ್ಲೆಗೆ ಬಿ.ಆರ್.ಜಿ.ಎಫ್ ಯೋಜನೆಯಡಿ ಮಂಜೂರಾದ ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು; ಸದರಿ ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು; (ಪೂರ್ಣ ವಿವರ ಒದಗಿಸುವುದು)

(ಇ) ರಾಯಚೂರು ಜಿಲ್ಲಾ ಪಂಚಾಯತ್‌ನಲ್ಲಿ ೨೦೧೧-೧೨ನೇ ಸಾಲಿನಲ್ಲಿ ವಿವಿಧ ಲೆಕ್ಕ ಶೀರ್ಷಿಕೆಗಳಲ್ಲಿ ಖರ್ಚು ಮಾಡದೆ ಉಳಿದ ಅನುದಾನ ಎಷ್ಟು ಹಾಗೂ ಆ ಅನುದಾನವನ್ನು ಬಳಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು; (ಪೂರ್ಣ ವಿವರ ಒದಗಿಸುವುದು)

(ಈ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲಿ ನಡೆಯುತ್ತಿರುವ ರಾಜೀವ್ ಗಾಂಧಿ ಟೆಕ್ನಾಲಜಿ ಮಿಷನ್‌ನಲ್ಲಿ ಮಂಜೂರಾದ ಕುಡಿಯುವ ನೀರಿನ ಯೋಜನೆ ಯಾವ ಹಂತದಲ್ಲಿದೆ; (ಪೂರ್ಣ ವಿವರ ಒದಗಿಸುವುದು) ಹಾಗೂ ಮಾನ್ವಿ ತಾಲ್ಲೂಕು, ಕಲ್ಲೂರು ಕುರುಡಿ ಕುಡಿಯುವ ನೀರಿನ ಯೋಜನೆ ಮಂಜೂರಾತಿ ದೊರಕಲಿದ್ದು ಇದುವರೆಗೂ ಮುಕ್ತಾಯಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು? (ಪೂರ್ಣ ವಿವರ ಒದಗಿಸುವುದು)

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಬಗ್ಗೆ.

**ಶ್ರೀ ಆರ್.ಕೆ. ಸಿದ್ಧರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೭೯(೨೮೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

೨೦೧೩-೧೪ ಹಾಗೂ ೨೦೧೪-೧೫ ನೇ ಸಾಲುಗಳಲ್ಲಿ ಪ್ರಧಾನ ಮಂತ್ರಿಗಳ ಗ್ರಾಮ ಸಡಕ್ ಯೋಜನೆ (ಪಿ.ಎಂ.ಆರ್.ವೈ) ಅಡಿಯಲ್ಲಿ ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ, ಚನ್ನಗಿರಿ ತಾಲ್ಲೂಕುಗಳಲ್ಲಿ ಕೈಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ? (ಸದರಿ ಕಾಮಗಾರಿಗಳ ಭೌತಿಕ ಮತ್ತು ಆರ್ಥಿಕ ವಿವರ ನೀಡುವುದು )

## ಅಂಗನವಾಡಿಯಲ್ಲಿ ಮಕ್ಕಳಿಗೆ ವಿತರಿಸುವ ಪೌಷ್ಠಿಕ ಆಹಾರದ ಬಗ್ಗೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೮೦(೨೮೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಪ್ರತಿ ಮಕ್ಕಳಿಗೆ ಯಾವ ಯಾವ ಪೌಷ್ಠಿಕ ಆಹಾರ ಯಾವ ಪ್ರಮಾಣದಲ್ಲಿ ನೀಡಲಾಗುತ್ತಿದೆ ;

(ಆ) ಯಾವ ಯಾವ ಯೋಜನೆಯಡಿ ಯಾವ ಯಾವ ಮಕ್ಕಳಿಗೆ ಯಾವ ಪೌಷ್ಠಿಕ ಆಹಾರ ಕೊಡಲಾಗುವುದು ;

(ಇ) ೧೮ ವರ್ಷದ ಒಳಗಿನ ಹೆಣ್ಣು ಮಕ್ಕಳಿಗೆ ಪ್ರತಿ ತಿಂಗಳಿಗೆ ಪ್ರತಿ ೧ ಹೆಣ್ಣು ಮಗಳಿಗೆ ಎಷ್ಟು ಪ್ರಮಾಣದ ಹಾಗೂ ಯಾವ ಯಾವ ಪೌಷ್ಠಿಕ ಆಹಾರ ಒದುಗಿಸಲಾಗುತ್ತಿದೆ ;

(ಈ) ಅಂಗನವಾಡಿಯಲ್ಲಿ ಈ ಪೌಷ್ಠಿಕ ಆಹಾರವು ದುರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಯಾವ ಕ್ರಮವನ್ನು ಕೈಗೊಂಡಿದ್ದೀರಿ; ಮತ್ತು ಅವುಗಳು ಯಾವುವು; ಅವು ಯಾವ ಯಾವ ಅಂಗನವಾಡಿಗಳು ಮತ್ತು ಇದನ್ನು ನಿಯಂತ್ರಿಸಲು ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು ?

## ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೪೮೧ (೨೮೧೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಗೆ ಅಧಿಸೂಚನೆ ಹೊರಡಿಸಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ; ಇದ್ದರೆ, ಅರ್ಹತೆ, ಅರ್ಜಿ ಶುಲ್ಕ, ಹುದ್ದೆಗಳ ಸಂಖ್ಯೆ, ૩૦೧(ಜೆ) ಮೀಸಲಾತಿ ವಿವರ, ಪ್ರತ್ಯೇಕ ಸಂಪೂರ್ಣ ವಿವರ ನೀಡುವುದು ;

(ಆ) ಸದರಿ ಹುದ್ದೆಗಳಿಗೆ ಸಲ್ಲಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ಹಾಗೂ ಸಂಗ್ರಹವಾದ ಹಣವೆಷ್ಟು; ಈ ಹೆಚ್ಚಿನ ಶುಲ್ಕ ವಸೂಲಿನಿಂದ ಪದವೀಧರರ ಮೇಲೆ ಹೊರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಈ ಶುಲ್ಕ ಕಡಿಮೆ ಮಾಡಿ ಅರ್ಜಿದಾರರ ಸಹಾಯಕ್ಕೆ ಬರಲು ಸರ್ಕಾರ ಮುಂದಾಗುವುದೇ ; (ವಿವರ ನೀಡುವುದು)

(ಈ) ಸದರಿ ಹುದ್ದೆಗಳ ೩೭೧(ಜೆ) ಅಡಿಯಲ್ಲಿ ಮೀಸಲಾತಿಯಲ್ಲಿ ಎಡವಟ್ಟಾಗಿ ಹೈ-ಕ ಭಾಗದ ಪದವೀಧರರಿಗೆ ಅನ್ಯಾಯವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿವರ ನೀಡುವುದು ;

(ಉ) ಇದನ್ನು ಸರಿಪಡಿಸಿ ೩೭೧ (ಜೆ) ಅಡಿಯಲ್ಲಿ ನ್ಯಾಯಯುತ ಮೀಸಲಾತಿ ಕಲ್ಪಿಸಿ ನೇಮಕಾತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನದ (RMSA) ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೪೮೨ (೨೮೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈ-ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿಯಲ್ಲಿ (RMSA) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನದ ಅಡಿಯಲ್ಲಿ

ಕೈಗೊಂಡ ಕಾಮಗಾರಿಗಳು ಒಪ್ಪಂದದ ಪ್ರಕಾರ ಪೂರ್ಣಗೊಂಡು ಯಾವ ಕಾಲಮಿತಿಯೊಳಗೆ ಹಸ್ತಾಂತರಗೊಳ್ಳಬೇಕಾಗಿತ್ತು ; (ಜಿಲ್ಲಾವಾರು, ಕಾಮಗಾರಿವಾರು, ಗುತ್ತಿಗೆದಾರರ ಮಾಹಿತಿ ಪ್ರತ್ಯೇಕ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಗಳಲ್ಲಿ ಬಹುತೇಕ ಕಾಮಗಾರಿಗಳು ಹಸ್ತಾಂತರವಾಗದೇ ಇರುವ ವಿಷಯ ಸರ್ಕಾರದ ಗಮನಕ್ಕಿದೆಯೇ; ಇದ್ದರೆ, ಒಪ್ಪಂದದ ಪ್ರಕಾರ ಆದ ವಿಳಂಬವೆಷ್ಟು ; (ಕಾಮಗಾರಿವಾರು, ಜಿಲ್ಲಾವಾರು, ಗುತ್ತಿಗೆದಾರರ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯ ಕಾಮಗಾರಿಗಳ ನಿರ್ವಹಣೆಗಾಗಿ ಇಲಾಖೆ ಖಾಸಗಿ ಸಂಸ್ಥೆಗೆ ಗುತ್ತಿಗೆ ನೀಡಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ ; (ಇದ್ದಲ್ಲಿ, ಗುತ್ತಿಗೆಯ ಸಂಪೂರ್ಣ ಮಾಹಿತಿ, ಗುತ್ತಿಗೆದಾರರ ಮಾಹಿತಿ, ಪಾವತಿಯಾದ ಹಣದ ಮಾಹಿತಿ, ಗುತ್ತಿಗೆಯ ಅವಧಿ (ರದ್ದು) ಹಾಗೂ ದಿನಾಂಕ ಸಹಿತ ಸಂಪೂರ್ಣ ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಈ ವಿಳಂಬದಿಂದ ಸರ್ಕಾರಕ್ಕೆ ಆದ ನಷ್ಟ ಎಷ್ಟು; ಇದಕ್ಕೆ ಕಾರಣಕರ್ತರು ಯಾರು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಯಚೂರಿನಲ್ಲಿ ಐ.ಐ.ಟಿ ಸಂಸ್ಥೆಯನ್ನು ಸ್ಥಾಪನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೪೮೩ (೨೮೧೬)+(೨೮೦೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರದ ಪ್ರತಿಷ್ಠಿತ "ಇಂಡಿಯನ್ ಇನ್ಸ್‌ಟ್ಯೂಟ್ ಆಫ್-ಟೆಕ್ನಾಲಜಿ" (IIT) ಯನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಲು ಮಂಜೂರು ಮಾಡಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು) ಇದ್ದರೆ, ಸದರಿ ಸಂಸ್ಥೆಯನ್ನು ಕರ್ನಾಟಕದಲ್ಲಿ ಸ್ಥಾಪಿಸಲು ಕೇಂದ್ರ ಸರ್ಕಾರದ ಷರತ್ತುಗಳೇನು ; (ವಿವರ ನೀಡುವುದು)

(ಆ) ಡಾ: ಡಿ.ಎಂ. ನಂಜುಂಡಪ್ಪ ವರದಿ ಪ್ರಕಾರ ಸದರಿ ಸಂಸ್ಥೆಯನ್ನು ರಾಜ್ಯದ ಯಾವ ಜಿಲ್ಲೆಯಲ್ಲಿ ಸ್ಥಾಪಿಸಲು ಶಿಫಾರಸ್ಸು ಮಾಡಿದ್ದಾರೆ ; (ವಿವರ ನೀಡುವುದು)

(ಇ) ಕಲಬುರಗಿಯಲ್ಲಿ ೧೮-೧೦-೨೦೧೨ ರಂದು ಜರುಗಿದ ಸಂಪುಟದ ಸಭೆಯಲ್ಲಿ "ಇಂಡಿಯನ್ ಇನ್ಸ್‌ಟ್ಯೂಟ್ ಆಫ್ ಟೆಕ್ನಾಲಜಿ" (IIT) ಸಂಸ್ಥೆಯನ್ನು ರಾಯಚೂರಿನಲ್ಲಿ ಸ್ಥಾಪಿಸುವ ನಿರ್ಣಯ ಕೈಗೊಂಡಿರುವುದು ಸರ್ಕಾರದ ಗಮನಕ್ಕಿದೆಯೇ ; (ವಿವರ ನೀಡುವುದು)

(ಈ) ಸದರಿ "ಇಂಡಿಯನ್ ಇನ್ಸ್‌ಟ್ಯೂಟ್ ಆಫ್ ಟೆಕ್ನಾಲಜಿ" (IIT) ಸಂಸ್ಥೆಯನ್ನು ರಾಯಚೂರಿನಲ್ಲಿ ಸ್ಥಾಪಿಸುವ ನಿಟ್ಟಿನಲ್ಲಿ

೩೦-೦೭-೨೦೧೪ ರಂದು ಸದನದಲ್ಲಿ ಆಶ್ವಾಸನೆ ನೀಡಿರುವುದು ಸರ್ಕಾರದ ಗಮನಕ್ಕಿದೆಯೇ ; (ವಿವರ ನೀಡುವುದು)

(ಉ) ಈ ಎಲ್ಲಾ ಹಿನ್ನಲೆಯಲ್ಲಿ ಸದರಿ ಪ್ರತಿಷ್ಠಿತ "ಇಂಡಿಯನ್ ಇನ್ಸ್‌ಟ್ಯೂಟ್ ಆಫ್ ಟೆಕ್ನಾಲಜಿ" (IIT) ಸಂಸ್ಥೆಯನ್ನು ರಾಯಚೂರಿನಲ್ಲಿ ಸ್ಥಾಪಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ? (ವಿವರ ನೀಡುವುದು)

## ವಿಶ್ವೇಶ್ವರಯ್ಯ ತಾಂತ್ರಿಕ ಮಹಾ ವಿದ್ಯಾಲಯದ ಅಡಿಯಲ್ಲಿ ಬರುವ ಕಾಲೇಜುಗಳ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೪೮೪ (೨೮೧೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾಲಯ (VTU) ಅಡಿಯಲ್ಲಿ ಬರುವ ತಾಂತ್ರಿಕ ಕಾಲೇಜುಗಳು ಹಾಗೂ ಸ್ವಾಯುತ್ತ ತಾಂತ್ರಿಕ (ATONOMUS) ಕಾಲೇಜುಗಳ ಪರೀಕ್ಷೆ ಅಂಕಗಳು ಹಾಗೂ ಮೌಲ್ಯಮಾಪನ ವಿಧಾನದಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು; ಹಾಗೂ ಅನುಸರಿಸಲಾಗುತ್ತಿರುವ ಪದ್ಧತಿಗಳೇನು ; (ಪ್ರತ್ಯೇಕ ವಿವರ ನೀಡುವುದು)

(ಆ) ಸದರಿ ದ್ವಂದ್ವ ವಿಧಾನಗಳಿಂದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾಲಯ (VTU) ಅಡಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ನೇಮಕಾತಿಗಳಲ್ಲಿ ಅನ್ಯಾಯವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಗೊಂದಲಗಳನ್ನು ಸರಿಪಡಿಸಿ ಅರ್ಹ ಪದವೀಧರರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ? (ವಿವರ ನೀಡುವುದು)

**ಕಲಬುರಗಿ ಜಿಲ್ಲೆಯಲ್ಲಿ ಸ್ಥಾಪಿಸಲಾಗಿರುವ ಸಿಮೆಂಟ್ ಕಾರ್ಖಾನೆಗಳು ಗ್ರಾಮ ಪಂಚಾಯತಿಗೆ ತೆರಿಗೆ ಪಾವತಿಸುವ ಬಗ್ಗೆ.**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೪೮೫ (೨೮೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಸ್ಥಾಪಿಸಲಾದ ಒಟ್ಟು ಸಿಮೆಂಟ್ ಕಾರ್ಖಾನೆಗಳು ಎಷ್ಟು; ಈ ಕಾರ್ಖಾನೆಗಳ ಉತ್ಪಾದನೆ ಮತ್ತು ಬಂಡವಾಳ ಹೂಡಿಕೆಯ ಹಾಗೂ ಸ್ವಾಧೀನಪಡಿಸಿಕೊಂಡ ಜಮೀನುಗಳ ವಿವರ ನೀಡುವುದು ;

(ಆ) ಈ ಕಾರ್ಖಾನೆಗಳು ಸಂಬಂಧಪಟ್ಟ ಸ್ಥಳೀಯ ಗ್ರಾಮ ಪಂಚಾಯತ್‌ಗಳ ಪರವಾನಿಗೆ ಪಡೆದಿವೆಯೇ ; (ಮಾಹಿತಿ ನೀಡುವುದು)

(ಇ) ಈ ಕಾರ್ಖಾನೆಗಳು ಪಂಚಾಯತ್‌ರಾಜ್ ಕಾಯ್ದೆ ೧೯೯೩ರ ಅಡಿಯ ೧೬೭/೧೬೮/೧೬೯ ರ ಪ್ರಕಾರ ಕಾರ್ಖಾನೆಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತ್‌ಗಳಿಗೆ ತೆರಿಗೆ ಪಾವತಿಸಿವೆಯೇ; ಪಾವತಿಸಿದ್ದಲ್ಲಿ, ಕಳೆದ ೨೦೦೦-೦೧ ರಿಂದ ಇಲ್ಲಿಯವರೆಗೆ ಪಾವತಿಸಿದ ತೆರಿಗೆ ಮಾಹಿತಿ ನೀಡುವುದು ;

(ಈ) ಈ ಮೇಲ್ಕಂಡ ಕಾರ್ಖಾನೆಗಳು ತೆರಿಗೆ ಪಾವತಿಸದೇ ಇದ್ದಲ್ಲಿ, ಸಂಬಂಧಪಟ್ಟ ಗ್ರಾಮಪಂಚಾಯತ್‌ಗಳಿಗೆ ತೆರಿಗೆ ಪಾವತಿಸಲು ಸರ್ಕಾರ ಕ್ರಮವಹಿಸುವುದೇ ? (ಮಾಹಿತಿ ನೀಡುವುದು)

## ಖಾಸಗಿ ಟಿ.ವಿ.ಚಾನಲ್‌ಗಳು ಸಾರ್ವಜನಿಕರಿಗೆ ಮಾಡುತ್ತಿರುವ ಮೋಸದ ಬಗ್ಗೆ.

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೮೬ (೨೮೧೯) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಲವಾರು ಖಾಸಗಿ ಟಿ.ವಿ.ಚಾನಲ್‌ಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವುದು ನಿಜವೆ ;

(ಆ) ಹಾಗಿದ್ದರೆ, ಅಂತಹ ಖಾಸಗಿ ಚಾನಲ್‌ಗಳು ಸರ್ಕಾರದಿಂದ ಮನ್ನಣೆ ಪಡೆದ ಅಧಿಕೃತ ಚಾನಲ್‌ಗಳೆ ; (ಮಾಹಿತಿ ನೀಡುವುದು)

(ಇ) ಅಂತಹ ಚಾನಲ್‌ಗಳ ಒಟ್ಟು ವಿವರ ನೀಡುವುದು; ಈ ಚಾನಲ್‌ಗಳು ಗ್ರಾಹಕರಿಗೆ ಮೋಸ ಮಾಡಿದರೆ ಇವುಗಳ ಮೇಲೆ ಸರ್ಕಾರದ ನಿಯಂತ್ರಣ ಹೊಂದಿದೆಯೆ; ದೂರು ನೀಡಬೇಕಾದ ಅಧಿಕಾರಿಗಳ ವಿವರ ಏನು ?

## ಬಡ್ತಿ ಹೊಂದಿರುವ ಸಹ ಶಿಕ್ಷಕರ ಬಗ್ಗೆ.

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೪೮೭ (೨೮೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಪ್ರಾಥಮಿಕ ಶಾಲೆಯಿಂದ ಬಡ್ತಿ ಹೊಂದಿ, ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪಟ್ಟಿ ನೀಡುವುದು)

(ಆ) ಈ ಸಹ ಶಿಕ್ಷಕರು ಬಡ್ತಿ, ವರ್ಗಾವಣೆ ಹಾಗೂ ಕಾಲ್ಪನಿಕ ವೇತನ ಬಡ್ತಿಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಬಂದಿದ್ದರೆ, ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರೌಢಶಾಲಾ ಸಹ ಶಿಕ್ಷಕರ ವೇತನ ತಾರತಮ್ಯ ಕುರಿತು.

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೪೮೮ (೨೮೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ವೇತನದಲ್ಲಿ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಗೊಂದಲದಲ್ಲಿ ೦೧-೦೮-೨೦೦೮ ರ ನಂತರ ನೇಮಕಗೊಂಡ ಪ್ರೌಢಶಾಲಾ ಸಹಶಿಕ್ಷಕರು, ಪದವಿ ಪೂರ್ವ ಉಪನ್ಯಾಸಕರು ವಿಶೇಷ ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಬಂದಿದ್ದರೆ, ಯಾವ ಕಾಲಮಿತಿಯಲ್ಲಿ ಸರಿಪಡಿಸಲಾಗುವುದು?

## ಜ್ಯೋತಿ ಸಂಜೀವಿನಿ ಯೋಜನೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೪೮೯ (೨೮೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಜ್ಯೋತಿ ಸಂಜೀವಿನಿ ಯೋಜನೆ ಜಾರಿಗೊಳಿಸಲಾಗಿದೆಯೇ ;

(ಆ) ಜಾರಿಗೊಳಿಸಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು ;

(ಇ) ಈ ಯೋಜನೆಯನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ವಿಸ್ತರಿಸಲು ಸರ್ಕಾರ ಚಿಂತಿಸಿದೆಯೇ ;

(ಈ) ಕರ್ನಾಟಕದಲ್ಲಿ ಸರ್ವರಿಗೂ ಆರೋಗ್ಯ ಭಾಗ್ಯ ಎನ್ನುವ ನಿಮ್ಮ ಕಲ್ಪನೆ ಪ್ರಕಾರ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಇದರ ವ್ಯಾಪ್ತಿಗೆ ಬರಲು ಅರ್ಹರಲ್ಲವೇ ?

## ಸಹ ಶಿಕ್ಷಕರ ಸಂಬಳದ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೪೯೦ (೨೮೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಇಲಾಖೆಯಲ್ಲಿ ಸಹ ಶಿಕ್ಷಕರಲ್ಲಿರುವ ಯೋಜನೇತರ ಹಾಗೂ ಯೋಜನಾ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನಾ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಪ್ರತಿ ತಿಂಗಳು ಸಂಬಳ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಸಮಸ್ಯೆಯನ್ನು ಸರಿಪಡಿಸುವ ಚಿಂತನೆ ಜವಾಬ್ದಾರಿ ಸರ್ಕಾರಕ್ಕೆ ಇದೆಯೇ ?

## ಮುಖ್ಯೋಪಾಧ್ಯಾಯರ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೪೯೧ (೨೮೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಸರ್ಕಾರಿ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮುಖ್ಯೋಪಾಧ್ಯಾಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು

(ಆ) ಇವರಲ್ಲಿ ನೇರ ನೇಮಕಾತಿ ಆದವರ ಸಂಖ್ಯೆ ಎಷ್ಟು; ಬಡ್ತಿ ಹೊಂದಿ ಮುಖ್ಯೋಪಾಧ್ಯಾಯ ಆದವರ ಸಂಖ್ಯೆ ಎಷ್ಟು; (ಬ್ಯಾಚ್‌ವಾರು ಮಾಹಿತಿ ನೀಡುವುದು)

(ಇ) ಇದರಲ್ಲಿ ಕೆ.ಇ.ಎಸ್ ಪರೀಕ್ಷೆ ತೇರ್ಗಡೆಯಾಗಿ ಬಂದ ಮುಖ್ಯೋಪಾಧ್ಯಾಯರ ಸಂಖ್ಯೆ ಎಷ್ಟು ;

(ಈ) ಈ ಶಿಕ್ಷಕರಿಗೆ ಕ್ಲಾಸ್ ೧ ಜೂನಿಯರ್, ಕ್ಲಾಸ್ ೧ ಸೀನಿಯರ್ ಆಗಿ ಬಡ್ತಿ ಕೊಡಲು ಇರುವ ತೊಂದರೆಗಳೇನು ?

## ಮೈಸೂರು–ಚಾಮರಾಜನಗರ ನಡುವೆ ರೈಲ್ವೆ ಮೇಲುಸೇತುವೆಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೨ (೨೮೨೮) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು–ಚಾಮರಾಜನಗರ ರೈಲ್ವೆ ಮಾರ್ಗದಲ್ಲಿ ಬರುವ ಚಿನ್ನದಗುಡಿ ಹುಂಡಿ, ಪಣ್ಯದ ಹುಂಡಿ ಲೆವೆಲ್ ಕ್ರಾಸಿಂಗ್‌ಗಳಲ್ಲಿ ರೈಲ್ವೆ ಮೇಲುಸೇತುವೆ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ; ಈ ಕಾಮಗಾರಿಗಳ ಅಂದಾಜು ವೆಚ್ಚ ಎಷ್ಟು; ಈ ಕಾಮಗಾರಿಗಳಿಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಹಣ ಎಷ್ಟು; ಕೇಂದ್ರದಿಂದ ಬಂದಿರುವ ಹಣ ಎಷ್ಟು; ಕಾಮಗಾರಿ ಯಾವ ಹಂತದಲ್ಲಿದೆ ;

(ಆ) ಮೈಸೂರು ನಂಜನಗೂಡು ರೈಲ್ವೆ ಮಾರ್ಗದಲ್ಲಿ ನಂಜನಗೂಡಿನ ಸುಜಾತಪುರಂ ಲೆವೆಲ್ ಕ್ರಾಸಿಂಗ್‌ನಲ್ಲಿ ಮೇಲುಸೇತುವೆ ನಿರ್ಮಾಣಕ್ಕೆ ಕ್ರಮ ತೆಗೆದುಕೊಳ್ಳಲಾಗಿದೆಯೇ; ಇದರ ಅಂದಾಜು ವೆಚ್ಚ ಎಷ್ಟು; ಇದರಲ್ಲಿ ರಾಜ್ಯದ ಪಾಲೇಷ್ಟು; ಕೇಂದ್ರದ ಪಾಲು ಎಷ್ಟು; ಹಣ ಬಿಡುಗಡೆ ಆಗಿದೆಯೇ; ಕಾಮಗಾರಿ ಯಾವ ಹಂತದಲ್ಲಿದೆ ?

## ಮೈಸೂರು ವಿಮಾನ ನಿಲ್ದಾಣದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೯೩ (೨೮೨೯) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್‌ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ವಿಮಾನ ನಿಲ್ದಾಣದ ಕಾಮಗಾರಿಗಳು ಪೂರ್ಣವಾಗಿದೆಯೇ; ಭೂಸ್ವಾಧೀನ ಪ್ರಕ್ರಿಯೆಗಳು, ಭೂಮಿಯನ್ನು ಕಳೆದುಕೊಂಡು ಭೂ ಮಾಲೀಕರಿಗೆ ಪರಿಹಾರಧನ ನೀಡಿಕೆ ಕಾರ್ಯ ಮುಗಿದಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ಮೈಸೂರು-ಬೆಂಗಳೂರು ನಡುವೆ ವಿಮಾನಯಾನ ಪ್ರಾರಂಭಿಸುವುದರ ಬಗ್ಗೆ ವಿಮಾನಯಾನ ಸಂಸ್ಥೆಗಳೊಡನೆ ಮಾತುಕತೆ ನಡೆಸಲಾಗುವುದೇ; ಪ್ರವಾಸೋದ್ಯಮ ಅಭಿವೃದ್ಧಿ ದೃಷ್ಟಿಯಿಂದ ಈ ಬಗ್ಗೆ ಕ್ರಮ ಜರುಗಿಸಲಾಗುವುದೇ ?

## ಚಾಮರಾಜನಗರ ಜಿಲ್ಲೆಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೪ (೨೬೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆಯ ಚಾಮರಾಜನಗರ, ಗುಂಡ್ಲುಪೇಟೆ, ಕೊಳ್ಳೇಗಾಲ ಮತ್ತು ಹನೂರು ತಾಲ್ಲೂಕುಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಸಂಭವಿಸಿರುವ ಎಷ್ಟು ಗ್ರಾಮಗಳನ್ನು ಗುರುತಿಸಲಾಗಿದೆ; ಅವು ಯಾವುವು ;

(ಆ) ಈ ಗ್ರಾಮಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರು ಪೂರೈಕೆ ಮಾಡಲು ಕೈಗೊಂಡಿರುವ ಕ್ರಮಗಳೇನು; ಇದಕ್ಕಾಗಿ ಒದಗಿಸಿರುವ ಅನುದಾನ ಎಷ್ಟು; ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳು ಯಾವುವು ? (ವಿವರ ಒದಗಿಸುವುದು)

## ಮೈಸೂರು ಜಿಲ್ಲೆಯ ಗ್ರಾಮಗಳಿಗೆ ಕುಡಿಯುವ ನೀರು ಪೂರೈಕೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೫ (೨೬೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಜಿಲ್ಲೆಯ ಯಾವ ಯಾವ ಗ್ರಾಮಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಅಭಾವ ಕಾಡಲಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕುಡಿಯುವ ನೀರಿನ ಅಭಾವವನ್ನು ನೀಗಿಸಲು ಅನುದಾನದ ಮಂಜೂರಾತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಅನುದಾನ ಬಿಡುಗಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇದಕ್ಕಾಗಿ ಒದಗಿಸಿರುವ ಅನುದಾನ ಎಷ್ಟು; ಸಮರ್ಪಕ ನೀರು ಸರಬರಾಜಿಗೆ ಕೈಗೊಂಡಿರುವ ಕ್ರಮಗಳೇನು ?

## ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೯೬ (೨೮೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರ್ಗಿ ಜಿಲ್ಲೆ, ಅಫ್ಜಲಪುರ ತಾಲ್ಲೂಕು, ಗೌರ.ಬಿ ಗ್ರಾಮ ಪಂಚಾಯಿತಿ ವತಿಯಿಂದ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ, ೨೦೧೪ರ ಏಪ್ರಿಲ್‌ನಿಂದ ಆಗಸ್ಟ್ ಮಾಹೆಯವರೆಗೆ ಖರೀದಿಸಿರುವ ಸಾಮಾಗ್ರಿಗಳಿಗಾಗಿ ರೂ. ೫.೨೭ ಕೋಟಿ ರೂ.ಗಳನ್ನು ಮಂಜೂರು ಮಾಡಲಾಗಿದೆಯೇ ;

(ಆ) ಈ ಖರೀದಿ ವ್ಯವಹರಣೆ ಕಾನೂನು ಪ್ರಕಾರವಿದೆಯೇ ಅಥವಾ ಅಕ್ರಮವೇ ;

(ಇ) ಈ ಜಿಲ್ಲೆಯ ನೋಡಲ್ ಅಧಿಕಾರಿಯವರು ಈ ಪಂಚಾಯಿತಿಗೆ ಎಷ್ಟು ಬಾರಿ ಈವರೆಗೆ ಭೇಟಿ ನೀಡಿ, ತಪಾಸಣೆ ಮಾಡಿದ್ದಾರೆ ; (ವಿವರಗಳನ್ನು ಒದಗಿಸುವುದು)

(ಈ) ಜಿಲ್ಲಾ ಪಂಚಾಯತ್‌ನ CEO .,ಅವರ ADPC., MIS Co-ordinator, ಬ್ಯಾಂಕ್ ಮ್ಯಾನೇಜರ್ ಇತ್ಯಾದಿಯವರು ಈ ಖರೀದಿ ಮತ್ತು ಹಣ ಬಿಡುಗಡೆ ವ್ಯವಹರಣೆಯಲ್ಲಿ ಬಾರಿ ಅವ್ಯವಹಾರ ಎಸಗಿದ್ದಾರೆಂಬ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಪ್ರಕರಣದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಾ ಸಂಘ ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಅನುದಾನದ ದುರುಪಯೋಗ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೯೭ (೨೮೩೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೦೪ ರಿಂದ ೨೦೧೫ರವರೆಗಿನ ಅವಧಿಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳ ಯಾವ ಯಾವ ಸಂಘ ಸಂಸ್ಥೆಗಳಿಗೆ ಹಾಗೂ ಕಲಾವಿದರಿಗೆ ಯಾವ ಯಾವ ಕಾರ್ಯಕ್ರಮಗಳಿಗಾಗಿ ಅನುದಾನ ನೀಡಲಾಗಿದೆ; ಸದರಿ ಕಾರ್ಯಕ್ರಮಗಳಿಗಾಗಿ ಬಿಡುಗಡೆ ಮಾಡಿದ ಅನುದಾನ ಎಷ್ಟು; (ಸಂಘ ಸಂಸ್ಥೆಯ ಹೆಸರುಗಳ ವಿವರ ನೀಡುವುದು)

(ಆ) ಸದರಿ ಸಂಘ ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಅನುದಾನದ ದುರುಪಯೋಗದ ಬಗ್ಗೆ ಇಲಾಖೆಗೆ ಬಂದ ದೂರುಗಳೆಷ್ಟು; ಸದರಿ ದೂರುಗಳ ಬಗ್ಗೆ ಕ್ರಮ ಕೈಗೊಳ್ಳಲಾಗಿದೆಯೇ ?

# ಮಹಿಳಾ ಸಾಂತ್ವನ ಕೇಂದ್ರ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೯೮ (೨೮೩೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಸಮಾಜದಲ್ಲಿ ಹಾಗೂ ಕುಟುಂಬದಲ್ಲಿ ಮಹಿಳೆಯರ ಮೇಲೆ ಆಗುತ್ತಿರುವ ಅತ್ಯಾಚಾರ ದೌರ್ಜನ್ಯ ನೊಂದ ಮಹಿಳೆಯರ ರಕ್ಷಣೆಗೆ ಸ್ಥಾಪನೆಯಾಗಿರುವ ಸಾಂತ್ವನ ಕೇಂದ್ರಗಳು ಎಷ್ಟು; ಈ ಕಾರ್ಯಕ್ರಮಗಳನ್ನು ನಡೆಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಹೆಸರು ವಿಳಾಸ ವಿವರ ನೀಡುವುದು ;

(ಆ) ಈ ಸಂಘ ಸಂಸ್ಥೆಗಳಿಗೆ ಪ್ರಾರಂಭದಿಂದ ೨೦೧೫ರವರೆಗೂ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಇಲ್ಲಿಯವರೆಗೆ ಎಷ್ಟು ಮಹಿಳೆಯರಿಗೆ ಸಾಂತ್ವನ ಹಾಗೂ ಸಹಾಯ ಮತ್ತು ಜಾಗೃತಿ ಕಾರ್ಯಕ್ರಮಗಳು ಮಾಡಲಾಗಿದೆ ? (ಅವುಗಳ ವಿವರ ನೀಡುವುದು)

## ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೯೯ (೨೮೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರ್ಗಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ೨೦೧೨-೧೩ನೇ ಸಾಲಿನಿಂದ ಈವರೆಗೆ ಮಹಾತ್ಮಗಾಂಧೀಜಿ ಉದ್ಯೋಗ ಖಾತ್ರಿ ಯೋಜನೆಯಡಿ ಖರೀದಿಸಿದ ಸಾಮಾಗ್ರಿಗಳ ಮೌಲ್ಯ ಎಷ್ಟು ;

(ಆ) ಈ ಖರೀದಿಗಳಿಗಾಗಿ ಯಾವ TIN ನಂಬರ್ ಬಳಕೆ ಮಾಡಲಾಗಿದೆ;

(ಇ) ಬಳಕೆಯ ಈ ನಂಬರ್ ಅಧಿಕೃತವೇ ಅಥವಾ ಅನಧಿಕೃತವೇ ;

(ಈ) ಈ ಖರೀದಿ ವ್ಯವಹರಣೆಯಲ್ಲಿ ಅವ್ಯವಹಾರಗಳು ನಡೆದಿವೆಯೇ ; ನಡೆದಿದ್ದಲ್ಲಿ ವಿವರಗಳನ್ನು ಒದಗಿಸುವುದು;

(ಉ) ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬುದ್ಧಿಮಾಂದ್ಯ ವಿದ್ಯಾರ್ಥಿಗಳ 'ವಿಶೇಷ ಶಾಲೆಗಳ ಶಿಕ್ಷಕರಿಗೆ ವೇತನದಲ್ಲಿ ದ್ವಿಮುಖ ನೀತಿ'

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :-**

೨೫೦೦ (೨೮೩೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬುದ್ಧಿಮಾಂದ್ಯ ವಿದ್ಯಾರ್ಥಿಗಳ **'ವಿಶೇಷ ಶಾಲೆಗಳ ಶಿಕ್ಷಕರಿಗೆ ವೇತನದಲ್ಲಿ ದ್ವಿಮುಖ ನೀತಿ'** ಅನುಸರಿಸುವುದರಿಂದ ಶಿಕ್ಷಕರಲ್ಲಿ

ತಾರತಮ್ಯ ಉಂಟಾಗಿರುವುದು ನಿವಾರಿಸಲು ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ;

(ಆ) ೧೯೮೯ ಗ್ರೇಡ್–ಎ ನೀತಿಯಲ್ಲಿ ಬುದ್ಧಿಮಾಂದ್ಯ ಎಷ್ಟು ಶಾಲೆಗಳಿಗೆ ಶಿಕ್ಷಕರನ್ನು ನೇಮಕ ಮಾಡಲಾಗಿದೆ; ಇವರಿಗೆ ನೀಡುತ್ತಿರುವ ವೇತನ ಎಷ್ಟು ;

(ಇ) ಶಿಶು ಕೇಂದ್ರಿಕೃತ ನೀತಿ ಅನ್ವಯ ವಿಶೇಷ ಶಾಲೆಯ ಶಿಕ್ಷಕರಿಗೆ ನೀಡುವ ವೇತನ ಎಷ್ಟು ;

(ಈ) ೧೮ ವರ್ಷದಿಂದ ಮೇಲ್ಪಟ್ಟ ೨೫ ವರ್ಷಗಳವರೆಗಿನ ಬುದ್ಧಿಮಾಂದ್ಯ ವಿದ್ಯಾರ್ಥಿಗಳಿಗೂ ಶಿಶು ಕೇಂದ್ರಿಕೃತ ನೀತಿ ಅನ್ವಯ ಪ್ರತಿ ವಿದ್ಯಾರ್ಥಿಗೆ ನೀಡುತ್ತಿರುವ ಅನುದಾನ ನೀಡಬೇಕೆಂಬ ಬೇಡಿಕೆಯನ್ನು ಕೂಡಲೇ ಈಡೇರಿಸಲು ಇಲಾಖೆ ಕ್ರಮ ಕೈಗೊಳ್ಳುವುದೇ; ಇದರಿಂದ ತಗಲುವ ಹೆಚ್ಚುವರಿ ವೆಚ್ಚ ಎಷ್ಟು ?

## ಮಂಗಳೂರು ವಿಮಾನ ನಿಲ್ದಾಣದ ರನ್‌ವೇ ನಿರ್ಮಾಣ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫೦೧ (೨೮೩೮) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತೀರ್ಣ ಮಾಡದೇ ಏರ್‌ಟ್ರಾಫಿಕ್ ಕಡಿಮೆ ಆಗಿರುವುದರಿಂದ ಅಂತರರಾಷ್ಟ್ರೀಯ ಮಾನ್ಯತೆ ಕಳೆದುಕೊಳ್ಳುವ ಭೀತಿಯಲ್ಲಿರುವುದು ಇಲಾಖೆ ಗಮನಕ್ಕೆ ಬಂದಿದೆಯೇ ;

(ಆ) ವಿಮಾನ ನಿಲ್ದಾಣದ ರನ್‌ವೇ ವಿಸ್ತೀರ್ಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ ಎಷ್ಟು ಮೀಟರ್ ವಿಸ್ತೀರ್ಣ ಮಾಡಲಾಗುವುದು ; ಇದಕ್ಕೆ ತಗಲುವ ವೆಚ್ಚ ಎಷ್ಟು ; ವಿವರ ನೀಡುವುದು ;

(ಇ) ಮಂಗಳೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತೀರ್ಣವನ್ನು ಖಾಸಗಿ ಸಹಭಾಗಿತ್ವದೊಂದಿಗೆ ನಿರ್ಮಾಣ ಮಾಡಲು ಇಲಾಖೆ ಕ್ರಮ ಕೈಗೊಳ್ಳುವುದೇ ;

(ಈ) ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ? (ವಿವರ ನೀಡುವುದು)

## ಮಣಿಪಾಲ ಅತ್ರಾಡಿಯಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೈ ಸ್ಪೀಡ್ ಏರ್‌ಪೋರ್ಟ್ ರೋಡ್ ನಿರ್ಮಾಣದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೫೦೨ (೨೮೩೬) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ,ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ವಿಮಾನ ನಿಲ್ದಾಣಕ್ಕೆ ಸಂಪರ್ಕ ಹೊಂದಲು ಮಣಿಪಾಲ ಅತ್ರಾಡಿಯಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೈ ಸ್ಪೀಡ್ ಏರ್‌ಪೋರ್ಟ್ ರೋಡ್‌ನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ ;

(ಆ) ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಮಂಗಳೂರು ಮುಖಾಂತರ ಕಳೆದ ೨೦೧೧-೧೨ ರಿಂದ ೨೦೧೪-೧೫ರವರೆಗೆ ಕರಾವಳಿ

ಪ್ರದೇಶದಲ್ಲಿ ಕೈಗೊಂಡ ಯೋಜನೆಗಳಾವುವು ; ಒಟ್ಟು ಖರ್ಚು ಮಾಡಿದ ಅನುದಾನ ಎಷ್ಟು ;

(ಇ) ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚುವರಿ ಅನುದಾನ ನೀಡುವುದರ ಮುಖಾಂತರ ಮಂಗಳೂರು ನಗರಪಾಲಿಕೆ ವ್ಯಾಪ್ತಿಯ ಮಂಗಳ ಕಾರ್ನೇಷ್ ರಿಂಗ್ ರೋಡ್‌ನ್ನು ಪ್ರವಾಸೋದ್ಯಮ ಕಾರ್ಯಚಟುವಟಿಕೆಗಳನ್ನು ಈ ಪ್ರಾಧಿಕಾರದ ಮುಖಾಂತರ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದೇ ;

(ಈ) ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚುವರಿ ಅನುದಾನ ನೀಡುವ ಬಗ್ಗೆ ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ?

## ಕರಾವಳಿಯಲ್ಲಿ ಪ್ರವಾಸೋದ್ಯಮಕ್ಕೆ ಪ್ರತ್ಯೇಕ ನಿಗಮ ಸ್ಥಾಪಿಸುವ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೫೦೩ (೨೮೩೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಕರ್ನಾಟಕದಲ್ಲಿ ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಲು ಎಸ್.ಇ.ಜೆಡ್ (S.E.Z)ಕಾನೂನಿನಲ್ಲಿ ಸಡಿಲುಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಎಸ್.ಇ.ಜೆಡ್(S.E.Z)ನಿಂದ ಪ್ರವಾಸೋದ್ಯಮವನ್ನು ಬೆಳೆಸಲು ಸಾಧ್ಯವಾಗಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) S.E.Z ಕಾನೂನು ಕೇರಳ, ಗೋವಾದಲ್ಲಿ ಸಡಿಲಿಸಿದ್ದರಿಂದ ಅಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

(ಇ) ಎಸ್.ಇ.ಜೆಡ್‌ಗೆ ಬದಲಾವಣೆ ತರಲು ರಾಜ್ಯ ಸರ್ಕಾರ ಸಲ್ಲಿಸಿದ ಪ್ರಸ್ತಾವನೆ ಏನು; (ವಿವರ ನೀಡುವುದು)

(ಈ) ಕರಾವಳಿ ಕರ್ನಾಟಕದ ಪ್ರವಾಸೋದ್ಯಮಕ್ಕೆ ಪ್ರತ್ಯೇಕ ನಿಗಮ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕ, ಶಿಕ್ಷಕಿಯರಿಗೆ ಡ್ರೆಸ್ ಕೋಡ್ ತರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೫೦೪ (೨೮೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿಕ್ಷಣ ಕ್ಷೇತ್ರದಲ್ಲಿ ಬದಲಾವಣೆಯಾದ ಪರಿಸ್ಥಿತಿ ಹೊಂದಿಕೊಂಡು ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕ, ಶಿಕ್ಷಕಿಯರಿಗೆ ಡ್ರೆಸ್ ಕೋಡ್ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ಇದ್ದರೆ ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯ ಪ್ರೌಢ ಶಾಲೆಗಳಲ್ಲಿ ೭೫ ವಿದ್ಯಾರ್ಥಿಗಳಿಗಿಂತ ಕಡಿಮೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ದಿಢೀರ್ ಫಲಿತಾಂಶ ಕಡಿಮೆ ಆಗಿರುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದರೆ, ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಈ) ಕಡಿಮೆ ವಿದ್ಯಾರ್ಥಿ ಇರುವ ಶಾಲೆಗಳನ್ನು ವಿಲೀನಗೊಳಿಸಿ ಶಿಕ್ಷಣ ಗುಣಮಟ್ಟವನ್ನು ಏರಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಶಿಕ್ಷಣ ಹಕ್ಕಿನ ಕಾಯ್ದೆ

**ಪ್ರೊ.ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ) :–**

೨೫೦೫ (೨೮೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ವರ್ಷ ಶಿಕ್ಷಣದ ಹಕ್ಕಿನ ಪ್ರಾವದಾನದ ಅಡಿಯಲ್ಲಿ ವಿದ್ಯಾರ್ಥಿಗಳೂ ಪ್ರವೇಶ ಪಡೆದಿದ್ದ ಅನೇಕ ಖಾಸಗಿ ಶಾಲೆಗಳು ಪ್ರಸ್ತುತ ವರ್ಷದಲ್ಲಿ ಆ ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಗಾಗಿ ತಗಾದೆ ಮಾಡುತ್ತಿದ್ದು ಶುಲ್ಕ ಪಾವತಿ ಮಾಡದೆ ವಿದ್ಯಾರ್ಥಿಗಳಿಗೆ ಪ್ರವೇಶ ನಿರಾಕರಿಸುತ್ತಿದೆ ಎನ್ನುವ ಸಂಗತಿ ನಿಜವೇ ;

(ಆ) ಸದರಿ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಆಯಾ ಶಾಲೆಗಳಿಗೆ ಬಿಡುಗಡೆ ಮಾಡಬೇಕಾಗಿದ್ದ ಅನುದಾನವನ್ನು ಸರ್ಕಾರ ಇದುವರೆವಿಗೂ ಬಿಡುಗಡೆ ಮಾಡಿಲ್ಲ ಎನ್ನುವುದು ನಿಜವೇ ;

(ಇ) ಪ್ರವೇಶ ಪಡೆಯಬೇಕಾಗಿರುವ ವಿದ್ಯಾರ್ಥಿಗಳ ಹಿತವನ್ನು ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಶಾಲೆಗಳಿಗೆ ಬಿಡುಗಡೆ ಮಾಡಬೇಕಾಗಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ಇತರ ಸೌಲಭ್ಯಗಳ ಹೆಸರಿನಲ್ಲಿ ಅನೇಕ ಶಾಲೆಗಳು ದುಬಾರಿ ಶುಲ್ಕವನ್ನು ಸಂಗ್ರಹಿಸುತ್ತಿವೆ ಎನ್ನುವುದು ನಿಜವೇ ;

(ಊ) ನಿಜವಾಗಿದ್ದಲ್ಲಿ, ಸರ್ಕಾರ ಈ ನಿಟ್ಟಿನಲ್ಲಿ ಏನು ಕ್ರಮ ಕೈಗೊಂಡಿದೆ ?

## ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಿಗೆ ಗೌರವ ಧನ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೫೦೬ (೨೮೪೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಿಗೆ ಗೌರವ ಧನ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಆ) ಅತಿಥಿ ಉಪನ್ಯಾಸಕರಿಗೆ ಗೌರವಧನ ಕುರಿತಾಗಿ ಯು.ಜಿ.ಸಿ. ನಿರ್ಧರಿಸುವ ಮಾನದಂಡವೇನು ;

(ಇ) ಇದೇ ಅರ್ಹತೆ ಹೊಂದಿದ್ದು, ವಿಶ್ವವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ಎಷ್ಟು ಗೌರವಧನ ನೀಡಲಾಗುತ್ತಿದೆ ;

(ಈ) ಸರ್ಕಾರಿ ಪ್ರಥಮದರ್ಜೆ ಕಾಲೇಜು ಅತಿಥಿ ಉಪನ್ಯಾಸಕರಿಗೂ ಯುಜಿಸಿ ಮಾನದಂಡದಂತೆ ಗೌರವಧನ ನೀಡಲು ಸರ್ಕಾರ ಏಕೆ ಅದೇ ಮಾನದಂಡವನ್ನು ಅನುಸರಿಸದಿರಲು ಕಾರಣವೇನು ;

(ಉ) ಅತಿಥಿ ಉಪನ್ಯಾಸಕರಿಗೆ ಎಂದಿನಿಂದ ಯು.ಜಿ.ಸಿ. ಮಾನದಂಡದಂತೆ ಗೌರವಧನ ನೀಡಲಾಗುವುದು ?

## I.C.D.S. ಯೋಜನೆಯಡಿಯಲ್ಲಿ ಕಳಪೆ ಆಹಾರ ಸರಬರಾಜು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೫೦೭ (೨೮೪೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) I.C.D.S.ಯೋಜನೆಯಡಿಯಲ್ಲಿ ೨೦೧೩–೧೪ನೇ ಸಾಲಿನಲ್ಲಿ ನಿಗದಿಗೊಳಿಸಿರುವ ಅನುದಾನದ ಮೊತ್ತ, ಬಿಡುಗಡೆಯಾದ ಮೊತ್ತ ಹಾಗೂ ವೆಚ್ಚದ ಮಾಹಿತಿಯನ್ನು ಒದಗಿಸುವುದು ;

(ಆ) ಪೂರಕ ಪೌಷ್ಠಿಕ ಆಹಾರ ಸರಬರಾಜು ಮಾಡಲು ಸರ್ಕಾರ ಅನುಸರಿಸುತ್ತಿರುವ ನೀತಿಗಳು ಯಾವುವು ; (ವಿವರ ನೀಡುವುದು)

(ಇ) I.C.D.S.ಯೋಜನೆಯಡಿಯಲ್ಲಿ ಕಳಪೆ ಆಹಾರ ಸರಬರಾಜು ಮಾಡಿದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಕ್ರಮ ಜರುಗಿಸಿದ್ದಲ್ಲಿ ವಿವರ ಒದಗಿಸುವುದು ?

# ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೫೦೮ (೨೮೪೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಒಟ್ಟಾರೆ ಯೋಜನೆಗಳ ಸಂಖ್ಯೆ ಎಷ್ಟು ;

(ಆ) ಈ ಯೋಜನೆಗಳಲ್ಲಿ ಎಷ್ಟು ಕೇಂದ್ರ ಸರ್ಕಾರಕ್ಕೆ ಒಳಪಟ್ಟಿವೆ ಹಾಗೂ ರಾಜ್ಯ ಸರ್ಕಾರಕ್ಕೆ ಒಳಪಟ್ಟಿರುವ ಯೋಜನೆಗಳೆಷ್ಟು ;

(ಇ) ಈ ಯೋಜನೆಗಳ ಸಾಧಕ–ಬಾಧಕಗಳ ಬಗ್ಗೆ ಬಾಹ್ಯ ಸಂಸ್ಥೆಯಿಂದ ಮೌಲ್ಯಮಾಪನ ಮಾಡಿಸಲಾಗಿದೆಯೇ ;

(ಈ) ಮಾಡಿಸಿದ್ದಲ್ಲಿ, ಅದರ ವಿವರ ನೀಡುವುದು ಹಾಗೂ ಈ ಸಂಸ್ಥೆಯ ಶಿಫಾರಸ್ಸಿನ ಮೇಲೆ ತೆಗೆದುಕೊಂಡ ಕ್ರಮಗಳೇನು ;

(ಉ) ಇಲ್ಲವಾದಲ್ಲಿ, ಯಾವಾಗ ಮಾಡಿಸಲಾಗುವುದು ?

## ರಾಜ್ಯದಲ್ಲಿ N.R.E.G.A. ಯೋಜನೆಯಡಿಯಲ್ಲಿ ಅನುದಾನ ದುರ್ಬಳಕೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೫೦೯ (೨೮೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) N.R.E.G.A. ಯೋಜನೆಯಡಿಯಲ್ಲಿ ಕಳೆದ ೫ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಹಾಗೂ ವೆಚ್ಚ ಮಾಡಿದ ಹಣದ ವಿವರವನ್ನು ಒದಗಿಸುವುದು ;

(ಆ) ಈ ಅನುದಾನವನ್ನು ಗುರಿಗನುಗುಣವಾಗಿ (Target Oriented) ಬಿಡುಗಡೆ ಮಾಡಲಾಗಿದೆಯೋ ಅಥವಾ ಕೆಲಸ ಬೇಡಿಕೆ (Work Demand) ಆಧಾರದ ಮೇಲೆ ಬಿಡುಗಡೆ ಮಾಡಲಾಗಿದೆಯೇ ; (ತಿಳಿಸುವುದು)

(ಇ) ಈವರೆಗೆ ರಾಜ್ಯದಲ್ಲಿ N.R.E.G.A. ಯೋಜನೆಯಡಿಯಲ್ಲಿ ಅನುದಾನದ ದುರ್ಬಳಕೆಗೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳಲ್ಲಿ ಮೊಕದ್ದಮೆ ಹೂಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಅನುದಾನರಹಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರಿಗೆ "ಜ್ಯೋತಿ ಸಂಜೀವಿನಿ"

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೫೧೦ (೨೮೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಹಾಗೂ ಅನುದಾನ ರಹಿತ ಶಾಲಾ/ಕಾಲೇಜುಗಳ ಶಿಕ್ಷಕರಿಗೂ "ಜ್ಯೋತಿ ಸಂಜೀವಿನಿ" ಯೋಜನೆ ವಿಸ್ತರಿಸುವ ಕುರಿತು ಸರ್ಕಾರದ ನಿಲುವೇನು ;

(ಆ) ಯಾವ ಸಮಯ ಮಿತಿಯ ಒಳಗೆ ಈ ಸೌಲಭ್ಯವನ್ನು ಒದಗಿಸಲಾಗುವುದು ?

## ನ್ಯೂ ಪೆನ್ಷನ್ ಸ್ಕೀಮ್

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೫೧೧ (೨೮೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ನ್ಯೂ ಪೆನ್ಷನ್ ಸ್ಕೀಮ್" ಅನ್ನು ಯಾವ ವರ್ಷದಿಂದ ಜಾರಿಗೊಳಿಸಲಾಯಿತು ;

(ಆ) "ನ್ಯೂ ಪೆನ್ಷನ್ ಸ್ಕೀಮ್"ಗೆ ಭರ್ತಿ ಮಾಡಿದ ಹಣವನ್ನು ಮರು ಪಾವತಿಗೆ ಸೂಚಿಸಿದ್ದು ನಿಜವೇ ;

(ಇ) ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ "ನ್ಯೂ ಪೆನ್ಷನ್ ಸ್ಕೀಮ್" ನ ಅಡಿ ಸೌಲಭ್ಯ ನೀಡಲು ಇರುವ ಅಡೆತಡೆ ಹಾಗೂ ತೊಂದರೆಗಳೇನು ;

(ಈ) ತೊಂದರೆ ನಿವಾರಿಸಿ "ನ್ಯೂ ಪೆನ್ಷನ್ ಸ್ಕೀಮ್" ಅನ್ನು ಯಾವಾಗ ಕೊಡಮಾಡಲಾಗುವುದು ?

## ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಉಪನ್ಯಾಸಕರಿಗೆ ವಿಶೇಷ ಬೋಧನಾ ಭತ್ಯೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೫೧೨ (೨೮೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಶಿಕ್ಷಕ/ಉಪನ್ಯಾಕರಿಗೆ ವಿಶೇಷ ಬೋಧನಾ ಭತ್ಯೆ (Exgratia) ಕೊಡಲು ಇರುವ ಮಾನದಂಡಗಳೇನು ;

(ಆ) ವಿಜಯಪುರ, ಬಾಗಲಕೋಟೆ, ಬೆಳಗಾವಿ (ಚಿಕ್ಕೋಡಿ) ಶೈಕ್ಷಣಿಕ ಜಿಲ್ಲೆಗಳಲ್ಲಿ ಇರುವ ಪ್ರತಿ ಶಾಲಾ ಕಾಲೇಜುಗಳಲ್ಲಿ ೦೧.೦೮.೨೦೦೮ರ ನಂತರ ಇಲ್ಲಿಯವರೆಗೂ ನೇಮಕಗೊಂಡ ಬೋಧಕರ ಸಂಖ್ಯೆ ಎಷ್ಟು ; (ಬೋಧಕರ ವಿವರವನ್ನು ಶಾಲಾ-ಕಾಲೇಜುವಾರು ನೀಡುವುದು)

(ಇ) ಪ್ರೌಢ ಶಾಲಾ ಮುಖ್ಯ ಶಿಕ್ಷಕರು, ಪದವಿಪೂರ್ವ ಪ್ರಾಚಾರ್ಯರು ಬೋಧನೆಯಲ್ಲಿ ತೊಡಗಿದ್ದರೂ ಕೂಡ ಅವರಿಗೆ ವಿಶೇಷ ಬೋಧನಾ ಭತ್ಯೆ ಕೊಡದಿರುವುದಕ್ಕೆ ಕಾರಣಗಳೇನು ;

(ಈ) ೦೧.೦೮.೨೦೦೮ರ ನಂತರ ನೇಮಕಗೊಂಡ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಬೋಧಕರ ಸಂಖ್ಯೆ ಎಷ್ಟು ;

(ಉ) ಅವರೆಲ್ಲರಿಗೂ ವಿಶೇಷ ಬೋಧನಾ ಭತ್ಯೆ ನೀಡಿದ್ದಲ್ಲಿ ಆಗಬಹುದಾದ ವಾರ್ಷಿಕ ಹಣಕಾಸು ಹೊರೆ ಎಷ್ಟು ?

## ಶಿಕ್ಷಣ ಕಾಯ್ದೆ ೧೯೮೩ (೧೯೯೫) ರ ತಿದ್ದುಪಡಿ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೫೧೩ (೨೮೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಶಿಕ್ಷಣ ಕಾಯ್ದೆ ೧೯೮೩ (೧೯೯೫)ರ ನಿಯಮ ೮೭ ಅನ್ನು ಯಾವಾಗ ತಿದ್ದುಪಡಿ ಮಾಡಲಾಯಿತು ;

(ಆ) ತಿದ್ದುಪಡಿಗೆ ಮುಂಚೆ ತಿದ್ದುಪಡಿಯಾದ ನಂತರ ಇರುವ ಅಂಶಗಳ ವಿವರಗಳೇನು ;

(ಇ) ಸದರಿ ತಿದ್ದುಪಡಿಯಿಂದ ಇಡೀ ಅನುದಾನಿತ ವ್ಯವಸ್ಥೆಗೆ ಸಮಸ್ಯೆಯಾಗಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಖಾಸಗಿ ಅನುದಾನಿತ/ಅನುದಾನ ರಹಿತ ಸಂಸ್ಥೆಗಳನ್ನು (ಶಾಲಾ/ಕಾಲೇಜುಗಳನ್ನು) ಸರ್ಕಾರ ವಹಿಸಿಕೊಳ್ಳುವ (ರಾಷ್ಟ್ರೀಕರಣ) ಚಿಂತನೆ ಇದೆಯೇ ;

(ಉ) ಸರ್ಕಾರಿ ಸಂಸ್ಥೆಗಳು ಹಾಗೂ ಅನುದಾನಿತ ಸಂಸ್ಥೆಗಳ ಮಧ್ಯ ತಾರತಮ್ಯ ನಿವಾರಿಸುವಲ್ಲಿ ಸರ್ಕಾರದ ನಿಲುವೇನು ?

# ಗ್ರಂಥಾಲಯಗಳಿಗೆ ದಿನ ಪತ್ರಿಕೆ ಪೂರೈಕೆ.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೧೪ (೨೮೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಗ್ರಂಥಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರ ಮತ್ತು ಗ್ರಾಮಾಂತರದಲ್ಲಿರುವ ಒಟ್ಟು ಗ್ರಂಥಾಲಯಗಳ ಸಂಖ್ಯೆ ಎಷ್ಟು ;

(ಇ) ಸದರಿ ಗ್ರಂಥಾಲಯಗಳಿಗೆ ನಿರ್ವಹಣೆಯ ವೆಚ್ಚವಾಗಿ ಕಳೆದ ಎರಡು ವರ್ಷಗಳಿಂದ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಈ) ಈ ಗ್ರಂಥಾಲಯಗಳಿಗೆ ದಿನಪತ್ರಿಕೆಗಳು ಸರಬರಾಜಾಗದೇ ಸಾರ್ವಜನಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

## ಕುಡಿಯುವ ನೀರಿನ ಯೋಜನೆ.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೧೫ (೨೮೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಹು ಗ್ರಾಮಗಳ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಗೊಳಿಸಲಾಗಿದೆಯೇ ;

(ಆ) ಹಾಗಿದ್ದರೆ, ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ ;

(ಇ) ಸದರಿ ಯೋಜನೆಗಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ವೆಷ್ಟು ? (ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನ ಪ್ರತ್ಯೇಕ ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಗೆ ಬರುವ ಹೋಟೇಲ್ ಮತ್ತು ರೆಸ್ಟೋರೆಂಟ್‌ಗಳು.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೧೬ (೨೮೭೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಯಡಿಯಲ್ಲಿ ಬರುವಂತಹ ಹೋಟೇಲ್ ಮತ್ತು ರೆಸ್ಟೋರೆಂಟ್‌ಗಳ ಸಂಖ್ಯೆ ಎಷ್ಟು ; ಯಾವ ಯಾವ ಸ್ಥಳಗಳಲ್ಲಿ ಈ ಹೋಟೇಲ್ ಮತ್ತು ರೆಸ್ಟೋರೆಂಟ್‌ಗಳನ್ನು ಪ್ರಾರಂಭಿಸಲಾಗಿದೆ ;

(ಆ) ಇವುಗಳ ನಿರ್ವಹಣೆಯ ಜವಾಬ್ದಾರಿಯನ್ನು ನೋಡಿಕೊಳ್ಳುವ ಅಧಿಕಾರ ಯಾರಿಗೆ ನೀಡಲಾಗಿದೆ ;

(ಇ) ರಾಜ್ಯದ ಕೆಲವೊಂದು ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಗೆ ಒಳಪಡುವ ಹೊಟೇಲ್‌ಗಳನ್ನು ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ ಯಾವ ಯಾವ ಹೊಟೇಲ್ ಮತ್ತು ರೆಸ್ಟೊರೆಂಟ್‌ಗಳನ್ನು ಮುಚ್ಚಲಾಗಿದೆ ; ಅವುಗಳನ್ನು ಮುಚ್ಚಲು ಕಾರಣಗಳೇನು ? (ವಿವರ ನೀಡುವುದು)

## ಪ್ರಾಥಮಿಕ ಶಾಲೆಗಳಲ್ಲಿ ಸಮವಸ್ತ್ರ ವಿತರಣೆ.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೧೭ (೨೮೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ಎಷ್ಟು ಶಾಲೆಗಳಿಗೆ ಸಮವಸ್ತ್ರವನ್ನು ವಿತರಣೆ ಮಾಡಲಾಯಿತು ; ಬಹುತೇಕ ಶಾಲೆಗಳಲ್ಲಿ ಸಮವಸ್ತ್ರ ವಿತರಣೆ ಮಾಡದಿರುವುದು ಸರ್ಕಾರ ಗಮನಿಸಿದೆಯೇ ;

(ಇ) ಹಾಗಿದ್ದರೆ ಪ್ರಸಕ್ತ ಸಾಲಿನಲ್ಲಿ ಶಾಲಾ ಮಕ್ಕಳಿಗೆ ಸಮವಸ್ತ್ರಗಳ ಕೊರತೆಯಾಗದಂತೆ ಸರ್ಕಾರ ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ? (ವಿವರ ನೀಡುವುದು)

## ಗ್ರೂಪ್ – ಡಿ ನೌಕರರ ಖಾಯಂ.

**ಶ್ರೀ ಎಂ.ಡಿ.ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೫೧೮(೨೮೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಗ್ರಾಮಪಂಚಾಯತ್‌ಗಳಲ್ಲಿ ಹಲವಾರು ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಗ್ರೂಪ್–ಡಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಹಾಗಿದ್ದಲ್ಲಿ, ಸದರಿ ಗ್ರೂಪ್–ಡಿ ನೌಕರರುಗಳನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಅದು ಯಾವ ಹಂತದಲ್ಲಿದೆ ;

(ಇ) ಪ್ರತಿ ಗ್ರಾಮ ಪಂಚಾಯತ್‌ಗಳಲ್ಲಿರುವ ಗುತ್ತಿಗೆ ಆಧಾರದ ಗ್ರೂಪ್–ಡಿ ನೌಕರರ ಹೆಸರು ಮತ್ತು ಅವರು ಸೇವೆಗೆ ಸೇರಿದ ದಿನಾಂಕ ಮತ್ತು ಸೇವಾವಧಿಗಳ ವಿವರ ನೀಡುವುದು ;

## ಶಾಲೆಗಳಿಗೆ ಅನುದಾನ.

**ಶ್ರೀ ಎಂ.ಡಿ.ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೫೭೯(೨೮೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೯೯೫ ರಿಂದ ೨೦೦೪ರವರೆಗೆ ಆರಂಭವಾಗಿರುವ ಪ್ರಾಥಮಿಕ, ಪ್ರೌಢ, ಪದವಿಪೂರ್ವ ಶಾಲಾ ಕಾಲೇಜುಗಳನ್ನು ಅನುದಾನಕೊಳ್ಳಪಡಿಸಲು ಸರ್ಕಾರ ಚಿಂತಿಸಿದೆಯೇ ;

(ಆ) ಮುಂದಿನ ದಿನಗಳಲ್ಲಿ ಇದರ ಬಗ್ಗೆ ಸರ್ಕಾರದ ಕ್ರಮವೇನು ;

(ಇ) ಶಾಲಾ ಮತ್ತು ಕಾಲೇಜುಗಳನ್ನು ಸರ್ಕಾರಿ ಅನುದಾನಕ್ಕೊಳಪಡಿಸಲು ಇರುವ ಮಾನದಂಡಗಳೇನು ? (ಸಂಪೂರ್ಣ ವಿವರ ನೀಡುವುದು)

## ಹೊರಗುತ್ತಿಗೆ ನೌಕರರ ಖಾಯಂ.

**ಶ್ರೀ ಎಂ.ಡಿ.ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೫೨೦ (೨೮೮೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ವಿಶ್ವವಿದ್ಯಾಲಯ ಪ್ರಾರಂಭಗೊಂಡಿದ್ದು ಯಾವಾಗ ;

(ಆ) ಈ ವಿಶ್ವವಿದ್ಯಾಲಯದಲ್ಲಿ ಸದ್ಯ ಹೊರಗುತ್ತಿಗೆ ಆಧಾರದ ಮೇಲೆ ಎಷ್ಟು ಜನ ಯಾವ ಯಾವ ಹುದ್ದೆಯಲ್ಲಿ ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಇ) ಸರ್ಕಾರ ಇವರ ಸೇವೆಯನ್ನು ಖಾಯಂಗೊಳಿಸಲು ಇದುವರೆಗೆ ಕೈಗೊಂಡ ಕ್ರಮಗಳೇನು ;

(ಈ) ಇವರ ಸೇವೆಯನ್ನು ಖಾಯಂಗೊಳಿಸಲು ಕ್ರಮ ವಹಿಸಲಾಗುವುದೇ ?

## ತುಮಕೂರು ಜಿಲ್ಲೆಯ ಅಂಗನವಾಡಿ ಕಟ್ಟಡಗಳು.

**ಶ್ರೀ ಎಂ.ಡಿ.ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೫೨೧ (೨೮೭೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ನಡೆಯುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ;

(ಆ) ಸ್ವಂತ ಕಟ್ಟಡ ಇರುವ ಅಂಗನವಾಡಿಗಳು ಎಷ್ಟು; ಅವು ಯಾವುವು ; (ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿಗಳ ಬಗ್ಗೆ ವಿವರ ನೀಡುವುದು)

(ಇ) ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿಗಳನ್ನು ಸ್ವಂತ ಕಟ್ಟಡ ಮಾಡಲು ಸರ್ಕಾರ ತೀರ್ಮಾನಿಸಿದೆಯೆ ?

## ಕನ್ನಡ ಪುಸ್ತಕ ಖರೀದಿಗೆ ಅನುದಾನ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೫೨೨ (೨೮೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಪುಸ್ತಕ ಪ್ರಾಧಿಕಾರಕ್ಕೆ ೨೦೧೦ ರಿಂದ ಕನ್ನಡ ಪುಸ್ತಕಗಳ ಖರೀದಿಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು; (ವಿವರ ನೀಡಿ)

(ಆ) ೨೦೧೦ ರಿಂದ ಬಿಡುಗಡೆ ಮಾಡಿರುವ ಹಣದಲ್ಲಿ ಎಷ್ಟು ಮೊತ್ತದ ಪುಸ್ತಕಗಳನ್ನು ಖರೀದಿ ಮಾಡಲಾಗಿದೆ ; ಎಷ್ಟು ಹಣವನ್ನು ಇದುವರೆವಿಗೂ ವಿನಿಯೋಗಿಸಲಾಗಿಲ್ಲ ; ವಿನಿಯೋಗಿಸದಿರಲು ಕಾರಣವೇನು ;

(ಇ) ೨೦೧೦ ರಿಂದ ಬಿಡುಗಡೆ ಮಾಡಿದ ಹಣದಲ್ಲಿ ಪುಸ್ತಕಗಳ ಖರೀದಿ ಮಾಡದೆ ಉಳಿಸಿಕೊಂಡಿರುವ ಕಾರಣದಿಂದಾಗಿ ೨೦೧೧ ರಲ್ಲಿ ಬಿಡುಗಡೆಯಾಗಬೇಕಾದ ಹಣ ಇದುವರೆವಿಗೂ ಬಿಡುಗಡೆಯಾಗಿಲ್ಲದಿರುವುದು ನಿಜವೇ ; ಅನುದಾನದ ಸಮರ್ಪಕ ಬಳಕೆಗೆ ಯಾವ ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು ; ಬೇಕಾಗುವ ಕಾಲಮಿತಿ ಏನು ?

## ಹೊಸ ಪದವಿ ಕಾಲೇಜುಗಳು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೫೨೩ (೨೮೮೮) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊಸದಾಗಿ ಎಷ್ಟು ಪದವಿ ಕಾಲೇಜುಗಳನ್ನು ಆರಂಭಿಸಲಾಗಿದೆ ; (ವಿವರ ನೀಡುವುದು)

(ಆ) ಹೊಸ ಪದವಿ ಕಾಲೇಜುಗಳಿಗೆ ಯಾವ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ಸದರಿ ಪದವಿ ಕಾಲೇಜುಗಳಿಗೆ ಒಟ್ಟು ಎಷ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ತುಂಬಲಾಗಿದೆ ;

(ಈ) ನೇಮಕ ಮಾಡಲಾದವರಿಗೆ ಸಮರ್ಪಕವಾಗಿ ವೇತನ ನೀಡಲಾಗುತ್ತಿದೆಯೆ ; ಇಲ್ಲವಾದಲ್ಲಿ, ಇವರುಗಳಿಗೆ ಎಷ್ಟು ತಿಂಗಳಿಂದ ವೇತನ ಬಾಕಿ ಇರುತ್ತದೆ ;

(ಉ) ಇವರುಗಳಿಗೆ ವೇತನ ನೀಡಲು ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಕಮಲಾಪುರ ಕೆರೆ ರಸ್ತೆ ಅಭಿವೃದ್ಧಿ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೫೨೪ (೨೮೮೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಶ್ವ ಪಾರಂಪರಿಕ ಮಾನ್ಯತೆಯುಳ್ಳ ಹಂಪಿಯ ಕಮಲಾಪುರ ಕೆರೆಯ ಪಕ್ಕದಲ್ಲಿನ ರಸ್ತೆ ವಿಸ್ತರಣೆ ಮತ್ತು ಪರ್ಯಾಯ ರಸ್ತೆಯು ನಿರ್ಮಾಣವಾಗುತ್ತಿರುವುದು ನಿಜವೆ ;

(ಆ) ಸದರಿ ರಸ್ತೆಗೆ ಕೇಂದ್ರ ಪುರಾತತ್ವ ಇಲಾಖೆ ಸಾಕಷ್ಟು ವಿರೋಧ ತೋರಿರುವುದು ನಿಜವೆ ; ನಿಜವಾಗಿದ್ದಲ್ಲಿ, ಕಾರಣವೇನು;

(ಇ) ಸದರಿ ರಸ್ತೆಗೆ ಬದಲಾಗಿ ಗಾಳೆಮ್ಮ ಗುಡಿಯಿಂದ ಹಂಪಿ ವಿಶ್ವವಿದ್ಯಾಲಯಕ್ಕೆ ಹೋಗುವ ಬೈಪಾಸ್ ರಸ್ತೆ ಮೂಲಕ ಕಂಪ್ಲಿಗೆ ಸಂಪರ್ಕ ಕಲ್ಪಿಸುವ ರಸ್ತೆ ನಿರ್ಮಿಸಬಹುದೆಂದು ಸಲಹೆ ನೀಡಿರುವುದು ನಿಜವೆ ;

(ಈ) ಆದರೆ, ಕಮಲಾಪುರ ಕೆರೆಯ ಪಕ್ಕ ರಸ್ತೆ ಅಭಿವೃದ್ಧಿ ಮಾಡುತ್ತಿರುವ ಫಲವಾಗಿ ಹಂಪಿಯನ್ನು ವಿಶ್ವ ಪಾರಂಪರಿಕ ಪಟ್ಟಿಯಿಂದ ಕೈ ಬಿಡುವ ಅಪಾಯುವಿಲ್ಲವೇ ; ಹಾಗಿದ್ದಲ್ಲಿ, ಸದರಿ ರಸ್ತೆ ನಿರ್ಮಾಣವನ್ನು ನಿಲ್ಲಿಸಿ, ಕೇಂದ್ರ ಪುರಾತತ್ವ ಇಲಾಖೆಯ ಸಲಹೆಯಂತೆ ಗಾಳೆಮ್ಮ ಗುಡಿಯ ಬಳಿ ರಸ್ತೆ ಅಭಿವೃದ್ಧಿ ನಡೆಸಲು ಇರುವ ತೊಂದರೆ ಏನು ?

## ಕಲಾ ಹಾಗೂ ಭಾಷಾ ಶಿಕ್ಷಕರ ಖಾಲಿ ಹುದ್ದೆಗಳು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೫೨೫ (೨೮೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೮ನೇ ತರಗತಿಯನ್ನು ಉನ್ನತೀಕರಿಸಿ, ೬ ರಿಂದ ೮ನೇ ತರಗತಿಗಳ ಕಲಾ ಹಾಗೂ ಭಾಷೆ ವಿಷಯಕ್ಕೆ ಪದವಿ ಶಿಕ್ಷಕರನ್ನು ನೇಮಕಾತಿ ಮಾಡಲು ಮುಂದಾಗಿರುವುದು ನಿಜವೇ ;

(ಆ) ಸರ್ಕಾರದ ನಿಯಮಾವಳಿಯಂತೆ ಶೇಕಡ ೫೦ ಬಡ್ತಿ ಹಾಗೂ ಶೇಕಡ ೫೦ ನೇರ ನೇಮಕ ಮೂಲಕ ಭರ್ತಿ ಮಾಡಿಕೊಳ್ಳಬೇಕು ಎನ್ನುವ ನಿಯಮವಿರುವುದು ನಿಜವೇ ;

(ಇ) ಪ್ರಸ್ತುತ ಅಗತ್ಯವಿರುವ ಕಲಾ ಹಾಗೂ ಭಾಷೆ ಪದವಿ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; ಈಗ ನೇಮಕಾತಿ ಮಾಡಿಕೊಳ್ಳಲು ಮುಂದಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ನೇಮಕಾತಿಯಲ್ಲಿ ಶೇಕಡ ೫೦ ರ ಬಡ್ತಿ ನಿಯಮಗಳನ್ನು ಕೈ ಬಿಡುತ್ತಿರುವುದು ನಿಜವೇ; ನಿಜವಾಗಿದ್ದಲ್ಲಿ, ಕಾರಣವೇನು ?

# ಅಂಗನವಾಡಿ ಮಕ್ಕಳ ಪೌಷ್ಟಿಕತೆ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೫೨೬ (೨೮೯೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯ ಅಂಗನವಾಡಿ ಮಕ್ಕಳ ಸಂಖ್ಯೆ ಎಷ್ಟು ; ಇವರಲ್ಲಿ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; ಸುಮಾರು ೨೦೦೦ಕ್ಕೂ ಹೆಚ್ಚು ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿರುವುದು ನಿಜವೇ ;

(ಆ) ಅಂಗನವಾಡಿ ಮಕ್ಕಳ ಪೌಷ್ಟಿಕತೆಗಾಗಿ ಸರ್ಕಾರದಿಂದ ಯಾವ ರೀತಿಯ ಪೌಷ್ಟಿಕ ಆಹಾರವನ್ನು ಉಚಿತವಾಗಿ ನೀಡಲಾಗುತ್ತಿದೆ; ಕೊಪ್ಪಳ ಜಿಲ್ಲೆಯ ಅಂಗನವಾಡಿ ಮಕ್ಕಳಿಗೂ ಪೌಷ್ಟಿಕ ಆಹಾರ ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಸಾವಿರಾರು ಮಕ್ಕಳಲ್ಲಿ ಅಪೌಷ್ಟಿಕತೆ ಕಾಣಿಸಿಕೊಳ್ಳಲು ಕಾರಣವೇನು ;

(ಇ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಆಹಾರ ಪೂರೈಕೆಗೆ ಅನುದಾನ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೨೭ (೨೮೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ೨೦೧೩-೨೦೧೪ ರಿಂದ ೨೦೧೪-೧೫ನೇ ಸಾಲಿನವರೆಗೆ ಅಂಗನವಾಡಿ ಮಕ್ಕಳಿಗೆ, ಬಾಣಂತಿಯರಿಗೆ, ಗರ್ಭಿಣಿಯರಿಗೆ ನೀಡುವ ಆಹಾರ ಪೂರೈಕೆ ಕುರಿತು ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಅನುದಾನವನ್ನು ಸಮರ್ಪಕವಾಗಿ ಉಪಯೋಗಿಸಿ ಕೊಳ್ಳಲಾಗಿದೆಯೇ ;

(ಇ) ಆಹಾರ ಪೂರೈಕೆಯನ್ನು ಯಾವ ಏಜೆನ್ಸೀಯವರಿಗೆ ಗುತ್ತಿಗೆ ನೀಡಲಾಗಿದೆ; ಗುತ್ತಿಗೆಯ ಕರಾರುಗಳೇನು ;

(ಈ) ಆಹಾರ ಪದಾರ್ಥಗಳನ್ನು ಖರೀದಿಸಲು ಇರುವ ಮಾನದಂಡಗಳೇನು; ಮಾನದಂಡಗಳನ್ನು ನಿಮಯಗಳನ್ನು ಗಾಳಿಗೆ ತೂರಿ ಖರೀದಿಸಿರುವ ಪ್ರಕರಣಗಳೇನಾದರೂ ಬೆಳಕಿಗೆ ಬಂದಿವೆಯೇ; ಬಂದಿದ್ದಲ್ಲಿ, ವಿವರಗಳನ್ನು ನೀಡುವುದು ;

(ಉ) ಅಂತಹ ಪ್ರಕರಣಗಳು ಬೆಳಕಿಗೆ ಬಂದಿದ್ದಲ್ಲಿ ಹೆಚ್ಚುವರಿ ಮಾಡಲಾದ ಪಾವತಿಯನ್ನು ವಸೂಲು ಮಾಡಲಾಗಿದೆಯೇ ?

## ಕುಡಿಯುವ ನೀರಿನ ಯೋಜನೆಗಾಗಿ ಕೊಳವೆ ಬಾವಿಗಳು.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೨೮ (೨೮೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಕೊಪ್ಪಳ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕುಡಿಯುವ ನೀರಿನ ಯೋಜನೆಗಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ನೀರು ದೊರಯದೇ ವಿಫಲವಾದ ಕೊಳವೆಬಾವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕುಡಿಯುವ ನೀರಿನ ಯೋಜನೆಗಾಗಿ ಸರ್ಕಾರದಿಂದ ಮಂಜೂರು ಮಾಡಲಾದ ಅನುದಾನ ಎಷ್ಟು ;

(ಈ) ಇಲ್ಲಿಯವರೆಗೂ ಸದರಿ ಅನುದಾನದಲ್ಲಿ ಬಳಕೆಯಾದ ಅನುದಾನ, ಬಾಕಿ ಉಳಿದ ಅನುದಾನ ಎಷ್ಟು ;

(ಉ) ಇನ್ನೂ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳು ಯಾವುವು; ಅವುಗಳ ವಿವರಗಳನ್ನು ತಾಲ್ಲೂಕುವಾರು ನೀಡುವುದು ;

(ಊ) ಸದರಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಇಲಾಖೆ ಯಾವ ಕ್ರಮ ಕೈಗೊಂಡಿದೆ ?

## ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕಟ್ಟಡ ನಿರ್ಮಾಣ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೨೯ (೨೮೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕಟ್ಟಡಗಳ ನಿರ್ಮಾಣಕ್ಕೆಂದು ನೀಡಲಾದ ಅನುದಾನವೆಷ್ಟು ; (ಸದರಿ ಅನುದಾನದಲ್ಲಿ ನಿರ್ಮಿಸಿದ ಕಟ್ಟಡಗಳ ಸಂಖ್ಯೆ ಹಾಗೂ ವಿವರಗಳನ್ನು ನೀಡುವುದು)

(ಆ) ಸದರಿ ಕಟ್ಟಡಗಳ ಗುಣಮಟ್ಟವನ್ನು ವೀಕ್ಷಿಸಲು ಯಾವ ಸಿಬ್ಬಂದಿಗಳನ್ನು ನಿಯೋಜಿಸಿದೆ ;

(ಇ) ಸರ್ವಶಿಕ್ಷಣ ಅಭಿಯಾನದಡಿಯಲ್ಲಿರುವ ಬ್ಲಾಕ್ ಅಭಿಯಂತರರು ಹಾಗೂ ಜಿಲ್ಲಾ ಅಭಿಯಂತರರ ಹುದ್ದೆಗಳು ಭರ್ತಿ ಇವೆಯೇ ;

(ಈ) ಇಲ್ಲವಾದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

# ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಂಖ್ಯೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೩೦ (೨೮೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) (ಸದರಿ ಶಾಲೆಗಳಲ್ಲಿ ಮಂಜೂರಾಗಿರುವ ಹುದ್ದೆಗಳು ಭರ್ತಿ ಇರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ವಿವರಗಳನ್ನು ನೀಡುವುದು)

(ಆ) ಸದರಿ ಎಲ್ಲಾ ಶಾಲೆಗಳಲ್ಲಿ ಆಂಗ್ಲ ಭಾಷೆ ಶಿಕ್ಷಕರ ಕೊರತೆಯೇನಾದರೂ ಇದೆಯೇ ; ಇದ್ದಲ್ಲಿ, ಇದ್ದಕ್ಕಾಗಿ, ಇಲಾಖೆಯವರು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದಾರೆಯೇ ;

(ಇ) ಇಲಾಖೆಯವರಿಂದ ವರದಿ ಸರ್ಕಾರಕ್ಕೆ ಸ್ವೀಕೃತವಾಗಿದ್ದಲ್ಲಿ ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು ;

(ಈ) ಕೊಪ್ಪಳ ಜಿಲ್ಲೆಯಲ್ಲಿನ ಶಿಕ್ಷಕರ ಕೊರತೆಯನ್ನು ನೀಗಿಸಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದು ?

## ರಾಜೀವ್‌ಗಾಂಧಿ ಚೈತನ್ಯ ಯೋಜನೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೩೧ (೨೮೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜೀವ್ ಗಾಂಧಿ ಚೈತನ್ಯ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆಯೇ ;

(ಆ) ಅನುಷ್ಠಾನಗೊಳಿಸಿದ್ದಲ್ಲಿ, ರಾಜ್ಯ ಎಷ್ಟು ಗ್ರಾಮ ಪಂಚಾಯತಿಗಳಿಂದ ಎಷ್ಟು ನಿರುದ್ಯೋಗಿ ಯುವಕ ಯುವತಿಯರನ್ನು ಗುರುತಿಸಲಾಗಿದೆ ; (ವಿವರಗಳನ್ನು ನೀಡುವುದು)

(ಇ) ಗುರುತಿಸಲಾದ ನಿರುದ್ಯೋಗಿಗಳಿಗೆ ಯಾವ ತರಹದ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ; (ಇಲ್ಲಿಯವರೆಗೂ ಸದರಿ ನಿರುದ್ಯೋಗಿಗಳಿಗೆ ನೀಡಲಾದ ತರಬೇತಿ ವಿವರಗಳನ್ನು ನೀಡುವುದು)

(ಈ) ಇದಕ್ಕಾಗಿ, ಇಲ್ಲಿಯವರೆಗೂ ಪ್ರತಿ ಗ್ರಾಮ ಪಂಚಾಯತಿಗೆ ನೀಡಲಾದ ಅನುದಾನ ಎಷ್ಟು ; ಸದ್ಯ ಈ ಯೋಜನೆಯ ಪ್ರಗತಿ ಏನು ?

# ಬೆಳಗಾವಿ ನಗರಕ್ಕೆ ಮೆಟ್ರೋ ರೈಲ್ವೆ .

## ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ)

೨೫೩೨ (೨೮೭೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರವು ಅತೀ ವೇಗವಾಗಿ ಬೆಳೆಯುತ್ತಿರುವುದರಿಂದ ಬಸ್ಸಿನ ತೊಂದರೆ ಹಾಗೂ ಟ್ರಾಫಿಕ್ ಹೆಚ್ಚಾಗುತ್ತಿರುವುದರಿಂದ ಮೆಟ್ರೋ ರೈಲಿನ ಅವಶ್ಯಕತೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರಿನಲ್ಲಿ ಮೆಟ್ರೋ ರೈಲ್ವೆಗೆ ಕೇಂದ್ರ ಸರ್ಕಾರ ಸಹಾಯ ಮಾಡಿದಂತೆ, ಬೆಳಗಾವಿಯಲ್ಲಿ ಮೆಟ್ರೋ ರೈಲ್ವೆ ಪ್ರಾರಂಭಿಸಲು ಸರ್ವೆ ಕೆಲಸ ಕೈಗೊಳ್ಳಲು ವಿಶೇಷ ಅನುದಾನ ಬಿಡುಗಡೆ ಮಾಡಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿಕೊಡಲಾಗುವುದೇ ;

(ಇ) ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಬಂದಲ್ಲಿ, ಹಣ ಒದಗಿಸಲು ಕ್ರಮ ಕೈಗೊಳುವುದಾಗಿ ಕೇಂದ್ರ ಸಚಿವರು ತಿಳಿಸಿದಂತೆ, ಆಶ್ವಾಸನೆ ಆದಷ್ಟು ಬೇಗನೆ ಪ್ರಸ್ತಾವನೆಯನ್ನು ಕಳುಹಿಸಿ ಕೊಡಲಾಗುವುದೇ ?

F-8 B/B

## ಆರ್ಥಿಕ ಮುಗ್ಗಟ್ಟಿನಿಂದ ತೊಂದರೆ ಅನುಭವಿಸುತ್ತಿರುವ ಬೆಳಗಾವಿ ಮಾಹೇಶ್ವರಿ ಅಂಧ ಮಕ್ಕಳ ಶಾಲೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೫೩೩ (೨೮೭೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯಲ್ಲಿ ಇರುವ ಮಾಹೇಶ್ವರಿ ಅಂಧ ಮಕ್ಕಳ ಶಾಲೆಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರತಿಯೊಬ್ಬ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ಎಷ್ಟು ಹಣ ಕೊಡಲಾಗುತ್ತಿದೆ ;

(ಆ) ಸರ್ಕಾರ ಬಿಡುಗಡೆ ಮಾಡಿದ ಹಣ ಯಾವುದಕ್ಕೂ ಸಾಕಾಗುತ್ತಿಲ್ಲವೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಹಾಗಿದ್ದಲ್ಲಿ, ಎಸ್.ಸಿ.ಎಸ್.ಟಿ. ಹಾಗೂ ಬಿ.ಸಿ.ಎಂ. ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ ಕೊಡುವಂತೆ ಇವರಿಗೂ ಅಷ್ಟೇ ಹಣ ಕೊಡಲಾಗುವುದೆ ;

(ಈ) ಆರ್ಥಿಕ ಮುಗ್ಗಟ್ಟಿನಿಂದ ಈ ಸಂಸ್ಥೆ ಸ್ಥಗಿತಗೊಳ್ಳದಂತೆ, ಹಾಗೂ ಉತ್ತೇಜನ ನೀಡಲು ಸರ್ಕಾರದವರು ಹೆಚ್ಚಿನ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವರೆ ;

(ಉ) ರಾಜ್ಯದಲ್ಲಿ ಎಷ್ಟು ಅಂಧ ಮಕ್ಕಳ ಶಾಲೆ ಇರುವವು ;

(ಊ) ಈ ಎಲ್ಲಾ ಶಾಲೆಗಳನ್ನು ಅನುದಾನಕ್ಕೊಳಪಡಿಸಲು ಕ್ರಮಕೈಗೊಳ್ಳಲಾಗುವುದೆ ;

(ಋ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಬೆಳಗಾವಿ, ಇವರಿಗೆ ಸ್ವತ: ಮಾಹೇಶ್ವರಿ ಅಂಧ ಮಕ್ಕಳ ಶಾಲೆಗೆ ಭೇಟಿ ಕೊಟ್ಟು ಅಲ್ಲಿ ಅತೀ ಅವಶ್ಯವಿರುವ ಮೂಲಭೂತ

ಸೌಲಭ್ಯಗಳನ್ನು ಒದಗಿಸಲು ಈ ವರ್ಷದ ಜಿಲ್ಲಾ ಪಂಚಾಯತಿಯ ಆಯವ್ಯಯದಲ್ಲಿ ಒದಗಿಸಲು ಹಾಗೂ ರಾಜ್ಯ ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಶಿಫಾರಸ್ಸು ಮಾಡಲು ಸೂಚಿಸಲಾಗುವುದೆ ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕ್ರಿಯಾ ಯೋಜನೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೫೩೪ (೨೮೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕ್ರಿಯಾ ಯೋಜನೆ ಅಡಿಯಲ್ಲಿ ಸನ್ ೨೦೧೩-೨೦೧೪ ಹಾಗೂ ೨೦೧೪-೨೦೧೫ನೇ ಸಾಲಿಗೆ ಎಷ್ಟು ಹಣ ಮೀಸಲಾಗಿದ್ದೀತು; ಹಾಗೂ ಎಷ್ಟು ಹಣ ಖರ್ಚಾಗಿರುವುದು ;

(ಆ) ಈ ಸಾಲುಗಳಲ್ಲಿರುವ ಯಾವ-ಯಾವ ಕಾರ್ಯಕ್ರಮ ತೆಗೆದುಕೊಳ್ಳುವುದಾಗಿ ಘೋಷಿಸಲಾಗಿದ್ದೀತು ; ಹಾಗೂ ಯಾವ ಕಾರ್ಯಕ್ರಮ ತೆಗೆದುಕೊಳ್ಳಲಾಗಿದೆ ;

(ಇ) ಈ ಸಾಲುಗಳಲ್ಲಿ ನಿರಂತರವಾಗಿ ತೆಗೆದುಕೊಳ್ಳುವ ಯಾವ ಕಾರ್ಯಕ್ರಮ ಘೋಷಿಸಲಾಗಿದ್ದೀತು ; ಹಾಗೂ ಅವುಗಳಿಗೆ ಯಾವ-ಯಾವ ಕಾರ್ಯಕ್ರಮಕ್ಕೆ ಎಷ್ಟು-ಎಷ್ಟು ಹಣ ಬಿಡುಗಡೆ ಮಾಡಿದೆ ; ಮಾಡದಿದ್ದಲ್ಲಿ, ಏಕೆ ಬಿಡುಗಡೆ ಮಾಡಿರುವುದಿಲ್ಲ ;

(ಈ) ಸನ್ ೨೦೧೨-೨೦೧೩ನೇ ಸಾಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕ್ರಿಯಾ ಯೋಜನೆಯಲ್ಲಿ ಧನ ಸಹಾಯ ಶ್ರೀ ಹಾನಗಲ್

ಕುಮಾರ ಸ್ವಾಮಿಗಳ ಸಮಗ್ರ ಕೃತಿ ಮುದ್ರಣ ರೂ. ೩೦.೦೦ ಲಕ್ಷ (ಶಿವಯೋಗ ಮಂದಿರಕ್ಕೆ) ಘೋಷಿಸಿದ ಸಂಗತಿ ನಿಜವೆ ; ಈ ಹಣ ಬಿಡುಗಡೆ ಆಗದೇ ಇದ್ದ ಸಂಗತಿ ನಿಜವೇ ; ಹಾಗಿದ್ದಲ್ಲಿ, ಈ ಹಣ ಬಿಡುಗಡೆಗಾಗಿ ಸನ್ ೨೦೧೫-೨೦೧೬ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಸೇರಿಸಿ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ನಾಡೋಜ ಶ್ರೀ ಏಣಗಿ ಬಾಳಪ್ಪನವರ ಹೆಸರಿನಿಂದ ಬೆಳಗಾವಿಯಲ್ಲಿ ಕರ್ನಾಟಕ ರಂಗ ಉತ್ತೇಜನ ಸಹಕಾರಿ ಸಂಘ ಬೆಳಗಾವಿ ಈ ಸಂಸ್ಥೆಗೆ ಆರ್ಥಿಕ ಸಹಾಯವನ್ನು ಸನ್ ೨೦೧೨-೨೦೧೩ನೇ ಸಾಲಿನಲ್ಲಿ ಎರಡು ಲಕ್ಷ ರೂ ಒದಗಿಸಿದ ಸಂಗತಿ ನಿಜವೆ ;

(ಊ) ಈ ಸಂಘ ಉತ್ತರ ಕರ್ನಾಟಕದಲ್ಲಿ ನಾಟ್ಯ ಕಲೆಯನ್ನು ಉಳಿಸಲು ಹಾಗೂ ವಿದ್ಯಾರ್ಥಿಗಳಿಗೆ ನಾಟ್ಯ ಕಲಿಸುತ್ತಿರುವುದರಿಂದ ಮೂರು ಲಕ್ಷ ರೂಗಳನ್ನು ಸನ್ ೨೦೧೫-೨೦೧೬ರ ಸಾಲಿನ ಕ್ರಿಯಾ ಯೋಜನೆಯಲ್ಲಿ ಒದಗಿಸಲು ಕ್ರಮ ಕೈಗೊಳ್ಳಲಾಗುವುದೆ ;

(ಋ) ಶ್ರೀ ಹಾನಗಲ್ ಕುಮಾರ ಸ್ವಾಮಿಗಳ ೧೫೦ನೇ ಜಯಂತಿ ನಿಮಿತ್ತವಾಗಿ ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಸಾಂಸ್ಕೃತಿ ಕಾರ್ಯಕ್ರಮ ನಡೆಸಲು ಮಾತ್ರ ಸನ್ ೨೦೧೫-೨೦೧೬ನೇ ಸಾಲಿನಲ್ಲಿ ಎರಡು ಲಕ್ಷ ರೂಗಳನ್ನು ಕ್ರಿಯಾ ಯೋಜನೆಯಲ್ಲಿ ಸೇರಿಸಲು ಕ್ರಮ ಕೈಗೊಳ್ಳಲಾಗುವುದೆ ?

## ಅಂಗನವಾಡಿ ಮಕ್ಕಳು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೨೫೩೫ (೨೮೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆ, ತುರುವೇಕೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ, ಬರುವ ಒಟ್ಟು ಅಂಗನವಾಡಿ ಸಂಖ್ಯೆ ಎಷ್ಟು ;

(ಆ) ಸದರಿ ಪ್ರತಿ ಅಂಗನವಾಡಿಗಳಲ್ಲಿ ಕಳೆದ ೫ ವರ್ಷಗಳಿಂದ ಇರುವ ಮಕ್ಕಳೆಷ್ಟು ; ಅಲ್ಲಿರುವ ಸಿಬ್ಬಂದಿ ವರ್ಗವೆಷ್ಟು ; (ಲಿಂಗಾವಾರು ವಿವರ ನೀಡುವುದು)

(ಇ) ಮಕ್ಕಳಲ್ಲಿ ಅಪೌಷ್ಠಿಕತೆಯನ್ನು ಗುರುತಿಸಲು ಇರುವ ಮಾನದಂಡವೇನು ; ಮಕ್ಕಳ ಅಪೌಷ್ಠಿಕತೆ ನಿವಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಗ್ರಾಮೀಣ ಮಕ್ಕಳ ಜ್ಞಾನ ಸಾಮರ್ಥ್ಯ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೨೫೩೬ (೨೮೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣ ಪ್ರದೇಶಗಳ ಶಾಲೆಯಲ್ಲಿ ಕಲಿಯುತ್ತಿರುವ ಮಕ್ಕಳ ಜ್ಞಾನ ಸಾಮರ್ಥ್ಯವನ್ನು ಪಟ್ಟಣಗಳ ಮಕ್ಕಳ ಜ್ಞಾನ, ಸಾಮರ್ಥ್ಯಕ್ಕೆ ಸರಿಗಟ್ಟುವ ನಿಟ್ಟಿನಲ್ಲಿ ಸರ್ಕಾರ ರೂಪಿಸಿರುವ ಸುಧಾರಿತ ಯೋಜನೆಗಳೇನು ;

(ಆ) ಈವರೆಗೆ ಶೇಕಡಾವಾರು ಎಷ್ಟು ಪ್ರಮಾಣದಲ್ಲಿ ಗ್ರಾಮೀಣ ವಿದ್ಯಾಭ್ಯಾಸ ಸುಧಾರಿಸಿದೆ ? (ವಿವರಿಸುವುದು)

## ಶಿಕ್ಷಕರ ಭೌದ್ಧಿಕ ಸಾಮರ್ಥ್ಯ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೨೫೩೭ (೨೮೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬದಲಾಗುತ್ತಿರುವ ಕಾಲಧರ್ಮಕ್ಕನುಗುಣವಾಗಿ ಸರ್ಕಾರಿ ಶಾಲಾ ಶಿಕ್ಷಕರ ಭೌದ್ಧಿಕ ಸಾಮರ್ಥ್ಯ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಸುಧಾರಿತ ಬೋಧನಾ ಕ್ರಮಗಳೇನು ;

(ಆ) ಈವರೆಗೆ ಯಾವ ಯಾವ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗಿದೆ ? (ವಿವರ ನೀಡುವುದು)

## ಶಾಲಾ ಮಕ್ಕಳ ಮೇಲೆ ದೌರ್ಜನ್ಯ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೨೫೩೮ (೨೮೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲೆಗಳಲ್ಲಿ ಮುಗ್ಧ ಮಕ್ಕಳ ಮೇಲೆ ಅತ್ಯಾಚಾರ ಪ್ರಕರಣಗಳು ಮುಂದೆ ಮರುಕಳಿಸದಂತೆ ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಮುನ್ನೆಚ್ಚರಿಕಾ ಕ್ರಮಗಳೇನು ;

(ಆ) ಸರ್ಕಾರವು ಈ ವಿಷಯವಾಗಿ ಶಾಲೆಗಳಿಗೆ ನೀಡಿರುವ ಮಾರ್ಗದರ್ಶನ, ನೀತಿ ನಿಯಮಗಳೇನು ?

## ಗ್ರಾಮೀಣ ರಸ್ತೆಗಳು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೨೫೩೯ (೨೮೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿಗೆ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಸ್ತೆ ಕಾಮಗಾರಿಗಳಿಗೆ ಬಿಡುಗಡೆಯಾದ ಒಟ್ಟು ಹಣವೆಷ್ಟು ;

(ಆ) ಯಾವ ಯಾವ ರಸ್ತೆ ಕಾಮಗಾರಿಗಳು ಪೂರ್ಣಗೊಂಡಿವೆ ; (ವಿವರ ನೀಡುವುದು)

(ಇ) ೨೦೧೫–೧೬ನೇ ಸಾಲಿಗೆ ಮಂಜೂರಾಗಿರುವ ಯೋಜನೆಗಳು ಯಾವುವು ?

## ಜನವಸತಿ ಗ್ರಾಮಗಳು

**ಶ್ರೀ ನಾರಾಯಣಸಾ ಕೆ. ಭಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು ) :–**

೨೫೪೦ (೨೭೩೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯ ಜನವಸತಿ ಗ್ರಾಮಗಳೆಷ್ಟು ;

(ಆ) ಬಾಗಲಕೋಟೆ ನಗರದಲ್ಲಿ ವಾಸಿಸುವ ಕುಟುಂಬಗಳ ಸಂಖ್ಯೆ ಎಷ್ಟು ;

(ಇ) ಕಡ್ಡಾಯ ಶೌಚಾಲಯ ಸಂಬಂಧ ನ್ಯಾಯಾಲಯದ ನಿರ್ದೇಶನ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ನಿರ್ದೇಶನಗಳನ್ನು ಪಾಲಿಸಲಾಗಿದೆಯೇ ?

## ಗ್ರಾಮೀಣ ರಸ್ತೆಗಳಿಗೆ ಮೀಸಲಿಟ್ಟ ಹಣ

**ಶ್ರೀ ನಾರಾಯಣಸಾ ಕೆ. ಭಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು ) :-**

೨೫೪೧ (೨೭೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಹಗೂ ವಿಜಯಪುರ ನಗರದಲ್ಲಿ ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖಾ ವತಿಯಿಂದ ೨೦೧೨-೧೩, ೨೦೧೩-೧೪ ಸಾಲಿನಲ್ಲಿ ಗ್ರಾಮೀಣ ರಸ್ತೆಗಳಿಗಾಗಿ ಮೀಸಲಿಟ್ಟ ಹಣವೆಷ್ಟು ;

(ಆ) ಬಾಗಲಕೋಟೆ ಹಾಗೂ ವಿಜಯಪುರ ನಗರದಲ್ಲಿ ಸುಸ್ಥಿತಿಯಲ್ಲಿರುವ ಗ್ರಾಮೀಣ ರಸ್ತೆಗಳ ಉದ್ದವೆಷ್ಟು ;

(ಇ) ಬಾಗಲಕೋಟೆ ಹಾಗೂ ವಿಜಯಪುರ ನಗರದಲ್ಲಿ ಎಲ್ಲಾ ಗ್ರಾಮೀಣ ಅಭಿವೃದ್ಧಿ ರಸ್ತೆಗಳನ್ನು ಸುಸ್ಥಿತಿಗೆ ತರಲು ಬೇಕಾಗುವ ಹಣವೆಷ್ಟು ? (ದುಸ್ಥಿತಿಯಲ್ಲಿರುವ ಗ್ರಾಮೀಣ ರಸ್ತೆಗಳ ವಿವರಗಳನ್ನು ತಾಲ್ಲೂಕುವಾರು ನೀಡುವುದು)

## ೧೦೦ ವಿದ್ಯಾರ್ಥಿಗಳಿಗಿಂತ ಕಡಿಮೆ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :-**

೨೫೪೨ (೨೮೫೯) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ೧೦೦ ವಿದ್ಯಾರ್ಥಿಗಳಿಗಿಂತ ಕಡಿಮೆ ಇರುವ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರಗಳೊಡನೆ)

(ಇ) ಸದರಿ ಕಾಲೇಜುಗಳಿಗೆ ಯಾವ ಸಾಲಿನಿಂದ ಪ್ರಾರಂಭವಾಗಿವೆ ;

(ಈ) ಸದರಿ ಕಾಲೇಜುಗಳಿಗೆ ಕೊರತೆ ಇರುವ ಸಿಬ್ಬಂದಿ ಹಾಗೂ ಎಲ್ಲಾ ಮೂಲಭೂತ ಸೌಲಭ್ಯಗಳು ಯಾವುವು ; (ವಿವರಗಳೊಡನೆ)

(ಉ) ಸದರಿ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :-**

೨೫೪೩ (೨೮೬೦) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ)

(ಆ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರು ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ)

(ಇ) ಯಾವ ಸಮಯದಿಂದ ಖಾಲಿ ಇವೆ ; ಸದರಿ ಹುದ್ದೆಗಳನ್ನು ಬಹಳ ದೀರ್ಘ ಕಾಲದಿಂದ ಬಡ್ತಿ ಮೂಲಕ ತುಂಬದಿರಲು ಕಾರಣಗಳೇನು ; (ವಿವರಗಳೊಡನೆ)

(ಈ) ಸದರಿ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲಾಗುವುದು ?

## ಯು.ಜಿ.ಸಿ. ಪರಿಷ್ಕೃತ ವೇತನ ಬಾಕಿ ಮೊತ್ತ ಪಾವತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :-**

೨೫೪೪ (೨೮೬೧) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಅನುದಾನಿತ ಪ್ರಥಮ ದರ್ಜೆ ಮತ್ತು ಬಿ.ಇಡಿ. ಕಾಲೇಜುಗಳ ಹಾಗೂ ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜುಗಳ ಎಷ್ಟು ಅಧ್ಯಾಪಕರುಗಳಿಗೆ ೦೧-೦೧-೨೦೦೬ರ ಯು.ಜಿ.ಸಿ. ಪರಿಷ್ಕೃತ ವೇತನ ಸಂಬಂಧ ಬಾಕಿ ಮೊತ್ತವನ್ನು ನೀಡಬೇಕಾಗಿದೆ ; (ವರ್ಗವಾರು ವಿವರಗಳೊಡನೆ)

(ಆ) ಸದರಿ ಅಧ್ಯಾಪಕರಿಗೆ ಎಷ್ಟು ತಿಂಗಳ, ಎಷ್ಟು ಬಾಕಿ ಮೊತ್ತವನ್ನು ಪಾವತಿಸಬೇಕಾಗಿದೆ ;

(ಇ) ಬಾಕಿ ಮೊತ್ತ ಪಾವತಿಸುವಲ್ಲಿ ಧೀರ್ಘ ಕಾಲದ ವಿಳಂಬ ಉಂಟಾಗಲು ಕಾರಣಗಳೇನು ;

(ಈ) ಬಾಕಿ ಮೊತ್ತ ಪಾವತಿ ಮಾಡಲು ಸರ್ಕಾರ ಇದುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತ ಪಾವತಿಸಲಾಗುವುದು ?

# ಅನುದಾನ ರಹಿತ ಶಾಲಾ ಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತ ಸವಲತ್ತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :-**

೨೫೪೫ (೨೮೫೮) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೯೯೫ರ ನಂತರ ಪ್ರಾರಂಭವಾಗಿರುವ ಖಾಸಗಿ ಅನುದಾನ ರಹಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪ.ಪೂ. ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ಮಕ್ಕಳಿಗೆ ಸರ್ಕಾರದ ಯಾವುದೇ ಉಚಿತ ಸವಲತ್ತುಗಳನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಶಾಲೆಗಳಲ್ಲಿ, ಉತ್ತಮ ಫಲಿತಾಂಶ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ವೇತನಾನುದಾನ ನೀಡಲು ಸರ್ಕಾರ ಚಿಂತಿಸುವುದೇ ;

(ಈ) ಹಾಗಾದರೆ, ಯಾವ ಸಾಲಿನಿಂದ ಯಾವ ಸಾಲಿನವರೆಗೆ ಪ್ರಾರಂಭವಾಗಿರುವ ಶಿಕ್ಷಣ ಸಂಸ್ಥೆಯ ನೌಕರರಿಗೆ ವೇತನಾನುದಾನ ನೀಡಲು ಸರ್ಕಾರ ಯೋಜನೆ ರೂಪಿಸಿದೆಯೇ ; (ಪೂರ್ಣ ವಿವರಗಳೊಡನೆ)

(ಉ) ಸದರಿ ಸಂಸ್ಥೆಗಳಲ್ಲಿ ಅಭ್ಯಾಸ ಮಾಡುವ ಬಡ ವಿದ್ಯಾರ್ಥಿಗಳಿಗೆ ಸರ್ಕಾರ ಉಚಿತ ಸವಲತ್ತುಗಳನ್ನು ವಿತರಿಸಲು ಸರ್ಕಾರ ಕಾರ್ಯಕ್ರಮ ರೂಪಿಸಿದೆಯೇ ;

(ಊ) ಹಾಗಾದರೆ, ಯಾವ ಕಾಲಮಿತಿಯಲ್ಲಿ ಯೋಜನೆಯನ್ನು ಜಾರಿಗೆ ತರಲಾಗುವುದು ?

## ಉಪನ್ಯಾಸಕರ ಬಡ್ತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :-**

೨೫೪೬ (೨೮೫೭) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಬಡ್ತಿ ಮೂಲಕ ಭರ್ತಿ ಮಾಡಬೇಕಾಗಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಯಾವ ಸಮಯದಿಂದ ಸದರಿ ಹುದ್ದೆಗಳು ಖಾಲಿ ಇವೆ ; (ವಿಷಯವಾರು ವಿವರಗಳೊಡನೆ)

(ಆ) ಪ್ರೌಢಶಾಲಾ ಸಹ ಶಿಕ್ಷಕರಿಂದ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡಲು ಪ್ರಸಕ್ತ ಅನುಸರಿಸುತ್ತಿರುವ ವೃಂದ ಮತ್ತು ನೇಮಕಾತಿ ನಿಯಮಗಳೇನು ; (ವಿವರಗಳೊಡನೆ)

(ಇ) ಸದರಿ ನಿಯಮ ಎಂದಿನಿಂದ ಜಾರಿಗೆ ತರಲಾಗಿದೆ ;

(ಈ) ಪ್ರಸಕ್ತ ನಿಯಮದಿಂದಾಗಿ ಬಡ್ತಿ ಪಡೆಯುವರಿಗೆ ತುಂಬಾ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಾದರೆ, ಸದರಿ ಸಮಸ್ಯೆಗೆ ಪರಿಹಾರ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು